## CEC ಜ್ಞಾನೇಶ್ ಕುಮಾರ್‌ರನ್ನು ತಕ್ಷಣ ವಜಾಗೊಳಿಸಿ, ರಾಷ್ಟ್ರಪತಿಗೆ ಸಿದ್ದರಾಮಯ್ಯ ಆಗ್ರಹ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಭಾರತೀಯ ಚುನಾವಣಾ ಆಯೋಗದ ಕಾರ್ಯವೈಖರಿ ಮತ್ತು ಸ್ವಾಯತ್ತತೆಯ ಕುರಿತು ಗಂಭೀರ ಕಳವಳ ವ್ಯಕ್ತಪಡಿಸಿರುವ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್‌ರನ್ನು ವಜಾಗೊಳಿಸಬೇಕು ಹಾಗೂ ಈ ವಿಷಯದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಮಧ್ಯಪ್ರವೇಶಿಸಬೇಕು ಎಂದು ಒತ್ತಾಯಿಸಿದ್ದಾರೆ. ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ 'ಫ್ರೀಡಂ ಪಾರ್ಕ್‌ನಲ್ಲಿ ನಡೆದ ಕಾಂಗ್ರೆಸ್ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಸಿದ್ದರಾಮಯ್ಯ, ಚುನಾವಣಾ ಆಯೋಗವು ಸ್ವತಂತ್ರವಾಗಿ, ನಿಷ್ಪಕ್ಷಪಾತವಾಗಿ ಮತ್ತು ಪಾರದರ್ಶಕವಾಗಿ ಚುನಾವಣೆಗಳನ್ನು ನಡೆಸುವ ಸಾಂವಿಧಾನಿಕ ಸಂಸ್ಥೆಯಾಗಿ ಕಾರ್ಯನಿರ್ವಹಿಸಬೇಕಿದೆ. ಅದು ಕೇಂದ್ರ ಸರ್ಕಾರದ ಇಚ್ಛೆಯಂತೆ ಕಾರ್ಯನಿರ್ವಹಿಸುವ ಬದಲು ಸಂವಿಧಾನಕ್ಕೆ ಬದ್ಧವಾಗಿರಬೇಕು ಎಂದರು.ಚುನಾವಣಾ ಆಯೋಗದ ಸದಸ್ಯರು ಸಾಂವಿಧಾನಿಕ ನಿಬಂಧನೆಗಳಿಗೆ ವಿರುದ್ಧವಾಗಿ ವರ್ತಿಸಿರುವುದು ಕಂಡುಬಂದರೆ ರಾಷ್ಟ್ರಪತಿಗಳು ಮಧ್ಯಪ್ರವೇಶಿಸಬೇಕು. ಅಲ್ಲದೆ, ನಿಯಮ ಉಲ್ಲಂಘನೆ ಸಾಬೀತಾದರೆ ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು ಎಂದೂ ಅವರು ಆಗ್ರಹಿಸಿದರು.ಕಳೆದ 10 ತಿಂಗಳುಗಳಲ್ಲಿ ಚುನಾವಣಾ ಆಯೋಗದ ಹಲವು ನಿರ್ಧಾರಗಳ ಬಗ್ಗೆ ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು ಆಕ್ಷೇಪಣೆಗಳನ್ನು ವ್ಯಕ್ತಪಡಿಸಿದ್ದರು ಎಂಬ ವರದಿಗಳನ್ನು ಸಿದ್ದರಾಮಯ್ಯ ಪ್ರಸ್ತಾಪಿಸಿದರು.ಈ ಬೆಳವಣಿಗೆಗಳು ಚುನಾವಣಾ ಆಯೋಗದ ಸ್ವಾತಂತ್ರ್ಯದ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿವೆ. ಈ ಆರೋಪಗಳು ಸಾಬೀತಾದರೆ ಮುಖ್ಯ ಚುನಾವಣಾ ಆಯುಕ್ತರು ತಮ್ಮ ಹುದ್ದೆಯಲ್ಲಿ ಮುಂದುವರೆಯಬಾರದು. ಭಾರತೀಯ ಚುನಾವಣಾ ಆಯೋಗದ ಕಾರ್ಯನಿರ್ವಹಣೆಯಲ್ಲಿ ಹೆಚ್ಚಿನ ಪಾರದರ್ಶಕತೆ ಅಗತ್ಯವಿದೆ ಎಂದು ಆಗ್ರಹಿಸಿದರು.

## ನಟ ದರ್ಶನ್ ಗೆಳತಿ ಪವಿತ್ರಾ ಗೌಡಗೆ ಬಿಗ್ ಶಾಕ್; ಜಾಮೀನು ಅರ್ಜಿ ವಜಾ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಪಾಲಾಗಿರುವ ನಟ ದರ್ಶನ್ ಅವರ ಗೆಳತಿ ಪವಿತ್ರಾ ಗೌಡ ಅವರ ಜಾಮೀನು ಅರ್ಜಿಯನ್ನು ಕೋರ್ಟ್ ವಜಾಗೊಳಿಸಿದೆ. ಜಾಮೀನು ಕೋರಿ ಪ್ರಕರಣದ ಪ್ರಮುಖ ಆರೋಪಿ ಪವಿತ್ರಾ ಗೌಡ ಸಲ್ಲಿಸಿದ್ದ ಅರ್ಜಿಯನ್ನು 59 ಸಿಸಿಎಚ್ ನ್ಯಾಯಾಧೀಶರಾದ ಸುಜಾತಾ ಎಂ ಸಾಂಬ್ರಾಣಿ ಅವರು ಇಂದು ವಜಾಗೊಳಿಸಿ ಆದೇಶ ಹೊರಡಿಸಿದ್ದಾರೆ.

ಪ್ರಮುಖ ಸಾಕ್ಷಿಗಳ ವಿಚಾರಣೆ ಮುಗಿದಿರುವುದನ್ನು ಪರಿಗಣಿಸುವಂತೆ ಪವಿತ್ರಾ ಗೌಡ ಪರ ಹಿರಿಯ ವಕೀಲ ಬಾಲನ್ ಹಾಗೂ ವಕೀಲ ನಾರಾಯಣಸ್ವಾಮಿ ವಾದ ಮಾಡಿದ್ದರು. ಅಲ್ಲದೆ ಪವಿತ್ರಾ ಗೌಡ ಅವರು ಸಿಂಗಲ್ ಮದರ್ ಆಗಿದ್ದು, ಮಗಳ ಶಿಕ್ಷಣ, ಆರೋಗ್ಯ, ಮಗಳ ಭವಿಷ್ಯವನ್ನು ಪರಿಗಣಿಸಿ ಮಾನವೀಯ ನೆಲೆಯಲ್ಲಿ ಪವಿತ್ರಾಗೌಡಗೆ ಜಾಮೀನು ನೀಡಬೇಕು ಎಂದು ಮನವಿ ಮಾಡಿದ್ದರು.

ಆದರೆ ಪವಿತ್ರಾ ಗೌಡ ಪರ ವಕೀಲರ ವಾದವನ್ನು ತಿರಸ್ಕರಿಸಿದ ಸುಜಾತಾ ಮಡಿವಾಳಪ್ಪ ಸಾಂಬ್ರಾಣಿ ಅವರು, ಜಾಮೀನು ನಿರಾಕರಿಸಿದ್ದಾರೆ.

## ರೈತರ ಪರವಾಗಿ ನಾವು ನಿಲ್ಲುತ್ತೇವೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬಿಡದಿ ಟೌನ್ಶಿಪ್ ವಿರೋಧಿಸಿ ''ಕಳೆದ ಐದು ದಿನಗಳಿಂದ ಅಮರಣಾಂತ ಉಪವಾಸ ಮಾಡುತ್ತಿದ್ದ ರೈತರ ಮೇಲೆ ಏಕಾಏಕಿ ಸುಮೋಟೊ ಕೇಸ್ ಹಾಕಲಾಗಿದೆ. ಐದು ದಿನ ಪ್ರತಿಭಟನೆ ಮಾಡುವಾಗ ಏಕೆ ಮೌನವಾಗಿದ್ದಿರಿ ಹೋರಾಟ ಹತ್ತಿಕ್ಕಲು ಈ ಪ್ರಯತ್ನ. ನಾವು ರೈತರ ಪರವಾಗಿಯೇ ನಿಲ್ಲುತ್ತೇವೆ ಎಂದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಹೇಳಿದರು.

ಜೆಪಿ ಭವನದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಬಿಡದಿ ರೈತರ ಮೇಲೆ ದಾಖಲಿಸಿರುವ ಎಫ್‌ಐಆರ್ ಸಂಬಂಧ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ರೈತರಿಗೆ ವಿಶ್ವಾಸ ಮೂಡಿಸುವ ನಿಟ್ಟಿನಲ್ಲಿ ರೈತ ಸ್ವಾಭಿಮಾನ ಯಾತ್ರೆ ಮಾಡುತ್ತಿದ್ದಾರೆ ರೈತರ ಜೊತೆ ಬೆಂಬಲವಾಗಿ ನಿಲ್ಲಲು ನಾವು ಯಾವಾಗಲೂ ಸಿದ್ಧ. ನೀವು ಜನರ ಪರವಾಗಿ ಕೆಲಸ ಮಾಡುತ್ತೀರಾ ನೀವೇ ಇನ್ನೂ ಹತ್ತು ವರ್ಷ ಅಧಿಕಾರದಲ್ಲಿರಿ, ನಾನೇ 50 ಸಾವಿರ ಜನರನ್ನು ಸೇರಿಸಿ ನಿಮಗೆ ಸನ್ಮಾನ ಮಾಡುತ್ತೇನೆ. ಆದರೆ ದುಡ್ಡು ಹೊಡೆಯಲು ಮುಂದಾದರೆ ಅಡ್ಡಗಾಲು ಹಾಕುತ್ತೇನೆ' ಎಂದು ಕುಮಾರಸ್ವಾಮಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಎಚ್ಚರಿಕೆ ನೀಡಿದರು

ಕೊಟ್ಟಿರುವ ಅಧಿಕಾರ ಕಳ್ಳಕಾಕರನ್ನು ರಕ್ಷಣೆ ಮಾಡಲು ಅಲ್ಲ. ನಾನು ಹಿಟ್ ಅಂಡ್ ರನ್ ಮಾಡುವುದಿಲ್ಲ. ಸ್ವಲ್ಪ ತಡೆಯಿರಿ, ಎಲ್ಲಕ್ಕೂ ಒಂದು ಕಾಲ ಬರುತ್ತದೆ. ಸ್ಯಾಚುರೇಷನ್ ಪಾಯಿಂಟ್ ತಲುಪಿದ್ದೀರಿ, ಇನ್ನೇನು ಕೊನೆಯಾಗುತ್ತದೆ. ಕಾಯುತ್ತಿರಿ. ನನ್ನ ಬಳಿ ಇರುವ ವಿಚಾರಗಳನ್ನು ಕೊಟ್ಟರೆ ದಿನಕ್ಕೊಂದು ಸುದ್ದಿಯಾಗುತ್ತದೆ'' ಎಂದು ಕುಮಾರಸ್ವಾಮಿ ಎಚ್ಚರಿಕೆ ನೀಡಿದರು.

# ಹತಾಶೆಯಿಂದ ರಾಹುಲ್ ಚು.ಆಯೋಗದ ವಿರುದ್ಧ ಆರೋಪ-ಅಶೋಕ್

### ಫೈನಾನ್ಸ್ ದಾಖಲೆ ಲೀಕ್ ಆಗಿದ್ದರೆ ಡಿ.ಕೆ. ಶಿವಕುಮಾರ್ ಗೆಟ್ ಔಟ್ ಆಗಬೇಕು. ಚುನಾವಣಾ ಆಯೋಗಕ್ಕೆ ಗೋ ಅವೇ ಎಂದು ಹೇಳುವವರು

• ಉದಯವಾಹಿನಿ, ಬೆಂಗಳೂರು

1 ಎವಿಎಂ ಅನ್ನು ತಂದವರೇ ರಾಹುಲ್ ಗಾಂಧಿ
2 ತಂದೆಯ ಮೇಲೆಯೇ ನಂಬಿಕೆ ಇಲ್ಲದಂತಾಗಿದೆ
3 ಯಾವುದೇ ಸಂಸ್ಥೆಯ ಮೇಲೂ ನಂಬಿಕೆ ಇಡುತ್ತಿಲ್ಲ

ಕಾಂಗ್ರೆಸ್ ಗೆಲ್ಲಲು ಸಾಧ್ಯವಿಲ್ಲ ಎಂಬ ಭ್ರಮನಿರಸನದಿಂದ ರಾಹುಲ್ ಗಾಂಧಿ ಅವರು ನ್ಯಾಯಾಲಯ, ಜಾರಿ ನಿರ್ದೇಶನಾಲಯ (ಇಡಿ), ಸಿಬಿಐ ಮತ್ತು ಚುನಾವಣಾ ಆಯೋಗದ ವಿರುದ್ಧ ಮಾತನಾಡುವ ಚಟಕ್ಕೆ ಬಲಿಯಾಗಿದ್ದಾರೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಆರೋಪಿಸಿದರು.

ಬಿಜೆಪಿ ಕಚೇರಿಯಲ್ಲಿ ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಜೊತೆ ಜಂಟಿ ಸುದ್ದಿಗೋಷ್ಠಿ ನಡೆಸಿ, ಮಾತನಾಡಿದ ಅವರು ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು

ಚುನಾವಣಾ ಆಯೋಗವು ಈಗಾಗಲೇ ತನ್ನ ಪತ್ರಿಕಾಗೋಷ್ಠಿಯಲ್ಲಿ ಎಲ್ಲವನ್ನೂ ಸ್ಪಷ್ಟಪಡಿಸಿದೆ ಎಂದು ಹೇಳಿದರು. ಎವಿಎಂ ಬಗ್ಗೆ ಕಾಂಗ್ರೆಸ್ ಸುಳ್ಳು ಪ್ರಚಾರ ಮಾಡುತ್ತಿದೆ ಎಂದು ಆರೋಪಿಸಿದ ಅಶೋಕ್, ಎವಿಎಂ ಅನ್ನು ತಂದವರೇ ರಾಹುಲ್‌ಗಾಂಧಿ ಅವರ ತಂದೆ ರಾಜೀವ್ ಗಾಂಧಿ. ಅದನ್ನೇ ಬ್ಲಾಕ್ ಬಾಕ್ಸ್ ಎಂದು ಕರೆಯುವ ಮೂಲಕ ರಾಹುಲ್ ತಮ್ಮ ತಂದೆಯ ಮೇಲೆಯೇ ನಂಬಿಕೆ ಇಲ್ಲದಂತಾಗಿದೆ ಎಂದು ಟೀಕಿಸಿದರು. ಸುಪ್ರೀಂಕೋರ್ಟ್ ಈಗಾಗಲೇ ಎವಿಎಂ ಸರಿ ಇದೆ ಎಂದು ಹೇಳಿದ್ದು, ಕಾಂಗ್ರೆಸ್ ಯಾವುದೇ ಸಂಸ್ಥೆಯ ಮೇಲೂ ನಂಬಿಕೆ ಇಡುತ್ತಿಲ್ಲ ಎಂದು ಪ್ರಶ್ನಿಸಿದರು.

ಬಾಂಗ್ಲಾದೇಶದ ಎರಡು ಕೋಟಿ ಜನ ನಮಗೆ ವೋಟ್ ಹಾಕಿ ಗೆಲ್ಲಿಸುತ್ತಿದ್ದರು ಅವರನ್ನು ಕಳುಹಿಸಿದ್ದು ಏಕೆ ಎಂದು ಕಾಂಗ್ರೆಸ್ ಕೇಳಲಿ ಎಂದರು ಕಾಂಗ್ರೆಸ್‌ನ ಚುನಾವಣಾ ಗಿಮಿಕ್ಸ್ ಗೆ ನಾವು ಹೆದರಲ್ಲ.ಮುಂದಿನ ಯಾವ


ಉದಯವಾಹಿನಿ ಚಿತ್ರ

ಚುನಾವಣೆಯೂ ಕಾಂಗ್ರೆಸ್ ಪರ ಇಲ್ಲ.ಅವಮಾನ ಆಗಬಾರದು ಎಂದು ಈಗ ನಿರೀಕ್ಷಣಾ ಜಾಮೀನು ತಗೋತಿದ್ದಾರೆ. ಎಸ್‌ಐಟಿ ರಚನೆ ಮಾಡಿದರೂ ಕಾಂಗ್ರೆಸ್ ವಿರೋಧಿಸುತ್ತದೆ. ಆರ್ಟಿಕಲ್ 370, ತ್ರಿಬಲ್ ತಲಾಖ್ ರದ್ದು, ರಾಮಮಂದಿರ, ವಂದೇ ಮಾತರಂ ಎಲ್ಲದಕ್ಕೂ ಕಾಂಗ್ರೆಸ್ ವಿರೋಧ ಮಾಡುತ್ತದೆ ಎಂದು ಆರೋಪಿಸಿದ ಅವರು, 'ಸಲ್ಮಾನ್ ಖಾನ್, ಶಾರುಖ್ ಖಾನ್, ಆಮೀರ್ ಖಾನ್ ಅವರೆಲ್ಲ ಗಣೇಶ ಪೂಜೆ ಮಾಡುತ್ತಾರೆ. ರಾಹುಲ್ ಗಾಂಧಿಗೆ ದೇಶದ ಒಳ್ಳೆಯ ಮುಸ್ಲಿಮರಿಂದ ಅವರು ಕಲಿಯಬೇಕು ಎಂದು ಹೇಳಿದರು. ರಾಜ್ಯದಲ್ಲಿ ಹಣಕಾಸು ಇಲಾಖೆಯ ದಾಖಲೆಗಳು ಸೋರಿಕೆ ಆಗಿರುವ ವಿಚಾರವಾಗಿ ಮಾತನಾಡಿದ ಅಶೋಕ್, ಫೈನಾನ್ಸ್ ದಾಖಲೆ ಲೀಕ್ ಆಗಿದ್ದರೆ ಡಿ.ಕೆ. ಶಿವಕುಮಾರ್ ಗೆಟ್ ಔಟ್ ಆಗಬೇಕು. ಚುನಾವಣಾ ಆಯೋಗಕ್ಕೆ ಗೋ ಅವೇ ಎಂದು ಹೇಳುವವರು, ಇಲ್ಲಿ ಸಿಎಂ ಕೂಡ ಗೋ ಅವೇ ಆಗಬೇಕು'' ಎಂದು ಪರೋಕ್ಷವಾಗಿ ಡಿಕೆಶಿ ವಿರುದ್ಧ ಟೀಕೆ ಮಾಡಿದರು. ಬಿಡದಿ ಟೌನ್ ಶಿಪ್ ಹೋರಾಟ ವಿಚಾರದ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು ರೈತರ ಹೋರಾಟ ಸತ್ಯ ಇದೆರಿಯಲ್ ಎಸ್ಟೇಟ್ ಮಾಡಲು ಡಿಕೆಶಿ ಹೊರಟಿದ್ದು ಖಂಡನೀಯಬಿಜೆಪಿ ಸರ್ಕಾರ ಬಂದ್ರೆ ಬಿಡದಿ ಟೌನ್ ಶಿಪ್‌ಯೋಜನೆ ರದ್ದು ಮಾಡುತ್ತೇವೆ

ಇನ್ನೊಂದು ವರ್ಷ ಕಾಯೋಣರೈತರ ಜೊತೆ ನಮ್ಮನ್ನೂ ಜೈಲಿಗೆ ಕಳಿಸಿ, ನಾವು ಸಿದ್ದರಿದ್ದೇವೆ ಎಂದರು ಚಲವಾದಿ ಹೇಳಿಕೆ ಇದೇ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ರಾಹುಲ್ ಗಾಂಧಿ ಅವರ ಗ್ರಾಫ್ ಮೇಲೇಳ್ತಿಲ್ಲ ಅದಕ್ಕಾಗಿ ಎಸ್‌ಐಆರ್ ಬಗ್ಗೆ ತಲೆ ಕೆಡಿಸಿಕೊಂಡಿದ್ದಾರೆಕೇರಳದಲ್ಲಿ ಕಮ್ಯುನಿಷ್ಟ್ ನವರು ಬೋಗಸ್ ಓಟ್ ಹಾಕ್ತಿದ್ರುಎಸ್‌ಐಆರ್ ಆದಮೇಲೆ ಕಾಂಗ್ರೆಸ್ ಗೆದ್ದಿದೆ ಎಂದು ಅಲ್ಲಿನ ಕೈ ನಾಯಕರು ಹೇಳ್ತಿದಾರೆ

> ಕಾಂಗ್ರೆಸ್ ದೇಶದಲ್ಲಿ ಮುಳುಗುವ ಹಡಗು. ಎಂದು ಗೇಲಿ ಮಾಡಿದರು ಇದಲ್ಲದೆ, ಸರ್ಜಿಕಲ್ ಸ್ಟ್ರೈಕ್ ಅನ್ನು ಬೋಗಸ್ ಎಂದು ಹೇಳುವ ಮೂಲಕ ದೇಶದ ಸೈನಿಕರಿಗೆ ಕಾಂಗ್ರೆಸ್ ಅವಮಾನ ಮಾಡುತ್ತಿದೆ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. -ಆರ್. ಅಶೋಕ್

> ಕಸ್ತೂರಿ ರಂಗನ್ ವರದಿ ವಿಚಾರದಲ್ಲಿ ಸರ್ವಪಕ್ಷ ನಿಯೋಗದ ಜೊತೆ ನಾವು ಕೇಂದ್ರ ಸಚಿವರನ್ನು ಭೇಟಿ ಮಾಡುತ್ತಿದ್ದೇವೆ ಹೊರತು ಬರದ ವಿಚಾರದಲ್ಲಿ ಅಲ್ಲ ಎಂದು ಆರ್ ಅಶೋಕ್ ಸ್ಪಷ್ಟಪಡಿಸಿದರು ಬರದ ವಿಚಾರದಲ್ಲಿ ರೈತರಿಗೆ ಮೋಸ ಮಾಡಿದ್ದಾರೆ. ಹಾಗಾಗಿ ನಾವು ಬರದ ವಿಚಾರಕ್ಕೆ ನಿಯೋಗದ ಜೊತೆ ಹೋಗಲ್ಲ ಎಂದು ಹೇಳಿದರು -ಆರ್. ಅಶೋಕ್



## ಡಿಕೆಶಿ-ಸಿದ್ದರಾಮಯ್ಯ ದೆಹಲಿಗೆ ದೌಡು, ಚುನಾವಣಾ ಆಯೋಗದ ವಿರುದ್ಧ ಹೋರಾಟ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಸಿಡಬ್ಲ್ಯೂಸಿ) ಸಭೆಯಲ್ಲಿ ಭಾಗವಹಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ರಾಷ್ಟ್ರ ರಾಜಧಾನಿ ದೆಹಲಿಗೆ ತೆರಳಲಿದ್ದಾರೆ.

ಸೆಪ್ಟೆಂಬರ್ 29ರಂದು ನಡೆಯಲಿರುವ ಈ ಸಭೆಯಲ್ಲಿ ಚುನಾವಣಾ ಆಯೋಗ ಹಾಗೂ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕುರಿತ ವಿವಾದಗಳ ಬಗ್ಗೆ ಮಹತ್ವದ ಚರ್ಚೆ ನಡೆಯಲಿದೆ ಎಂದು ತಿಳಿದುಬಂದಿದೆ. ನವದೆಹಲಿಯಲ್ಲಿ ಸೆಪ್ಟೆಂಬರ್ 29ರಂದು ಸಿಡಬ್ಲ್ಯೂಸಿ ಸಭೆ ನಡೆಯಲಿದ್ದು, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಭೆಯ ಅಧ್ಯಕ್ಷತೆ ವಹಿಸುವ ನಿರೀಕ್ಷೆಯಿದೆ. ದೇಶದ ವಿವಿಧ ಭಾಗಗಳ ಹಿರಿಯ ಕಾಂಗ್ರೆಸ್ ನಾಯಕರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಸಭೆಯಲ್ಲಿ ಕರ್ನಾಟಕವನ್ನು ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಹಾಗೂ ಸಂಸದ ನಾಸಿರ್ ಹುಸೇನ್ ಪ್ರತಿನಿಧಿಸಲಿದ್ದಾರೆ.

ಇದೇ ವೇಳೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹಾಗೂ ಹಿರಿಯ ನಾಯಕ ಕೆ.ಎಚ್. ಮುನಿಯಪ್ಪ ಸಭೆಗೆ ತೆರಳುವ ಸಾಧ್ಯತೆ ಇಲ್ಲ ಎಂದು ತಿಳಿದುಬಂದಿದೆ. ಈ ಕುರಿತು ಪ್ರತಿಕ್ರಿಯಿಸಿದ ಮೊಯ್ಲಿ, 'ಹೌದು, ನಾನು ದೆಹಲಿಗೆ ತೆರಳುತ್ತಿದ್ದೇನೆ'' ಎಂದು ತಿಳಿಸಿದ್ದಾರೆ. ಚುನಾವಣಾ ಆಯೋಗದ ಕುರಿತಾಗಿ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆ ನಡೆಯುತ್ತಿರುವ ಬೆನ್ನಲ್ಲೇ ಈ ಸಭೆ ನಡೆಯುತ್ತಿದ್ದು, ಮಹತ್ವ ಪಡೆದುಕೊಂಡಿದೆ.

ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಎಸ್‌ಐಆರ್‌ಗೆ ಸಂಬಂಧಿಸಿದ ನಿರ್ಧಾರಗಳ ಬಗ್ಗೆ ಚುನಾವಣಾ ಆಯುಕ್ತರಾದ ಸುಖಬೀರ್ ಸಿಂಗ್ ಸಂಧು ಮತ್ತು ವಿವೇಕ್ ಜೋಶಿ ಅವರು 10 ತಿಂಗಳ ಅವಧಿಯಲ್ಲಿ ಕನಿಷ್ಠ 14 ಬಾರಿ ಆಕ್ಷೇಪ ವ್ಯಕ್ತಪಡಿಸಿದ್ದರು ಎಂದು ದಿನಪತ್ರಿಕೆಯೊಂದರ ವರದಿ ಹೇಳಿತ್ತು.

## ನಾಲ್ಕೂ ಕ್ಷೇತ್ರಗಳ ಗೆಲುವಿಗೆ NDA ಪ್ಲ್ಯಾನ್, BJP-JDS ಮಹತ್ವದ ಸಭೆ..!

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ತಿನ ನಾಲ್ಕು ಸ್ಥಾನಗಳಿಗೆ ಅಕ್ಟೋಬರ್ 23ರಂದು ನಡೆಯಲಿರುವ ಚುನಾವಣೆ ರಾಜ್ಯ ರಾಜಕೀಯದಲ್ಲಿ ಕುತೂಹಲ ಮೂಡಿಸಿದೆ.

2028ರ ವಿಧಾನಸಭೆ ಚುನಾವಣೆಗೆ ಮುನ್ನ ಬಿಜೆಪಿ-ಜೆಡಿಎಸ್ ಮೈತ್ರಿಯ ಸಮನ್ವಯಕ್ಕೆ ಈ ಚುನಾವಣೆ ಪ್ರಮುಖ ವೇದಿಕೆಯಾಗಿರುವ ಹಿನ್ನೆಲೆಯಲ್ಲಿ, ನಾಲ್ಕೂ ಸ್ಥಾನಗಳನ್ನು ಗೆಲ್ಲುವ ಗುರಿಯೊಂದಿಗೆ ಎನ್‌ಡಿಎ ನಾಯಕರು ಚುನಾವಣಾ ಸಿದ್ಧತೆ ಆರಂಭಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಜೆಡಿಎಸ್ ನಾಯಕ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಶನಿವಾರ ತಮ್ಮ ಪಕ್ಷಗಳ ಪ್ರಮುಖ ನಾಯಕರೊಂದಿಗೆ ಸಭೆ ನಡೆಸಿ ಕ್ಷೇತ್ರವಾರು ಕಾರ್ಯತಂತ್ರ, ಕಾರ್ಯಕರ್ತರ ಸಂಘಟನೆ ಹಾಗೂ ಮತಗಳ ಸಮನ್ವಯದ ಕುರಿತು ಚರ್ಚಿಸಿದ್ದಾರೆ.

ನಾವು ಒಟ್ಟಾಗಿ ಕೆಲಸ ಮಾಡಬೇಕು ಹಾಗೂ ಚುನಾವಣೆಯನ್ನು ಜಂಟಿಯಾಗಿ ಎದುರಿಸಬೇಕು. ನಾಲ್ಕೂ ಸ್ಥಾನಗಳನ್ನು ಬಿಜೆಪಿ-ಜೆಡಿಎಸ್ ಒಗ್ಗಟ್ಟಿನಿಂದ ಗೆಲ್ಲಬೇಕು'' ಎಂದು ಸಭೆಯ ಬಳಿಕ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸುದ್ದಿಗಾರರಿಗೆ ತಿಳಿಸಿದರು. ಬೆಂಗಳೂರು ಶಿಕ್ಷಕರ ಕ್ಷೇತ್ರವೂ ಮೈತ್ರಿಕೂಟಕ್ಕೆ ಪ್ರಮುಖವಾಗಿದೆ. ಈ ಹಿಂದೆ ನರಹರಿ ಕೆ. ಅವರ ಮೂಲಕ ಬೆಂಗಳೂರು ಸ್ಥಾನವನ್ನು ಗೆದ್ದಿದ್ದೆವು. ಈ ಬಾರಿ ಒಟ್ಟಾಗಿ ಕೆಲಸ ಮಾಡಿ ನಾಲ್ಕೂ ಸ್ಥಾನಗಳನ್ನು ಗೆಲ್ಲಬೇಕು ಎಂದು ಹೇಳಿದರು. ಕ್ಷೇತ್ರವಾರು ಸಮನ್ವಯ, ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರ ಸಂಘಟನೆ ಹಾಗೂ ಎರಡೂ ಪಕ್ಷಗಳ ನಡುವೆ ಮತಗಳ ವರ್ಗಾವಣೆಯನ್ನು ಖಚಿತಪಡಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.


ಉದಯವಾಹಿನಿ ಚಿತ್ರ

ಪ್ರತ್ಯೇಕ ಬಿಜೆಪಿ ಅಥವಾ ಜೆಡಿಎಸ್ ಪ್ರಚಾರದ ಬದಲು ಎನ್‌ಡಿಎ ಮೈತ್ರಿಕೂಟದ ಜಂಟಿ ಅಭ್ಯರ್ಥಿಗಳ ಚುನಾವಣೆಯಾಗಿ ಈ ಚುನಾವಣೆಯನ್ನು ಎದುರಿಸಬೇಕು ಎಂದು ನಾಯಕರು ಒತ್ತಿ ಹೇಳಿದರು.

## ಮೊದಲ ವಾರದಲ್ಲಿ ರಾಜ್ಯಕ್ಕೆ ಕೇಂದ್ರ ಬರ ಅಧ್ಯಯನ ತಂಡ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯದ ಬರ ಪರಿಸ್ಥಿತಿಯ ವಾಸ್ತವ ಸ್ಥಿತಿಯನ್ನು ಪರಿಶೀಲಿಸಲು ಕೇಂದ್ರ ಸರ್ಕಾರದ ಬರ ಅಧ್ಯಯನ ತಂಡ ಅಕ್ಟೋಬರ್ ಮೊದಲ ವಾರದಲ್ಲಿ ಕರ್ನಾಟಕಕ್ಕೆ ಆಗಮಿಸಲಿದೆ.

ಕೇಂದ್ರ ಕೃಷಿ ಇಲಾಖೆಯ ಜಂಟಿ ಕಾರ್ಯದರ್ಶಿ ಅಜಿತ್ ಕುಮಾರ್ ಸಾಹು ನೇತೃತ್ವದ ತಂಡ ರಾಜ್ಯದ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಲಿದೆ. ರಾಜ್ಯ ಪ್ರವಾಸಕ್ಕೂ ಮುನ್ನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ತಂಡ ಸಭೆ ನಡೆಸಲಿದೆ.

ಸಭೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಸಿದ್ಧಪಡಿಸಿರುವ ಬರಪೀಡಿತ ತಾಲ್ಲೂಕುಗಳ ಪಟ್ಟಿ ಹಾಗೂ ಸಂಬಂಧಿತ ಅಂಕಿ-ಅಂಶಗಳನ್ನು ಕೇಂದ್ರ ತಂಡಕ್ಕೆ ನೀಡಲಿದೆ. ಈ ಪಟ್ಟಿಯ ಆಧಾರದ ಮೇಲೆ ಆಯ್ದ ತಾಲ್ಲೂಕುಗಳಿಗೆ ತಂಡ ಭೇಟಿ ನೀಡಲಿದೆ. ಕೇಂದ್ರ ತಂಡದೊಂದಿಗೆ ರಾಜ್ಯದ ಅಧಿಕಾರಿಗಳೂ ಪ್ರವಾಸ ಕೈಗೊಂಡು ಬರ ಪರಿಸ್ಥಿತಿಯ ವಾಸ್ತವ ಸ್ಥಿತಿಯನ್ನು ಪರಿಶೀಲಿಸಲಿದ್ದಾರೆ.

ಕೇಂದ್ರದ ಅಧ್ಯಯನ ತಂಡವು ಶೀಘ್ರದಲ್ಲೇ ರಾಜ್ಯದ ಬರಪೀಡಿತ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ, ಬೆಳೆ ನಷ್ಟದ ವಾಸ್ತವ ಸ್ಥಿತಿಯನ್ನು ಪರಿಶೀಲಿಸಲಿದೆ. ಈ ತಂಡ ನೀಡುವ ವರದಿಯ ಆಧಾರದ ಮೇಲೆ ಕೇಂದ್ರ ಸರ್ಕಾರವು ಅಂತಿಮ ಎನ್‌ಡಿಆರ್‌ಎಫ್ ಅನುದಾನವನ್ನು ಬಿಡುಗಡೆ ಮಾಡಲಿದೆ

ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಅಧಿಕಾರಿಗಳು ಹಾಗೂ ಕಂದಾಯ ಇಲಾಖೆ ಅಧಿಕಾರಿಗಳ ಸಹಯೋಗದಲ್ಲಿ ಗ್ರೌಂಡ್ ಟ್ರೂಥಿಂಗ್ ನಡೆಸಲಾಗುತ್ತಿದ್ದು, ಬೆಳೆ ಹಾನಿ, ಮಳೆ ಕೊರತೆ ಸೇರಿದಂತೆ ಬರ ಪರಿಸ್ಥಿತಿಯ ವಿವಿಧ ಅಂಶಗಳನ್ನು ಪರಿಶೀಲಿಸಲಾಗುತ್ತಿದೆ.

### 177 ತಾಲ್ಲೂಕುಗಳನ್ನು ಬರಪೀಡಿತ

ಈಗಾಗಲೇ ರಾಜ್ಯ ಸರ್ಕಾರ 177 ತಾಲ್ಲೂಕುಗಳನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರಿಸಿದೆ.

ತಿಂಗಳಾಂತ್ಯದಲ್ಲಿ ನಡೆಯಲಿರುವ ಗ್ರೌಂಡ್ ಟ್ರೂಥಿಂಗ್ ಬಳಿಕ ಮತ್ತಷ್ಟು ತಾಲ್ಲೂಕುಗಳನ್ನು ಪಟ್ಟಿಗೆ ಸೇರಿಸುವ ಸಾಧ್ಯತೆ ಇದ್ದು, ಒಟ್ಟು ಸುಮಾರು 220 ತಾಲ್ಲೂಕುಗಳು ಬರಪೀಡಿತ ಎಂದು ಘೋಷಣೆಯಾಗುವ ಸಾಧ್ಯತೆ ಇದೆ.

## ಸಿಇಸಿ ಜ್ಞಾನೇಶ್ ಕುಮಾರ್ ಬಿಜೆಪಿಯ ಏಜೆಂಟ್ ಆಗಿ ಕೆಲಸ ಮಾಡಿದ್ದಾರೆ

• ಉದಯವಾಹಿನಿ, ಬೆಂಗಳೂರು

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಬಿಜೆಪಿಯ ಏಜೆಂಟ್ ಆಗಿ ಕೆಲಸ ಮಾಡಿದ್ದಾರೆ ಎಂದು ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ.ಹರಿಪ್ರಸಾದ್ ಆರೋಪಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಟಿ ನಡೆಸಿ ಹರಿಪ್ರಸಾದ್, ನಾಗರಿಕರ ಮತಗಳನ್ನು ರಕ್ಷಿಸಬೇಕಾದ ಸ್ವಾಯತ್ತ ಸಂಸ್ಥೆಗಳು ತಮ್ಮ ಅನುಕೂಲಗಳಿಗಾಗಿ ಕರ್ತವ್ಯ ಮರೆತರೆ ಅದು ಸರ್ವಾಧಿಕಾರಕ್ಕಿಂತಲೂ ಅಪಾಯಕಾರಿ. ಜೊತೆಗೆ ಇದನ್ನು ದೇಶದ್ರೋಹ ಎನ್ನಬಹುದು. ಕಾನೂನಿನ ಮುದ್ರೆಯ ಹಿಂದೆ ಅಡಗಿಕೊಂಡು ದೇಶವನ್ನೇ ಹಾಳು ಮಾಡುತ್ತವೆ ಎಂದು ಹಿರಿಯ ನ್ಯಾಯವಾದಿಗಳಾಗಿದ್ದ ನಾರಿ ಫಾಲ್ಕಿ ಅವರು ಹೇಳಿದ್ದರು. ಈ ಮಾತುಗಳನ್ನು ಕೇಳಿದರೆ ಬಿಜೆಪಿಯವರಿಗೆ ಕಸಿವಿಸಿಯಾಗಬಹುದು .ತ್ರಿವರ್ಣ ಧ್ವಜ, ರಾಷ್ಟ್ರಗೀತೆಯ ವಿರುದ್ಧ ಇರುವವರು ರಾಷ್ಟ್ರದ್ರೋಹಿಗಳು ಎಂದು ಇಂದು, ನಾಳೆ ಎಂದಿಗೂ ಹೇಳುತ್ತೇವೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಹಾಗೂ ಅವರಿಗೆ ಕುಮ್ಮಕ್ಕು ನೀಡಿರುವ ಪ್ರಧಾನಿ ಮೋದಿ ಅಮಿತ್ ಶಾ ಇವರೆಲ್ಲರೂ ರಾಷ್ಟ್ರದ್ರೋಹಿಗಳು ಎಂದು ರಾಹುಲ್ ಗಾಂಧಿಯವರು ಹೇಳಿದ್ದಾರೆ. ಈ ಹೇಳಿಕೆ ವಿರುದ್ಧ ಕೇರಳದ ರಾಜೀವ್ ಚಂದ್ರಶೇಖರ್ ಅವರು ಕೀಳುಮಟ್ಟದ ವಾಗ್ದಾಳಿ ಮಾಡಿದ್ದಾರೆ ಎಂದು ಹರಿಹಾಯ್ದರು.

## ಪಿತೃ ಕಲ್ಪ ಪ್ರವಚನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಅಕ್ಷಯನಗರದ ಶ್ರೀ ಸುಬ್ರಹ್ಮಣ್ಯ ಮಠದಲ್ಲಿ ಸೆಪ್ಟೆಂಬರ್ 28 ರಿಂದ ಅಕ್ಟೋಬರ್ 2ರವರೆಗೆ ಪ್ರತಿದಿನ ಸಂಜೆ 6-00ಕ್ಕೆ ಶ್ರೀ ಕಲ್ಲಾಪುರ ಪವಮಾನಾಚಾರ್ಯರಿಂದ ಪಿತೃ ಕಲ್ಪ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ಶ್ರೀ ಸುಬ್ರಹ್ಮಣ್ಯ ಮಠ, 5ನೇ ಅಡ್ಡರಸ್ತೆ, ಅಕ್ಷಯನಗರ, ಬೆಂಗಳೂರು

## 'ಕನ್ನಡ ಶಿವಮಣಿ' ಎಂದೇ ಖ್ಯಾತರಾಗಿದ್ದ ಖ್ಯಾತ ಡ್ರಮ್ಮರ್ ದೇವ ಇನ್ನಿಲ್ಲ..!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಕನ್ನಡ ಶಿವಮಣಿ ಎಂದೇ ಖ್ಯಾತಿ ಪಡೆದಿದ್ದ ಜನಪ್ರಿಯ ಡ್ರಮ್ಮರ್ ದೇವ್ ಅವರು ನಿಧನರಾಗಿದ್ದಾರೆ.

ದೇವ್ ಅವರು, ಆರ್.ಆರ್. ನಗರದ ಸ್ಕಂದಶ್ರೀ ಅಪಾರ್ಟ್‌ಮೆಂಟ್‌ನ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದಿದ್ದಾರೆ. ಅವರಿಗೆ ಓರ್ವ ಪುತ್ರ ಹಾಗೂ ಪುತ್ರಿ ಇದ್ದಾರೆ. ತಮ್ಮದೇ ವಿಭಿನ್ನ ಬೀಟ್ ಶೈಲಿ ಹಾಗೂ ಅದ್ಭುತ ಪ್ರದರ್ಶನದ ಮೂಲಕ ಸಂಗೀತಾಸಕ್ತರ ಮನಗೆದ್ದಿದ್ದ ದೇವ್, ಸ್ಯಾಂಡಲ್‌ವುಡ್ ಸೇರಿದಂತೆ ಹಲವು ವೇದಿಕೆಗಳಲ್ಲಿ ತಮ್ಮದೇ ಛಾಪು ಮೂಡಿಸಿದ್ದರು. ಆರ್‌ಸಿಬಿ ಪಂದ್ಯಾವಳಿಗಳ ವೇಳೆ ಲೈವ್ ಬೀಟ್ ಪ್ರದರ್ಶನ ನೀಡುವ ಮೂಲಕ ಅಭಿಮಾನಿಗಳ ಕ್ರೇಜ್ ಹೆಚ್ಚಿಸಿದ್ದರು.

ಕಳೆದ ಜೂನ್‌ನಲ್ಲಿ ದೇವ್ ಅವರಿಗೆ ಪಾರ್ಶ್ವವಾಯು (ಸ್ಟ್ರೋಕ್) ಕಾಣಿಸಿಕೊಂಡಿತ್ತು. ಆರೋಗ್ಯ ಸ್ಥಿತಿ ಕ್ರಮೇಣ ಹದಗೆಟ್ಟಿತ್ತು. ಗ್ಯಾಂಗ್ರಿನ್ ಸಮಸ್ಯೆಯಿಂದ ಅವರ ಬಲಗಾಲನ್ನು ಶಸ್ತ್ರಚಿಕಿತ್ಸೆ ಮೂಲಕ ತೆಗೆಯಲಾಗಿತ್ತು. ನಂತರ ಸ್ಟ್ರೋಕ್‌ನ ಪರಿಣಾಮ ಆರೋಗ್ಯ ಮತ್ತಷ್ಟು ಹದಗೆಟ್ಟ ಹಿನ್ನೆಲೆಯಲ್ಲಿ ಮನೆಯಲ್ಲೇ ಚಿಕಿತ್ಸೆ ಪಡೆಯುತ್ತಿದ್ದರು. ಇದೀಗ ಚಿಕಿತ್ಸೆ ಫಲಿಸದೆ ನಿಧನರಾಗಿದ್ದಾರೆ.

## ಪ್ರಾಥಮಿಕ ಶಿಕ್ಷಕರ ನೇಮಕಾತಿಗೆ ಹೊಸ ಪಟ್ಟಿ ಸಿದ್ಧಪಡಿಸಿ: ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಹೈ.-ಕರ್ನಾಟಕ ಪ್ರದೇಶದಲ್ಲಿ 6ರಿಂದ 8ನೇ ತರಗತಿಗೆ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿಗಾಗಿ ಕಲಬುರಗಿ ಮತ್ತು ಬೀದರ್ ಜಿಲ್ಲೆಗಳ ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ,ಉಪನಿರ್ದೇಶಕರಿಗೆ ಹೊಸ ಅಭ್ಯರ್ಥಿಗಳ ಪಟ್ಟಿ ಸಿದ್ಧಪಡಿಸುವಂತೆ ಹೈಕೋರ್ಟ್ ನಿರ್ದೇಶನ ನೀಡಿದೆ. ಮರು ಮೌಲ್ಯಮಾಪನ ಪ್ರಕ್ರಿಯೆಯಲ್ಲಿ 2023ರ ಫೆ.1ರಂದು ಹೊರಡಿಸಲಾದ ಸುತ್ತೋಲೆ ಪರಿಗಣಿಸಬಾರದು. ನರೇಂದ್ರ ಬಾಬು ಜಿವಿ ಮತ್ತಿತರರು ರಾಜ್ಯ ಸರ್ಕಾರ ಮತ್ತಿತರರು ಪ್ರಕರಣದಲ್ಲಿ ವಿಭಾಗೀಯ ಪೀಠವೊಂದು ರಿಟ್ ಮೇಲ್ಮನವಿಗಳಲ್ಲಿ ನೀಡಿರುವ ನಿರ್ದೇಶನಗಳನ್ನು ಪರಿಗಣಿಸಬೇಕು ಎಂದು ನ್ಯಾಯಾಲಯ ತಿಳಿಸಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಮೂರು ತಿಂಗಳೊಳಗೆ ನೇಮಕಾತಿ ಆದೇಶ ನೀಡಬೇಕು ಎಂದು ನ್ಯಾಯಾಲಯ ಆದೇಶಿಸಿದೆ. ಕರ್ನಾಟಕ ರಾಜ್ಯ ಆಡಳಿತಾತ್ಮಕ ನ್ಯಾಯಮಂಡಳಿಯ ಕಲಬುರಗಿ ಪೀಠವು 2024ರ ಜ. 31ರಂದು ನೀಡಿದ್ದ ಆದೇಶವನ್ನು ಪ್ರಶ್ನಿಸಿ ನಾಗಪ್ಪ ಮತ್ತಿತರರು ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಆರ್. ದೇವದಾಸ್ ,ನ್ಯಾಯಮೂರ್ತಿ ಬ್ರಿಂಜೇಶ್ ಎಂ. ಅವರ ವಿಭಾಗೀಯ ಪೀಠ ಈ ಆದೇಶ ನೀಡಿದೆ.

## ಬಿಡದಿಯಲ್ಲಿ ರೈತರು ಯಾರೂ ರಸ್ತೆ ತಡೆ ಮಾಡಬಾರದು, ನನಗೆ ಪ್ರತಿಷ್ಠೆ ಇಲ್ಲ: ಸಿಎಂ ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಬಿಡದಿಯಲ್ಲಿ ರೈತರು ಯಾರೂ ರಸ್ತೆ ತಡೆ ಮಾಡಬಾರದು.

ಟೌನ್‌ಶಿಪ್ ಬೇಡಾದವರು ಬಿಡುತ್ತಾರೆ. ನನಗೆ ಪ್ರತಿಷ್ಠೆ ಇಲ್ಲ ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಬಿಡದಿ ಭೈರಮಂಗಲ ರೈತರ ಮೇಲೆ ಎಫ್‌ಐಆರ್ ದಾಖಲು ವಿಚಾರವಾಗಿ ಮಾತನಾಡಿ, ಯಾರೂ ರಸ್ತೆ ತಡೆ ಮಾಡಬಾರದು. ಯಾರೂ ಜಮೀನು ಕೊಡಬೇಡಿ ಅಂತಿದ್ದೇನೆ. ಇಷ್ಟ ಇದ್ದವರು ಕೊಡುತ್ತಾರೆ, ಇಲ್ಲದಿದ್ದರೆ ಇರಲಿ. ಬದುಕಬೇಕು, ದುಡ್ಡು ಬೇಕು ಅಂದವರು ಕೊಡುತ್ತಾರೆ ಎಂದರು.

ಚುನಾವಣಾ ಆಯೋಗದ ವಿರುದ್ಧ ರಾಜಕೀಯ ಪ್ರೇರಿತ ಹೋರಾಟ ಎಂಬ ಟೀಕೆ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ನಾವು ಏನು ಹೇಳಿದ್ದೇವೋ, ಅದನ್ನು ಚುನಾವಣಾ ಆಯೋಗದವರೇ ಹೇಳಿದ್ದಾರೆ. ನೀವು ಮಾಡುತ್ತಿರುವುದು ಸರಿಯಲ್ಲ ಎಂದು ಚುನಾವಣಾ ಆಯೋಗದವರು ಇಬ್ಬರು ಹೇಳಿದ್ದಾರೆ. ಪ್ರಜಾಪ್ರಭುತ್ವ ಅಂದರೆ ಬಹುಮತ. ಇಬ್ಬರೂ ಕೂಡ ಮಾಡುತ್ತಿರುವುದು ಸರಿಯಲ್ಲ ಎಂದಿದ್ದಾರೆ. ತ್ಯಾಪೆ ಹಾಕಿ ಹೆದರಿಸಿ ಕುಳ್ಳಿರಿಸಿದ್ದಾರೆ ಎಂದು ಆರೋಪಿಸಿದರು.


ಉದಯವಾಹಿನಿ ಚಿತ್ರ

**ದೆಹಲಿಯಲ್ಲಿ ವಿಪಕ್ಷಗಳ ಸರ್ವಪಕ್ಷ ಸಭೆ:** ದೆಹಲಿ ಭೇಟಿ ವಿಚಾರವಾಗಿ ಪ್ರತಿಕ್ರಿಯಿಸಿ, ವೋಟ್ ಚೋರಿ ಬಗ್ಗೆ ಚರ್ಚೆ ಮಾಡಲು ಕರೆದಿದ್ದಾರೆ. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಹೇಳಿದ್ದು ನಿಜ ಆಗಿದೆ. ಚುನಾವಣೆ ಅಕ್ರಮವಾಗಿ ನಡೆದಿದ್ದು ಸಾಬೀತಾಗಿದೆ. ಇಡೀ ದೇಶ ಈಗ ಜಾಗೃತವಾಗಿದೆ. ನಾಡಿದ್ದು ಈ ಬಗ್ಗೆ ಚರ್ಚೆ ಮಾಡುತ್ತೇವೆ.ಯಾರೂ ರಸ್ತೆ ತಡೆ ಮಾಡಬಾರದು. ಯಾರೂ ಜಮೀನು ಕೊಡಬೇಡಿ ಅಂತಿದ್ದೇನೆ. ದೆಹಲಿಯಲ್ಲಿ ವಿಪಕ್ಷಗಳ ಸರ್ವಪಕ್ಷ ಸಭೆಯನ್ನು ಕರೆಯಲಾಗಿದೆ ಎಂದು ತಿಳಿಸಿದರು. ನಿಗಮ ಮಂಡಳಿ ನೇಮಕಾತಿ ವಿಚಾರವಾಗಿ ಮಾತನಾಡಿ, ದೆಹಲಿಯಲ್ಲಿ ಈಗಾಗಲೇ ತೀರ್ಮಾನ ಆಗಿದೆ. ಹಿರಿಯ ಶಾಸಕರಿಗೆ ಸ್ಥಾನ ಕೊಡಲಾಗುತ್ತದೆ. ಇದು ಆದ ಮೇಲೆ ಕಾರ್ಯಕರ್ತರಿಗೆ ಕೂಡಲೇ ಸ್ಥಾನ ನೀಡಲಾಗುತ್ತದೆ ಎಂದರು.

# ಆರ್ಥಿಕ ಸಂಕಷ್ಟದಲ್ಲಿರುವ ಸರ್ಕಾರಕ್ಕೆ ದೊಡ್ಡ ಮೊತ್ತ; ರೈತರಿಗೆ ಮಾತ್ರ ಅತ್ಯಲ್ಪ!

### 7ನೇ ಕರಡು ಅಧಿಸೂಚನೆ ಕುರಿತು ನಾಲ್ಕು ದಿನಗಳ ವಿಶೇಷ ಅಧಿವೇಶನ ನಡೆದ ಬಳಿಕ ಸರ್ಕಾರ ಕೃಷಿ ಒಳಹರಿವು ಸಹಾಯಧನ ಸಬ್ಸಿಡಿ ನೀಡುವ ನಿರ್ಧಾರ ಪ್ರಕಟಿಸಿತು.

• ಉದಯವಾಹಿನಿ, ಬೆಂಗಳೂರು

ಈ ವರ್ಷದ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ತೀವ್ರ ಬರಗಾಲವಿದೆ. ರೈತರಿಗೆ ನೆರವಾಗಬೇಕು ಎಂಬ ಉದ್ದೇಶ ರಾಜ್ಯ ಸರ್ಕಾರಕ್ಕಿದೆ. ಆರ್ಥಿಕ ಸಂಕಷ್ಟದಲ್ಲಿರುವ ಸರ್ಕಾರಕ್ಕೆ 1,250 ಕೋಟಿ ರೂಪಾಯಿ ಬರಗಾಲಕ್ಕೆ ಪರಿಹಾರ ನೀಡಬೇಕಾಗಿರುವುದು ದೊಡ್ಡ ಮೊತ್ತವೇ ಹೌದು. ಆದರೆ ತೀವ್ರ ಬರದಿಂದ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ತಲಾ 2,500 ರೂಪಾಯಿ ಕೃಷಿ ಒಳಹರಿವು ಸಹಾಯಧನ ಸಬ್ಸಿಡಿ ನೀಡುವ ನಿರ್ಧಾರ ಮಾತ್ರ ಬರಪರಿಹಾರ ಉದ್ದೇಶವನ್ನೇ ಮರೆತಂತಿದೆ.

1 ಪ್ರತಿ 10 ನಿಮಿಷಕ್ಕೊಂದು ರೈಲು
2 ಪ್ರತಿ 6 ನಿಮಿಷಕ್ಕೊಂದು ರೈಲು
3 ಮೊದಲ ಹಂತದ ಸಿಗ್ನಲಿಂಗ್

ರಾಜ್ಯದಲ್ಲಿ ಎದುರಾಗಿರುವ ಬರ ಪರಿಸ್ಥಿತಿ ಹಾಗೂ ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ಪ್ರದೇಶಗಳಿಗೆ ಸಂಬಂಧಿಸಿದ ಕೇಂದ್ರದ 7ನೇ ಕರಡು ಅಧಿಸೂಚನೆ ಕುರಿತು ನಾಲ್ಕು ದಿನಗಳ ವಿಶೇಷ ಅಧಿವೇಶನ ನಡೆದ ಬಳಿಕ ಸರ್ಕಾರ ಕೃಷಿ ಒಳಹರಿವು ಸಹಾಯಧನ ಸಬ್ಸಿಡಿ ನೀಡುವ ನಿರ್ಧಾರ ಪ್ರಕಟಿಸಿತು. ರೈತರು ಇಂದು ಸಂಕಷ್ಟದಲ್ಲಿದ್ದಾರೆ.


ಉದಯವಾಹಿನಿ ಚಿತ್ರ

ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ನಿಧಿಯಿಂದ ನೆರವು ದೊರೆಯುವುದನ್ನು ಕಾಯುತ್ತಿರುವ ನಡುವೆಯೇ, ಪ್ರತಿ ರೈತನಿಗೆ 2,500 ಕೃಷಿ ಒಳಹರಿವು ಸಹಾಯಧನ ಸಬ್ಸಿಡಿ ನೀಡಲು ನಿರ್ಧರಿಸಿದ್ದೇವೆ. ಮೊದಲ ಹಂತದಲ್ಲೇ ನಮ್ಮ ರೈತರಿಗೆ 1,250 ಕೋಟಿ ರೂ ನೀಡುತ್ತೇವೆ. ಇದು ಸಣ್ಣ ಮೊತ್ತವಲ್ಲ. ಅಂದಾಜು 45ರಿಂದ 50 ಲಕ್ಷ ರೈತರು ಇದರ ಪ್ರಯೋಜನ ಪಡೆಯಲಿದ್ದಾರೆ ಎಂದು ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ ಅವರು ಈ ವಾರದ ಆರಂಭದಲ್ಲಿ ವಿಧಾನಸಭೆಯಲ್ಲಿ ಘೋಷಿಸಿದ್ದರು.

ಸರ್ಕಾರ ಎದುರಿಸುತ್ತಿರುವ ಆರ್ಥಿಕ ಸಂಕಷ್ಟವನ್ನು ಗಮನಿಸಿದರೆ ಮುಖ್ಯಮಂತ್ರಿಗಳ ಕಚೇರಿಗೆ ಹಣಕಾಸು ಇಲಾಖೆ ಸಲ್ಲಿಸಿರುವ ಟಿಪ್ಪಣಿಯಲ್ಲೂ ಇದನ್ನು ಮತ್ತೊಮ್ಮೆ ಒತ್ತಿಹೇಳಲಾಗಿದೆ. 1,250 ಕೋಟಿ ರೂಪಾಯಿ ಖಂಡಿತವಾಗಿಯೂ ಸಣ್ಣ ಮೊತ್ತವಲ್ಲ. ಆದರೆ ವೈಯಕ್ತಿಕ ರೈತನಿಗೆ ತಲಾ 2,500 ರೂಪಾಯಿ ಅಷ್ಟೊಂದು ಮೊತ್ತವಲ್ಲ. ಮಳೆ ಕೊರತೆಯಿಂದ ಬೆಳೆಗಳು ಒಣಗುತ್ತಿರುವ ಹಿನ್ನೆಲೆಯಲ್ಲಿ ರೈತರು ಆರ್ಥಿಕ ಸಂಕಷ್ಟದಲ್ಲಿದ್ದು, ಸಾಲದ ಸುಳಿಗೆ ಸಿಲುಕುವ ಅಪಾಯ ಎದುರಿಸುತ್ತಿದ್ದಾರೆ.ತಮ್ಮ ಮೂರೂವರೆ ಎಕರೆ ಜಮೀನಿನಲ್ಲಿ ಬಾವಿ ತೋಡಿಸಿ ನೀರಾವರಿ ವ್ಯವಸ್ಥೆ ಮಾಡಿಕೊಂಡು ಕೃಷಿ, ತೋಟಗಾರಿಕೆ ಮತ್ತು ಹೈನುಗಾರಿಕೆಯನ್ನು ವೈವಿಧ್ಯಮಯವಾಗಿ ಕೈಗೊಂಡಿದ್ದರಿಂದ ಬರದಿಂದ ತಮಗೆ ಯಾವುದೇ ಪರಿಣಾಮವಾಗಿಲ್ಲ ಎಂದು ಗುಂಡಪ್ಪ ಹೆಮ್ಮೆಯಿಂದ ಹೇಳುತ್ತಾರೆ. ಆದರೆ ರಾಜ್ಯದಲ್ಲಿ ಇಂತಹ ರೈತರ ಸಂಖ್ಯೆ ತೀರಾ ಕಡಿಮೆ.ವಿರೋಧ ಪಕ್ಷಗಳು ಸರ್ಕಾರದ ಘೋಷಣೆಯನ್ನು ರೈತರಿಗೆ ಮಾಡಿದ ಅವಮಾನ ಎಂದು ಬಣ್ಣಿಸಿದರೆ, ರೈತ ಸಂಘಟನೆಗಳು ಗಾಯದ ಮೇಲೆ ಉಪ್ಪು ಸವರಿದಂತಾಗಿದೆ ಎಂದು ಟೀಕಿಸಿವೆ. ಕರ್ನಾಟಕ ರೈತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಕುರುಬೂರು ಶಾಂತಕುಮಾರ್, 2,500 ರೂಪಾಯಿ ಮೊತ್ತದ ಚೆಕ್‌ಗಳನ್ನು ಜಿಲ್ಲಾಧಿಕಾರಿಗಳ ಕಚೇರಿ ಎದುರು ಸುಡುವುದಾಗಿ ಎಚ್ಚರಿಕೆ ನೀಡಿದ್ದಾರೆ. ಸಾಲ ಮನ್ನಾ, ಪ್ರತಿ ಎಕರೆಗೆ 25,000 ರೂಪಾಯಿ ಪರಿಹಾರ ಹಾಗೂ ಮತ್ತು ನಿಯಮಗಳ ಪರಿಷ್ಕರಣೆಗೆ ಒತ್ತಾಯಿಸಿದ್ದಾರೆ.

> ಕೃಷಿ ಒಳಹರಿವು ಸಹಾಯಧನ ಸಬ್ಸಿಡಿ ಸಾಕಾಗುವುದಿಲ್ಲ ಎಂಬ ಸಮುದಾಯದ ಅಭಿಪ್ರಾಯವನ್ನೇ ವ್ಯಕ್ತಪಡಿಸಿದ್ದಾರೆ. ಗ್ರಾಮೀಣ ಆರ್ಥಿಕತೆಯನ್ನು ಬಲಪಡಿಸಲು ದೀರ್ಘಕಾಲೀನ ಕ್ರಮಗಳ ಅಗತ್ಯವಿದೆ ಎಂದು ಅವರು ಹೇಳಿದ್ದಾರೆ. -ರೈತ ಗುಂಡಪ್ಪ ಎಸ್. ದುಳಗೊಂಡ

**ಹಾಲಿಗೆ ಉತ್ತಮ ಬೆಲೆ**

ಪ್ರತಿ ಗ್ರಾಮದಲ್ಲೂ ಕೆರೆ, ಉತ್ತಮ ರಸ್ತೆ, ಕೃಷಿ ಉತ್ಪನ್ನಗಳ ಸಂಗ್ರಹಣೆಗೆ ಗೋದಾಮು, ನೀರಾವರಿ ಪಂಪ್‌ಸೆಟ್‌ಗಳಿಗೆ 12 ಗಂಟೆಗಳ ವಿದ್ಯುತ್ ಹಾಗೂ ರೈತರಿಂದ ಖರೀದಿಸುವ ಹಾಲಿಗೆ ಉತ್ತಮ ಬೆಲೆ ನೀಡಬೇಕು ಎಂದು ಅವರು ಸಲಹೆ ನೀಡಿದ್ದಾರೆ.

## ಗಣಪತಿ ವಿಸರ್ಜನೆ ಬ್ಯಾನರ್, ಬಂಟಿಂಗ್ಸ್ ತೆರವಿಗೆ ಮುಂದಾದ ಪಾಲಿಕೆ

• ಉದಯವಾಹಿನಿ, ತುಮಕೂರು

ನಗರದ ಟೌನ್‌ಹಾಲ್ ವೃತ್ತದಲ್ಲಿ ಪ್ರತಿಷ್ಠಾಪಿಸಲಾಗಿರುವ ಹಿಂದೂ ಮಹಾಗಣಪತಿ ವಿಸರ್ಜನಾ ಮಹೋತ್ಸವದ ಹಿನ್ನೆಲೆಯಲ್ಲಿ ನಗರದ ಪ್ರಮುಖ ರಸ್ತೆಗಳಲ್ಲಿ ಹಾಕಲಾಗಿದ್ದ ಬ್ಯಾನರ್ ಮತ್ತು ಬಂಟಿಂಗ್‌ಗಳನ್ನು ಪಾಲಿಕೆ ಅಧಿಕಾರಿಗಳು ಪೊಲೀಸ್ ಭದ್ರತೆಯಲ್ಲಿ ತೆರವುಗೊಳಿಸಲು ಮುಂದಾದ ಪ್ರಸಂಗ ಜರುಗಿತು.

ಬ್ಯಾನರ್ ತೆರವಿಗೆ ವಿರೋಧ ವ್ಯಕ್ತಪಡಿಸಿದ ಭಜರಂಗದಳ ಸೇರಿದಂತೆ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಪ್ರತಿಭಟನೆಗಿಳಿದರು. ಇದರಿಂದ ಟೌನ್‌ಹಾಲ್‌ನಲ್ಲಿ ಕೆಲ ಹೊತ್ತು ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು. ಶಾಸಕರಾದ ಬಿ. ಸುರೇಶ್‌ಗೌಡ, ಜ್ಯೋತಿಗಣೇಶ್,


ಉದಯವಾಹಿನಿ ಚಿತ್ರ

ಜಿಲ್ಲಾ ಬಿಜೆಪಿ ಅಧ್ಯಕ್ಷ ಹೆಬ್ಬಾಕ ರವಿಶಂಕರ್ ಸೇರಿದಂತೆ ಹಲವು ಮಂದಿ ಮುಖಂಡರು ಪಾಲಿಕೆ ಅಧಿಕಾರಿಗಳ ಕ್ರಮವನ್ನು ಖಂಡಿಸಿದರು. ಶಾಸಕ ಸುರೇಶ್‌ಗೌಡ ಹಾಗೂ ಜ್ಯೋತಿಗಣೇಶ್ ಅವರ ವಾಗ್ವಾಳಿಗೆ ಪಾಲಿಕೆ ಅಧಿಕಾರಿಗಳು ಕೆಲ ಹೊತ್ತು ಸ್ತಬ್ದರಾದರು. ಬ್ಯಾನರ್ ಕಟ್ಟಲು ಬಂಟಿಂಗ್ ಹಾಕಲು ಪಾಲಿಕೆಯ ಅನುಮತಿ ಪಡೆದಿದ್ದರೂ ಸಹ ಈ ಕ್ರಮ ಏಕೆ.? ನ್ಯಾವ್ಯಾವ ದೇಶದ್ರೋಹದ ಕೆಲಸ ಮಾಡುತ್ತಿದ್ದೇವೆ ಎಂದು ಸುರೇಶ್‌ಗೌಡರು ಪ್ರಶ್ನಿಸಿದರು.

ಹಿಂದೂ ಮಹಾಗಣಪತಿ ವಿಸರ್ಜನಾ ಕಾರ್ಯಕ್ರಮ ಇರುವ ಹಿನ್ನೆಲೆ ನಗರ ಅಲಂಕಾರ ಮಾಡಿದ ಕೇಸರಿ ಧ್ವಜಗಳನ್ನು ಹಾಗೂ ಬಂಟಿಂಗ್‌ಗಳನ್ನು ತೆರವುಗೊಳಿಸುತ್ತಿದ್ದ ಮಹಾನಗರ ಪಾಲಿಕೆ ಅಧಿಕಾರಿಗಳನ್ನು ಬಿಜೆಪಿ ನಾಯಕರು ತೀವ್ರ ತರಾಟೆಗೆ ತೆಗೆದುಕೊಂಡರು

ಗಣೇಶಮೂರ್ತಿ ವಿಸರ್ಜನಾ ಮಹೋತ್ಸವದ ಅಂಗವಾಗಿ ಕೇಸರಿ ಧ್ವಜಗಳನ್ನು ಮಾತ್ರ ಹಾಕಲಾಗಿದೆ. ಇದಕ್ಕೂ ಪಾಲಿಕೆ ಅನುಮತಿ ಪಡೆಯಲಾಗಿದೆ. ಇದರಲ್ಲಿ ಯಾರ ಭಾವಚಿತ್ರವೂ ಇಲ್ಲ, ಯಾರ ಭಾವನೆಗಳಿಗೂ ಧಕ್ಕೆಯಾಗುವುದಿಲ್ಲ. ಹೀಗಿದ್ದರೂ ಏಕೆ ಕೇಸರಿ ಧ್ವಜಗಳನ್ನು ತೆರವುಗೊಳಿಸು ಮುಂದಾಗಿರುವುದು ಎಂದು ಪ್ರಶ್ನಿಸಿ, ಪಾಲಿಕೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

## ಪ್ರಜಾ ಆಂದೋಲನ ಸಭೆ: ನಿರೀಕ್ಷಿತ ಸ್ಪಂದನೆ ಸಿಕ್ಕಿಲ್ಲ

• ಉದಯವಾಹಿನಿ, ಕೆಜಿಎಫ್

ತಾಲ್ಲೂಕು ಆಡಳಿತದ ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ ಪ್ರಜಾ ಆಂದೋಲನ ಸಭೆಗೆ ಸಾರ್ವಜನಿಕರಿಂದ ನಿರೀಕ್ಷಿತ ಸ್ಪಂದನೆ ದೊರೆಯದೆ, ಬೆರಳೆಣಿಕೆಯಷ್ಟು ನಾಗರಿಕರು ಮಾತ್ರ ಆಗಮಿಸಿದ ಹಿನ್ನೆಲೆ ವಿವಿಧ ಇಲಾಖೆಗಳ ಅಧಿಕಾರಿಗಳು ದೂರುದಾರರಿಂದ ಅಹವಾಲು ಸ್ವೀಕರಿಸಲು ಕಾದು ಕುಳಿತುಕೊಳ್ಳಲಾಯಿತು. ಸಭೆಯ ಕುರಿತು ಸಾರ್ವಜನಿಕರಿಗೆ ಸಮರ್ಪಕ ಮಾಹಿತಿ ಹಾಗೂ ಪ್ರಚಾರದ ಕೊರತೆಯೇ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸದಿರಲು ಪ್ರಮುಖ ಕಾರಣವಾಗಿದೆ ಎಂಬ ಮಾತುಗಳು ಕೇಳಿ ಬಂದವು. ತಹಲ್ದಾರ ಕಚೇರಿ ಆವರಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲು ಪ್ರತ್ಯೇಕ ಟೇಬಲ್ಲುಗಳನ್ನು ಹಾಕಿಕೊಂಡು ಕುಳಿತಿದ್ದರು. ಅಹವಾಲು ನೀಡಲು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸದ ಹಿನ್ನೆಲೆ ಹಲವಾರು ಅಧಿಕಾರಿಗಳು ಮೊಬೈಲ್‌ಗಳಲ್ಲಿ ಮಾತನಾಡುತ್ತಾ ಸಮಯ ಕಳೆಯುವ ದೃಶ್ಯ ಕಂಡುಬಂತು. ಸರ್ಕಾರಿ ಕಚೇರಿಗಳಿಗೆ ರಜೆ ಇರುವ 4ನೇ ಶನಿವಾರ ಕಾರಣದಿಂದ ಅಧಿಕಾರಿಗಳಲ್ಲಿಯೂ ಸಭೆ ಕುರಿತಾಗಿ ಆರಂಭದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಗಿತ್ತು.

# ಕುಡಿಯುವ ನೀರಿಗೆ ಸಮಸ್ಯೆ ಆಗದಂತೆ ಎಚ್ಚರ ವಹಿಸಿ

## ಕೆಲವು ಕಡೆ ವಿದ್ಯುತ್ ಇಲಾಖೆಯ ಅಸಹಕಾರದಿಂದ ಸಮರ್ಪಕ ವಿದ್ಯುತ್ ಪೂರೈಕೆಯಾಗದೆ ಕುಡಿಯುವ ನೀರು ಪೂರೈಕೆಗೆ ಅಡ್ಡಿಯಾಗಿದೆ

• ಉದಯವಾಹಿನಿ, ಕೆ.ಆರ್.ಪೇಟೆ.

1 ನೀರು ಪೂರೈಕೆಗೆ ಅಡಚಣೆಯಾಗಿದೆ
2 ಬೋರ್‌ವೆಲ್‌ಗಳು ರೀಚಾರ್ಜ್ ಆಗುತ್ತಿವೆ
3 ಅಸಹಕಾರದಿಂದ ಸಮರ್ಪಕ ವಿದ್ಯುತ್

ಪಟ್ಟಣದ ತಾಲ್ಲೂಕು ಪಂಚಾಯತಿ ಸಭಾಂಗಣದಲ್ಲಿ ಶಾಸಕ ಹೆಚ್.ಟಿ.ಮಂಜು ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಕುಡಿಯುವ ನೀರು ಸಮಸ್ಯೆಗಳನ್ನು ಕುರಿತು ಟಾಸ್ಕ್ ಫೊ?ರ್ಸ್ ಸಮಿತಿಯ ಸಭೆ ನಡೆಯಿತು. ಡಿಜಿಟಲ್ಜಾಹೀರಾತು

ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯತಿಯಗಳ ಪಿ.ಡಿ.ಓ ಗಳು ಮತ್ತು ಆಡಳಿತಾಧಿಕಾರಿಗಳು ಭಾಗವಹಿಸಿದ್ದ ಸಭೆಯಲ್ಲಿ ಗ್ರಾಮೀಣ ಪ್ರದೇಶದ ಕುಡಿಯುವ ನೀರು ಪೂರೈಕೆ ಜಾಲದ ಸಮಸ್ಯೆಗಳು ಮತ್ತು ಪರಿಹಾರೋಪಾಯಗಳ ಬಗ್ಗೆ ಸಮಗ್ರ ಚರ್ಚೆ ನಡೆಸಲಾಯಿತು.

ಪಂಚಾಯತಿವಾರು ಕುಡಿಯುವ ನೀರಿನ ಪೂರೈಕೆ ಕುರಿತು ವರದಿ ಮಂಡಿಸಿದ ಪಿ.ಡಿ.ಓ ಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿನ ಕುಡಿಯುವ ನೀರು ಪೂರೈಕೆ ಕುರಿತು ವರದಿ ಮಂಡಿಸಿದರಲ್ಲದೆ ತಾಲ್ಲೂಕು ವ್ಯಾಪ್ತಿಯಲ್ಲಿ ಹಾದು ಹೋಗಿರುವ ಹೇಮಾವತಿ ನಾಲೆಗಳ ಮುಖಾಂತರ ಕೆರೆಕಟ್ಟೆಗಳಿಗೆ ನೀರು ತುಂಬಿಸುತ್ತಿರುವುದರಿಂದ ಅಂತರ್ಜಲ ವೃದ್ದಿಯಾಗಿದ್ದು ನಿಂತು ಹೋಗಿದ್ದ ಬೋರ್‌ವೆಲ್‌ಗಳು ರೀಚಾರ್ಜ್ ಆಗುತ್ತಿವೆ. ಆದ ಕಾರಣ ಕುಡಿಯುವ ನೀರಿನ ಸಮಸ್ಯೆಗೆ ತಾತ್ಕಾಲಿಕ ಪರಿಹಾರ ಸಿಕ್ಕಿದೆ. ಕೆಲವು ಕಡೆ ವಿದ್ಯುತ್ ಇಲಾಖೆಯ ಅಸಹಕಾರದಿಂದ ಸಮರ್ಪಕ ವಿದ್ಯುತ್ ಪೂರೈಕೆಯಾಗದೆ ಕುಡಿಯುವ ನೀರು ಪೂರೈಕೆಗೆ ಅಡ್ಡಿಯಾಗಿದೆ. ಜಲಜೀವನ್ ಕಾಮಗಾರಿ ಕೆಲವು ಕಡೆ ಕಳಪೆಯಾಗಿದ್ದು ನೀರು ಲೀಕೇಜ್ ಆಗುತ್ತಿದೆ. ಇದರಿಂದ ಕೆಲವು ಭಾಗಗಳಲ್ಲಿ ಗ್ರಾಮೀಣ ಕುಡಿಯುವ


ಉದಯವಾಹಿನಿ ಚಿತ್ರ

ನೀರು ಪೂರೈಕೆಗೆ ಅಡಚಣೆಯಾಗಿದೆ. ತಾಲ್ಲೂಕಿನ ನಾಟನಹಳ್ಳಿ ಬಳಿಯ ಕುಡಿಯುವ ನೀರು ಪೂರೈಕೆ ಜಾಲಕ್ಕೆ ಹೊಸ ಟಿ.ಸಿ ಅಳವಡಿಸಬೇಕಾಗಿದೆ. ವಿದ್ಯುತ್ ಇಲಾಖೆ ಇದಕ್ಕೆ ಸಹಕರಿಸುತ್ತಿಲ್ಲ. ಜಲಜೀವನ್ ಯೋಜನೆ ಹೊರತುಪಡಿಸಿ ಉಳಿದ ಕಡೆ ಹೊಸ ಟಿ.ಸಿ ಅಳವಡಿಕೆಗೆ ವಿದ್ಯುತ್ ಇಲಾಖೆ ಮೊದಲು ಹಣಕಟ್ಟಿದರೆ ಮಾತ್ರ ಹೊಸ ಟಿ.ಸಿ ಹಾಕುವುದಾಗಿ ಹೇಳುತ್ತಿದೆ.

ಪಟ್ಟಣದ ಹೊರವಲಯದ ಹೌಸಿಂಗ್ ಬೋರ್ಡ್ ಕಾಲೋನಿ, ಸಾದುಗೋನಹಳ್ಳಿಯ ಶಿಕ್ಷಕರ ಕಾಲೋನಿ ಮತ್ತು ನಾಗೇನಹಳ್ಳಿ ಎಲ್ಲೆಗೆ ಸೇರಿದ ಬಡಾವಣೆಗಳ ಜನರ ಕುಡಿಯುವ ನೀರಿನ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಲಾಯಿತು. ಪಟ್ಟಣದ ಹೊರವಲಯದ ಬಡಾವಣೆಗಳು ಪುರಸಭಾ ವ್ಯಾಪ್ತಿಗೆ ಸೇರದೆ ಆಸುಪಾಸಿನ ಗ್ರಾಮ ಪಂಚಾಯತಿಗಳ ವ್ಯಾಪ್ತಿಗೆ ಸೇರಿವೆ ಇದರಿಂದಾಗಿ ಈ ಬಡಾವಣೆಗಳಿಗೆ ಜಲಜೀವನ್ ಯೋಜನೆ ಸೇರಿಸಿದ್ದರೂ ಕಾಮಗಾರಿ ಪೂರ್ಣಗೊಳ್ಳದ ಕಾರಣ ಕುಡಿಯುವ ನೀರಿನ ಸಮಸ್ಯೆ ಬಿಗಡಾಯಿಸಿದೆ. ತಕ್ಷಣವೇ ಜಲಜೀವನ್ ಮೂಲಕ ಇವುಗಳಿಗೆ ಕುಡಿಯುವ ನೀರು ಪೂರೈಕೆ ಮಡುವಂತೆ ಸಭೆಯಲ್ಲಿ ಸೂಚಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಟಿ.ಮಂಜು ಮಾತನಾಡಿ ಕುಡಿಯುವ ನೀರು ಸಮಸ್ಯೆ ಪರಿಹಾರಕ್ಕೆ ಹಣಕಾಸಿನ ಅಭಾವವಿಲ್ಲ. ಅಗತ್ಯವಿರುವ ಕಡೆ ಹೊಸ ಬೋರ್‌ವೆಲ್ ಕೊರೆಸಿ. ಅಂತರ್ಜಲ ಮಟ್ಟದ ಕುಸಿದಿರುವ ಕಡೆ ರೈತರ ಖಾಸಗಿ ಬೋರ್‌ವೆಲ್‌ಗಳನ್ನು ಬಳಕೆ ಮಾಡಲು ಕ್ರಮ ವಹಿಸಿ. ತಾಲ್ಲೂಕಿನಲ್ಲಿ ತೀವ್ರ ಬರಗಾಲವಿದ್ದು ಅಂತರ್ಜಲ ಮಟ್ಟ ಕುಸಿಯುತ್ತಿರುವುದರಿಂದ ಗ್ರಾಮ ಪಂಚಾಯತಿಗಳ ಸಕ್ರಿಯ ಕೊಳವೆ ಬಾವಿಗಳ 200 ಮೀಟರ್ ಅಂತರದಲ್ಲಿ ಯಾವುದೇ ಹೊಸ ಕೊಳವೆ ಬಾವಿಗಳನ್ನು ಖಾಸಗಿಯವರು ಕೊರೆಸದಂತೆ ಎಚ್ಚರಿಕೆ ವಹಿಸಿ ಎಂದು ಸೂಚಿಸಿದರು.

ಸಣ್ಣಪುಟ್ಟ ಕಾರಣಗಳನ್ನು ಮುಂದಿಟ್ಟು ಗ್ರಾಮೀಣ ಕುಡಿಯುವ ನೀರು ಪೂರೈಕೆ ಜಾಲಕ್ಕೆ ಹೊಸ ಟಿ.ಸಿ ಕೊಡಲು ನಿರಾಕರಿಸುತ್ತಿರುವ ವಿದ್ಯುತ್ ಇಲಾಖೆಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರಲ್ಲದೆ ಸ್ಥಳದಲ್ಲಿಯೇ ಚೆಸ್ಕಾಂ ಮೇಲಧಿಕಾರಿಗಳನ್ನು ದೂರವಾಣಿಯ ಮೂಲಕ ಸಂಪರ್ಕಿಸಿ ಸ್ಥಳೀಯ ಅಧಿಕಾರಿಗಳಿಗೆ ನಿಯಮಾವಳಿಗಳನ್ನು ತಿಳಿಸಿದರು.

### ಗ್ರಾಮೀಣ ಸ್ವಚ್ಚತೆಗೆ ಮೊದಲ ಆದ್ಯತೆ

ಯಾವುದೇ ಅನಾಹುತವಾದರೂ ಚೆಸ್ಕಾಂ ಇಂಜಿನಿಯರುಗಳ ವಿರುದ್ದ ಎಫ್.ಐ.ಆರ್ ದಾಖಲಿಸುವುದಾಗಿ ಶಾಸಕರು ಎಚ್ಚರಿಸಿದರು. ಗ್ರಾಮೀಣ ಪ್ರದೇಶದಲ್ಲಿ ಸ್ವಚ್ಚತೆಗೆ ಮೊದಲ ಆದ್ಯತೆ ನೀಡುವಂತೆ ಸೂಚಿಸಿದ ಶಾಸಕರು ಪಿ.ಡಿ.ಓಗಳು ಮತ್ತು ಆಡಳಿತಾಧಿಕಾರಿಗಳು ಪರಸ್ಪರ ಸಮನ್ವಯದಿಂದ ಕೆಲಸ ಮಾಡಬೇಕು.

ಆಡಳಿತಧಿಕಾರಿಗಳು ಎಲ್ಲಾ ಭಾರವನ್ನು ಪಿ.ಡಿ.ಓಗಳ ಮೇಲೆ ಹಾಕದೆ ಗ್ರಾ.ಪಂ ಆಗುಹೋಗುಗಳ ಬಗ್ಗೆ ಪೂರ್ಣ ಜವಾಬ್ದಾರಿ ಹೊತ್ತುಕೊಳ್ಳಬೇಕು. ಗ್ರಾ.ಪಂ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ನಿಗಾವಹಿಸಿ ಆಡಳಿತಾಧಿಕಾರಿಗಳ ಹುದ್ದೆಗೆ ಗೌರವ ತರುವಂತೆ ಸೂಚಿಸಿದರು. -ಶಾಸಕ ಹೆಚ್.ಟಿ.ಮಂಜು

## ಪ್ರವಾಸೋದ್ಯಮ ಸಚಿವರಿಂದ ಸನ್ಮಾನ : ಮಾತೃಶ್ರೀ ಸಂತಸ

• ಉದಯವಾಹಿನಿ, ಮೈಸೂರು

ತಾಯಿಯನ್ನು ತಮ್ಮ ಬಜಾಜ್ ಸ್ಕೂಟರ್‌ನಲ್ಲಿ ಕೂರಿಸಿಕೊಂಡು ಇಡೀ ಭಾರತ ಸೇರಿದಂತೆ ಬರ್ಮಾ (ಮ್ಯಾನ್ಮಾರ್), ನೇಪಾಳ ಭೂತಾನ್ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಸುಮಾರು ಒಂದು ಲಕ್ಷ ಕಿಲೋಮೀಟರ್ಗಳಿಗೂ ಹೆಚ್ಚು ಪ್ರಯಾಣ ಮಾಡಿರುವ ಮಾತೃಶ್ರೀ ಚೂಡಾರತ್ನಮ್ಮ ಹಾಗೂ ಕೃಷ್ಣಕುಮಾರ್ ಅವರನ್ನು ವಿಶ್ವಪ್ರವಾಸೋದ್ಯಮ ದಿನಾಚರಣೆಯ ಅಂಗವಾಗಿ ಮೈಸೂರು ಅರಮನೆ ಮುಂಭಾಗದಲ್ಲಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕೃಷ್ಣಕುಮಾರ್ ಅವರು, ನಮ್ಮ ನಾಡಿನ ಐತಿಹಾಸಿಕ ಸ್ಮಾರಕಗಳು, ಕೋಟೆ-ಕೊತ್ತಲಗಳು ಮತ್ತು ಪಾರಂಪರಿಕ ಕಟ್ಟಡಗಳು ನಮ್ಮ ಮುಂದಿನ ಪೀಳಿಗೆಗೆ ಉಳಿಯಬೇಕಾದ ಅಮೂಲ್ಯ ಸಂಪತ್ತು. ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಗಳು ಸ್ಮಾರಕಗಳ ಸಂರಕ್ಷಣೆಗಾಗಿ ಕೈಗೊಂಡಿರುವ ಯೋಜನೆಗಳನ್ನು ಪರಿಣಾಮ ಕಾರಿಯಾಗಿ ಅನುಷ್ಠಾನಗೊಳಿಸುವುದರ ಜೊತೆಗೆ, ಸಾರ್ವಜನಿಕರೂ ಸ್ಮಾರಕಗಳ ರಕ್ಷಣೆಯಲ್ಲಿ ಕೈಜೋಡಿಸಬೇಕು ಎಂದು ಕರೆ ನೀಡಿದರು.



ಉದಯವಾಹಿನಿ ಚಿತ್ರ

## ಇಂದಿನಿಂದ ಜೆಡಿಎಸ್ ಪಾದಯಾತ್ರೆ : ಕನಕಪುರದಿಂದ ಚಾಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕನಕಪುರ,

ರಾಜ್ಯ ಸರ್ಕಾರದ ವೈಫಲ್ಯವನ್ನು ಖಂಡಿಸಿ ಜೆಡಿಎಸ್ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಪಾದಯಾತ್ರೆಗೆ ನಾಳೆ ಕನಕಪುರದಿಂದ ಚಾಲನೆ ನೀಡಲಾಗುವುದು ಎಂದು ಜೆಡಿಎಸ್ ಜಿಲ್ಲಾ ಅಧ್ಯಕ್ಷ ಜಯಮುತ್ತು ತಿಳಿಸಿದ್ದಾರೆ.

ಕನಕಪುರದಲ್ಲಿ ಮಾತನಾಡಿದ ಅವರು, ಜನರ ಸಮಸ್ಯೆಗೆ ಸ್ಪಂದಿಸಬೇಕಾದ ಸರ್ಕಾರ ಆಶ್ವಾಸನೆಗಳನ್ನು ಕೊಡಿಸುತ್ತಿದ್ದ ಕ್ರಮವನ್ನು ಜನಸಾಮಾನ್ಯರಿಗೆ ತಿಳಿಸುವ ಉದ್ದೇಶದಿಂದ ಸೆಪ್ಟಂಬರ್ 28 ರಂದು ಬೆಂಗಳೂರು-ಕನಕಪುರ ರಸ್ತೆಯ ರೈಸ್‌ಮಿಲ್ ಮಾರ್ಗದಿಂದ ಪಾದಯಾತ್ರೆ ಆರಂಭವಾಗಿ ಚನ್ನಬಸಪ್ಪ ಸರ್ಕಲ್‌ವರೆಗೆ ಪ್ರತಿಭಟನೆ ನಡೆಯಲಿದೆ ಎಂದು ಹೇಳಿದರು.

ತಾಲ್ಲೂ ಕು ಅಧ್ಯಕ್ಷ ಬಿ. ನಾಗರಾಜು ಮಾತನಾಡಿ,ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ .ಹೆಚ್.ಡಿ. ಕುಮಾರಸ್ವಾಮಿಯವರ ಮಾರ್ಗದರ್ಶನದಲ್ಲಿ ನಿಖಿಲ್ ಕುಮಾರಸ್ವಾಮಿಯವರ ನೇತೃತ್ವದಲ್ಲಿ ನಾಳೆ ನಡೆಯುತ್ತಿರುವ ಪ್ರತಿಭಟನೆಗೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಕರೆ ನೀಡಿದ್ದಾರೆ.

ರಾಜ್ಯ ಯುವ ಜೆಡಿಎಸ್ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿಯವರ ನೇತೃತ್ವದಲ್ಲಿ ನಡೆಯುವ ಪಾದಯಾತ್ರೆಯಲ್ಲಿ ಜಿಲ್ಲೆಯಿಂದ ಸಹಸ್ರಾರು ಕಾರ್ಯಕರ್ತರು, ಮುಖಂಡರು ಪಾಲ್ಗೊಳ್ಳುವಂತೆ ಜಿಲ್ಲಾ ದಿಶಾ ಕಮಿಟಿ ಸದಸ್ಯ ಗೇರಹಳ್ಳಿ ರಾಜೇಶ್ ಕರೆ ನೀಡಿದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಎಲ್ಲಾ ಕ್ಷೇತ್ರಗಳಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

ತಾಲ್ಲೂಕು ಜೆಡಿಎಸ್ ಮಾಜಿ ಅಧ್ಯಕ್ಷ ಸಿದ್ದಮರೀಗೌಡ, ರಾಜ್ಯ ಯುವ ಘಟಕದ ಉಪಾಧ್ಯಕ್ಷ ಚಿನ್ನಸ್ವಾಮಿ ಮಾತನಾಡಿ, ಸರ್ಕಾರದ ವಿರುದ್ಧ ಚಾಟಿ ಬೀಸಲು ನಾಳೆ ಪ್ರತಿಭಟನೆ ಎಲ್ಲರೂ ಒಗ್ಗಟ್ಟಿನಿಂದ ಮಾಡುವುದರ ಜೊತೆ ತಾಲ್ಲೂಕಿನ ಸಮಸ್ಯೆಗಳನ್ನು ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಲಾಗುವುದು ಎಂದರು.

ರಾಜ್ಯದಲ್ಲಿ ಸಕಾಲದಲ್ಲಿ ಮಳೆ ಬಾರದೆ ಬರದ ನೆರಳಿನಲ್ಲಿ ಇರುವ ಜನ ಜಾನುವಾರುಗಳು ಕುಡಿಯುವ ನೀರು, ಮೇವಿನ ಕೊರತೆಯಿಂದ ಹೈರಾಣಾಗಿದ್ದಾರೆ ಹಾಗಾಗಿ ತಮ್ಮ ಸ್ವಂತ ಕ್ಷೇತ್ರವನ್ನೇ ಮೂರನೇ ಪಟ್ಟಿಯಲ್ಲಿ ಬರದ ಘೋಷಣೆ ಮಾಡಿದ್ದಾರೆ. ಇವರಿಗೆ ಜನರ ಸಂಕಷ್ಟ ಅರ್ಥವಾಗುತ್ತಿಲ್ಲ ಎಂದು ಆರೋಪಿಸಿದರು.
-ವಕೀಲ ನಂಜೇಗೌಡ

## ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿರದಿದ್ದರೆ ಸರ್ಕಾರಕ್ಕೆ ಯಾವುದೇ ಕಷ್ಟವಿರುತ್ತಿರಲಿಲ್ಲ

• ಉದಯವಾಹಿನಿ, ರಾಮನಗರ

ವಿವಿಧ ಬೇಡಿಕೆಗಳಿಗಾಗಿ ಇಲ್ಲಿ ಪ್ರತಿಭಟನೆ ನಡೆಸುತ್ತಿರುವ ವಿಶೇಷಚೇತನರ ಬಳಿ ಸಹಕಾರ ಮತು ತಿಳಿವಳಿಕೆಯನು ಕೋರಿದ ಸಚಿವ ಎಚ್.ಸಿ. ಬಾಲಕೃಷ್ಣ, 'ಐದು ಗ್ಯಾರಂಟಿ ಯೋಜನೆಗಳನ್ನು' ಜಾರಿಗೆ ತಂದಿರದಿದ್ದರೆ ಸರ್ಕಾರಕ್ಕೆ ತನ್ನ ಆರ್ಥಿಕ ನಿರ್ವಹಣೆ ಸುಲಭವಾಗುತ್ತಿತ್ತು ಎಂದು ಹೇಳಿದ್ದಾರೆ.

ನಗರಾಡಳಿತ ಖಾತೆಯನ್ನು ಹೊಂದಿರುವ ಬಾಲಕೃಷ್ಣ, ಆರ್ಥಿಕ ನಿರ್ಬಂಧಗಳ ನಡುವೆಯೂ ಸರ್ಕಾರವು ಕಲ್ಯಾಣ ಯೋಜನೆಗಳ ಬದ್ಧತೆಗಳು ಹಾಗೂ ವೇತನ ಮತ್ತು ಅಭಿವೃದ್ಧಿ ಕಾರ್ಯಗಳ ವೆಚ್ಚದ ನಡುವೆ ಸಮತೋಲನ ಕಾಯ್ದುಕೊಳ್ಳಬೇಕಾದ ಅನಿವಾರ್ಯತೆ ಇದೆ ಎಂದು ತಿಳಿಸಿದರು. ನಮಗೆ ಈ ಭರವಸೆಗಳು ಇಲ್ಲದಿದ್ದಿದ್ದರೆ, ಬಹುಶಃ ಇವೆಲ್ಲವೂ ನಮಗೆ ಇಷ್ಟೊಂದು ದೊಡ್ಡ ಸಮಸ್ಯೆಗಳಾಗಿ ಕಾಣಿಸುತ್ತಿರಲಿಲ್ಲ. ಇವೆಲ್ಲವನ್ನೂ ಮಾಡುವುದು ನಮಗೆ ಸುಲಭವಾಗುತ್ತಿತ್ತು. ಆದರೆ ನಾವು ಸರ್ಕಾರವನ್ನು ನಡೆಸಬೇಕಿದೆ. ಎಲ್ಲವನ್ನೂ ವ್ಯವಸ್ಥೆಯ ಚೌಕಟ್ಟಿನಲ್ಲಿ ಮತ್ತು ಬಜೆಟ್‌ನ ಮಿತಿಯೊಳಗೆ ನಿರ್ವಹಿಸಬೇಕಾಗುತ್ತದೆ' ಎಂದು ಅವರು


ಉದಯವಾಹಿನಿ ಚಿತ್ರ

ರಾತ್ರಿ ಪ್ರತಿಭಟನಾಕಾರರಿಗೆ ಹೇಳಿದರು. 'ಜನರ ಕಲ್ಯಾಣಕ್ಕಾಗಿ ನಾವು ಈ ಗ್ಯಾರಂಟಿಗಳನ್ನು ನೀಡಿದ್ದೇವೆ. ಬರಗಾಲದ ಸಂದರ್ಭದಲ್ಲಿ ರೈತರಿಗೆ ಆರ್ಥಿಕ ನೆರವು ನೀಡಬೇಕಾಗುತ್ತದೆ, ಆಗ ಅವರೂ ಪ್ರತಿಭಟನೆಗಳನ್ನು ನಡೆಸುತ್ತಾರೆ. ಗ್ಯಾರಂಟಿ ಯೋಜನೆಗಳ ಸೌಲಭ್ಯ ಪಡೆಯುತ್ತಿರುವವರೂ ಸಹ ಪ್ರತಿಭಟನೆಗಳನ್ನು ನಡೆಸುತ್ತಿದ್ದಾರೆ. ನಾವು ಈ ಎಲ್ಲಾ ಸಮಸ್ಯೆಗಳ ನಡುವೆ ಸಿಲುಕಿ ಪರದಾಡುತ್ತಿದ್ದೇವೆ' ಎಂದು ಹೇಳಿದರು.'ಹೀಗಿದ್ದರೂ, 'ಗ್ಯಾರಂಟಿ' ಯೋಜನೆಗಳ ಅನುಷ್ಠಾನವನ್ನು ನಿಲ್ಲಿಸುವ ಯಾವುದೇ ಉದ್ದೇಶ ಸರ್ಕಾರಕ್ಕಾಗಲಿ ಅಥವಾ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗಾಗಲಿ ಇಲ್ಲ. ಆದರೆ, ಇಂದು ಆರ್ಥಿಕ ವ್ಯವಸ್ಥೆಯು ಹೇಗೆ ಕಾರ್ಯನಿರ್ವಹಿಸುತ್ತಿದೆ ಎಂಬುದನ್ನು ಗಮನಿಸಿ. ನಾವು ಎಲ್ಲವನ್ನೂ ನಿರ್ವಹಿಸಬೇಕು, ವೇತನ ಪಾವತಿಸಬೇಕು ಮತ್ತು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು. ಇವೆಲ್ಲವೂ ಸಣ್ಣ ವಿಷಯಗಳು' ಎಂದು ಅವರು ಹೇಳಿದರು.

## ಮಡಿಕೇರಿ ದಸರಾ ಗೊಂದಲಕ್ಕೆ ತೆರೆ ಅ.21ಕ್ಕೆ ದಸರಾ ಆಚರಣೆಗೆ ತೀರ್ಮಾನ

• ಉದಯವಾಹಿನಿ, ತುಮಕೂರು

ಕೇವಲ ನಗರ ಪ್ರದೇಶಗಳಿಗೆ ಮಾತ್ರವಲ್ಲದೆ ಗ್ರಾಮೀಣ ಭಾಗಗಳಿಗೂ ನೇತ್ರ ಸಮಸ್ಯೆ ಗಳನ್ನು ಆರಂಭಿಕ ಹಂತದಲ್ಲೇ ಗುರುತಿಸಿ ಸೂಕ್ತ ಚಿಕಿತ್ಸೆ ಒದಗಿಸುವ ಅಗತ್ಯವಿದೆ ಎಂದು ಶ್ರೀದೇವಿ ಸಂಸ್ಥೆಯ ಸ್ಥಾಪಕ ಹಾಗೂ ಅಧ್ಯಕ್ಷ, ಮಾಜಿ ವಿಧಾನ ಪರಿಷತ್ ಸದಸ್ಯ ಡಾ. ಎಂ.ಆರ್. ಹುಲಿನಾಯ್ಕರ್ ತಿಳಿಸಿದರು. ನಗರದ ಶಿರಾ ರಸ್ತೆಯ ಶ್ರೀದೇವಿ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಆಸ್ಪತ್ರೆಯ ಸಭಾಂಗಣದಲ್ಲಿ ನೇತ್ರ ಶಾಸ್ತ್ರ ಸಂಘ, ಶ್ರೀದೇವಿ ಆಸ್ಪತ್ರೆ, ಯಂಗ್ ಆಫ್ತಾಲ್ಮಾಲಜಿಸ್ಟ್ ಸೊಸೈಟಿ ಆಫ್ ಇಂಡಿಯಾ ಹಾಗೂ ಕರ್ನಾಟಕ ನೇತ್ರಶಾಸ್ತ್ರ ಸಂಘದ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ನೇತ್ರಕಲ್ಪ-2' ಸಿ.ಎಂ.ಇ. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಇಂತಹ ಸಿ.ಎಂ.ಇ. ಕಾರ್ಯಕ್ರಮಗಳು ವೈದ್ಯರು ತಮ್ಮ ಜ್ಞಾನ ಮತ್ತು ಕೌಶಲ್ಯವನ್ನು ಕಾಲಕಾಲಕ್ಕೆ ನವೀಕರಿಸಿಕೊಳ್ಳಲು ಉತ್ತಮ ವೇದಿಕೆಯಾಗಿವೆ ಎಂದು ಮುಖ್ಯ ಅತಿಥಿ ಡಾ.ಎಂ.ಆರ್. ಹುಲಿ ನಾಯ್ಕರ್ ಅಭಿಪ್ರಾಯಪಟ್ಟರು. ವೈದ್ಯಕೀಯ ಕ್ಷೇತ್ರದಲ್ಲಿ ಪ್ರಾಯೋಗಿಕ ಕೌಶಲ್ಯ ಮುಖ್ಯ ವೈದ್ಯಕೀಯ ಕ್ಷೇತ್ರದಲ್ಲಿ ಜ್ಞಾನ, ಅನುಭವ ಮತ್ತು ಪ್ರಾಯೋಗಿಕ ಕೌಶಲ್ಯಗಳನ್ನು ನಿರಂತರವಾಗಿ ಬೆಳೆಸಿಕೊಳ್ಳುವುದು ಅತ್ಯಂತ ಮುಖ್ಯ ಎಂದು ಕೂಡ್ಲಿಗಿ ಕ್ಷೇತ್ರದ ಶಾಸಕ ಡಾ.ಎನ್.ಟಿ. ಶ್ರೀನಿವಾಸ್ ತಿಳಿಸಿದರು.

**ಸಂಶೋಧನೆ ಮತ್ತು ಅನುಭವ ಹಂಚಿಕೆ:** ನೇತ್ರ ಚಿಕಿತ್ಸಾ ಕ್ಷೇತ್ರದ ತಜ್ಞರು ತಮ್ಮ ಅನುಭವ ಗಳನ್ನು ಹಂಚಿಕೊಳ್ಳುವುದರಿಂದ ಭಾಗವಹಿಸುವ ವೈದ್ಯರಿಗೆ ಆಧುನಿಕ ತಂತ್ರಜ್ಞಾನ ಹಾಗೂ ಹೊಸ ಚಿಕಿತ್ಸಾ ವಿಧಾನಗಳ ಕುರಿತು ಹೆಚ್ಚಿನ ಪ್ರಯೋಜನವಾಗಲಿದೆ ಎಂದು ಮಿಂಟೋ ನೇತ್ರ ಆಸ್ಪರೆಯ ನಿರ್ದೇಶಕ ಡಾ. ಸುರೇಶ್ ಬಾಬು ಜಿ. ಮತ್ತು ಕರ್ನಾಟಕ ನೇತ್ರಶಾಸ್ತ್ರ ಸಂಘದ ಅಧ್ಯಕ್ಷ ಡಾ. ಕೆ.ವಿ. ಶಿವರಾಮ್ ತಿಳಿಸಿದರು. ಕಾರ್ಯಕ್ರಮದಲ್ಲಿ ನೇತ್ರ ತಜ್ಞರಾದ ಡಾ. ರೇಣುಕಾ ಎಸ್.ಜೆ., ಡಾ.ಅನುಶ್ರೀ ಲಿಂಗಯ್ಯ, ಡಾ.ಶ್ವೇತಾ ಶ್ರೀಧರ್, ಡಾ.ಅಮೋಘ ಜಾಂಬಗಿ, ಡಾ. ರವಿ ಕುಲಕರ್ಣಿ ಹಾಗೂ ಡಾ.ರವೀಂದ್ರನಾಥ್ ಹೆಚ್.ಎಂ. ಅವರು ಕಣ್ಣಿನ ಪೊರೆ ಮತ್ತು ನೇತ್ರ ಚಿಕಿತ್ಸೆಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಉಪನ್ಯಾಸ ಹಾಗೂ ಪ್ರಾಯೋಗಿಕ ತರಬೇತಿ ನೀಡಿದರು. ತುಮಕೂರು ಆಪ್ಟಾಲ್ಮಿಕ್ ಸೊಸೈಟಿ ವತಿಯಿಂದ ಎಲ್ಲಾ ಗಣ್ಯರನ್ನು ಹಾಗೂ ಉಪನ್ಯಾಸ ನೀಡಿದ ಸಂಪನ್ಮೂಲ ವ್ಯಕ್ತಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

# ರಾಮಾಪುರ ಹೋಬಳಿ ಮಟ್ಟದ ಪ್ರಜಾಸೇವಾ ಆಂದೋಲನ

## ಜನರು ಸಣ್ಣಪುಟ್ಟ ಕೆಲಸಗಳಿಗೆ ತಾಲ್ಲೂಕು ಕಚೇರಿಗೆ ಅಲೆದಾಡುವುದನ್ನು ತಪ್ಪಿಸಿ, ಆಡಳಿತವೇ ಜನರ ಮನೆ ಬಾಗಿಲಿಗೆ ಬಂದು ಸೇವೆ ನೀಡಬೇಕು ಎಂಬುದು ಇದರ ಉದ್ದೇಶ

• ಉದಯವಾಹಿನಿ, ಹನೂರು.

ತಾಲ್ಲೂಕಿನ ರಾಮಾಪುರದಲ್ಲಿರುವ ಪರಮಪೂಜ್ಯ ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿಯವರ ಸಭಾಭವನದಲ್ಲಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ''ಪ್ರಜಾಸೇವಾ ಆಂದೋಲನ'' ಹೋಬಳಿ ಮಟ್ಟದ ಸಭೆ ಇಂದು ಶನಿವಾರ ಶಾಸಕ ಎಂ.ಆರ್ ಮಂಜುನಾಥ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

1 ಸಮಸ್ಯೆಗಳನ್ನು ನೇರವಾಗಿ ಹೇಳಿಕೊಳ್ಳಬಹುದು
2 ನಿಗದಿತ ಕಾಲಮಿತಿಯಲ್ಲಿ ವಿಲೇವಾರಿ ಮಾಡಬೇಕು
3 ಪೋರ್ಟಲ್‌ನಲ್ಲಿ ನೋಂದಾಯಿಸಿ ಸ್ವೀಕೃತಿ ನೀಡಲಾಯಿತು.

ಸಭೆಯಲ್ಲಿ ಕಂದಾಯ, ಪಂಚಾಯತ್ ರಾಜ್, ಆಹಾರ, ಪಿಂಚಣಿ, ಗ್ಯಾರಂಟಿ ಯೋಜನೆಗಳು, ಪಡಿತರ ಚೀಟಿ, ವಸತಿ, ರಸ್ತೆ, ಕುಡಿಯುವ ನೀರು, ವಿದ್ಯುತ್, ಆರೋಗ್ಯ ಸೇರಿದಂತೆ ವಿವಿಧ ಇಲಾಖೆಗಳ ಕುಂದುಕೊರತೆಗಳನ್ನು ಆಲಿಸಲಾಯಿತು. 230ಕ್ಕೂ ಹೆಚ್ಚು ಅರ್ಜಿಗಳನ್ನು ಸ್ವೀಕರಿಸಿ ಐ.ಟಿ. ಜಿ.ಆರ್.ಎಸ್ ಪೋರ್ಟಲ್‌ನಲ್ಲಿ ನೋಂದಾಯಿಸಿ ಸ್ವೀಕೃತಿ ನೀಡಲಾಯಿತು. ಶಾಸಕ ಎಂ.ಆರ್. ಮಂಜುನಾಥ್ ಅವರು ಮಾತನಾಡಿ ರಾಜ್ಯ ಸರ್ಕಾರದ ಪ್ರಜಾಸೇವಾ ಆಂದೋಲನ ಒಂದು ಉತ್ತಮ ಜನಪರ ಕಾರ್ಯಕ್ರಮವಾಗಿದೆ. ಜನರು ಸಣ್ಣಪುಟ್ಟ ಕೆಲಸಗಳಿಗೆ ತಾಲಕು ಕಚೇರಿಗೆ ಅಲೆದಾಡುವುದನ್ನು ತಪ್ಪಿಸಿ, ಆಡಳಿತವೇ ಜನರ ಮನೆ ಬಾಗಿಲಿಗೆ ಬಂದು ಸೇವೆ ನೀಡಬೇಕು ಎಂಬುದು ಇದರ ಉದ್ದೇಶ.


ಉದಯವಾಹಿನಿ ಚಿತ್ರ

ಜನಸಾಮಾನ್ಯರು, ವಿಶೇಷವಾಗಿ ರೈತರು, ವೃದ್ಧರು, ಮಹಿಳೆಯರು ತಮ್ಮ ಸಮಸ್ಯೆಗಳನ್ನು ಇಲ್ಲೇ ನೇರವಾಗಿ ಹೇಳಿಕೊಳ್ಳಬಹುದು. ಸಲ್ಲಿಕೆಯಾದ ಎಲ್ಲಾ ಅರ್ಜಿಗಳನ್ನು ನಿಗದಿತ ಕಾಲಮಿತಿಯಲ್ಲಿ ವಿಲೇವಾರಿ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಯಾವುದೇ ಅರ್ಜಿ ಬಾಕಿ ಉಳಿಯಬಾರದು ಅಯಾ ಇಲಾಖೆವಾರು ಸಂಬಂಧಪಟ್ಟಂತ ಸಮಸ್ಯೆಗಳನ್ನು ಬಗೆಹರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಹನೂರು ತಾಲ್ಲೂಕಿನ ಜನಸಾಮಾನ್ಯರ ಮತ್ತು ರೈತರ ಸಮಸ್ಯೆ ಬಗೆಹರಿಸುವಂತೆ ಕೋರಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ರಾಮಾಪುರ ಘಟಕದ ವತಿಯಿಂದ ಶಾಸಕರಿಗೆ ಮನವಿ ಸಲ್ಲಿಸಿದರು.

ಮನವಿಯಲ್ಲಿ ಉಡುತೊರೆ ಹಳ್ಳ ನೀರಾವರಿ ಯೋಜನೆ ತ್ವರಿತ ಪೂರ್ಣ, ಕುಡಿಯುವ ನೀರು ಮತ್ತು ಪಂಪ್‌ಸೆಟ್ ನೀರು ಪೂರೈಕೆ ಮಾಡಬೇಕು.

ಕಾಡಂಚಿನ ಚಂಗಡಿ ಗ್ರಾಮ ಸ್ಥಳಾಂತರ, ಮಹದೇಶ್ವರ ಬೆಟ್ಟ ಹಾಗೂ ಗೋಪಿನಾಥಂ ಪಂಚಾಯಿತಿ ಗ್ರಾಮಗಳಿಗೆ ರಸ್ತೆ, ವಿದ್ಯುತ್, ಬಸ್, ಆಸ್ಪತ್ರೆ ಸೌಲಭ್ಯ, ಜಮೀನು ಒತ್ತುವರಿ, ದಾರಿ ಸಮಸ್ಯೆ ನಿವಾರಣೆ, ಸಂಪರ್ಕ ರಸ್ತೆಗಳ ಡಾಂಬರೀಕರಣ, ವನ್ಯಜೀವಿ ಬೆಳೆಹಾನಿಗೆ ಪರಿಹಾರ, ನಾಗಣ್ಣನಗರ ಗ್ರಾಮವನ್ನು ಕಂದಾಯ ಗ್ರಾಮವನ್ನಾಗಿ ಘೋಷಣೆ, ಸರ್ವೆ ನಂಬರ್ ತಿದ್ದುಪಡಿ ಮಾಡಬೇಕು.

ಅರ್ಹರಿಗೆ ಪಿಂಚಣಿ, ಗೃಹಲಕ್ಷ್ಮಿ, ಜೆಜೆಎಂ ಯೋಜನೆ ಜಾರಿ. ಸ್ಥಗಿತಗೊಂಡ ಅಂತರರಾಜ್ಯ ಕೆ.ಎಸ್.ಆರ್.ಟಿ.ಸಿ ಬಸ್ ಮತ್ತು ಬದಲಿ ಮಾರ್ಗದಲ್ಲಿ ಸಂಚರಿಸುತ್ತಿರುವ ಮ.ಮ.ಬೆಟ್ಟ ಪ್ರಾಧಿಕಾರದ ಬಸ್‌ಗಳನ್ನು ರಾಮಾಪುರ ಮಾರ್ಗದಲ್ಲಿ ಓಡಿಸುವುದು, ಸಂಜೆ 7-00 ಮತ್ತು 8-00 ಗಂಟೆಗೆ ರಾಮಾಪುರ-ಅಜ್ಜೀಪುರ-ಹನೂರು/ಕೊಳ್ಳೇಗಾಲ ಬಸ್ ವ್ಯವಸ್ಥೆ ಕಲ್ಪಿಸುವುದು ಹೇಳಿದಂತೆ ಹಲವಾರು ಸೌಲಭ್ಯಗಳ ಬಗ್ಗೆ ಕಲ್ಪಿಸುವಂತೆ ಮನವಿಯನ್ನು ಸಲ್ಲಿಸಿದರು.

ಹೂಗ್ಯಂ ಗ್ರಾಮ ಪಂಚಾಯಿತಿಯನ್ನು ರಾಮಾಪುರ ಹೋಬಳಿಗೆ ಸೇರಿಸುವುದು, ರಾಮಾಪುರ-ದಿನ್ನಹಳ್ಳಿ-ಮಿಣ್ಯಂ-ಹುಗ್ಯಂ-ನೆಲ್ಲೂರು ನಾಲ್ ರೋಡ್ ಡಾಂಬರೀಕರಣ, ಅಂಬಿಕಾಪುರಕ್ಕೆ ಅಂಗನವಾಡಿ,ಓ.ಬಿ.ಸಿ ಸಮುದಾಯಕ್ಕೆ ಸ್ಮಶಾನ ಮತ್ತು ನಿವೇಶನ, ಮ.ಮ.ಬೆಟ್ಟ ಮಾರ್ಗದ ಸುಂಕ ವಸೂಲಿ ಸರಿಪಡಿಸಲು ಜಿಲ್ಲಾಧಿಕಾರಿಗೆ ಸೂಚನೆ ನೀಡಿಬೇಕು.
-ಶಾಸಕ ಎಂ.ಆರ್. ಮಂಜುನಾಥ್

### ಅರ್ಜಿಗಳನ್ನು ಆಧರಿಸಿ ಹಂತ ಹಂತವಾಗಿ ಸಮಸ್ಯೆ ಬಗೆಹರಿಸಲಾಗುವುದು ಎಂದು ಭರವಸೆ

ರಾಮಾಪುರ ಹೋಬಳಿ ಅತ್ಯಂತ ಹಿಂದುಳಿದ ಭಾಗ ಇಲ್ಲಿನ ಮೂಲಭೂತ ಸಮಸ್ಯೆಗಳಾದ ಕುಡಿಯುವ ನೀರು, ರಸ್ತೆ, ಬಸ್ ವ್ಯವಸ್ಥೆ ಬಗ್ಗೆ ನನಗೆ ಅರಿವಿದೆ. ಪ್ರಜಾಸೇವಾ ಆಂದೋಲನದ ಮೂಲಕ ಬಂದಿರುವ ಅರ್ಜಿಗಳನ್ನು ಆಧರಿಸಿ ಹಂತ ಹಂತವಾಗಿ ಸಮಸ್ಯೆ ಬಗೆಹರಿಸಲಾಗುವುದು ಎಂದು ಭರವಸೆ ನೀಡಿದರು.

## ಮಿನಿ ನ್ಯೂಸ್

### ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಾಲೂರು

ಶ್ರೀ ರೇಣುಕಾ ಯಲ್ಲಮ್ಮ ಬಳಗದ ಅಭಿವೃದ್ಧಿ ಸಂಘದ ವತಿಯಿಂದ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಾಳೆ ಜಿಲ್ಲಾಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾಧ್ಯಕ್ಷ ಬಂಡೂರು ಡಾ. ಪಿ. ನಾರಾಯಣಸ್ವಾಮಿ ತಿಳಿಸಿದ್ದಾರೆ.

ನಗರದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಕಾರ್ಯಕ್ರಮ ನಡೆಸಲು ನಿರ್ಧರಿಸಲಾಗಿತ್ತಾದರೂ, ಅಗತ್ಯ ಮೂಲಭೂತ ಸೌಲಭ್ಯಗಳು ಇಲ್ಲದ ಕಾರಣ ಮಾರುತಿ ಬಡಾವಣೆಯ ತಿರುಮಲ ಕಲ್ಯಾಣ ಮಂಟಪದಲ್ಲಿ ನಡೆಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲೆಯ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಆಯೋಜಿಸಿರುವ ಕಾರ್ಯಕ್ರಮಕ್ಕೆ ಸಮುದಾಯದ ಬಂಧುಗಳು, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಗೂ ನಿವೃತ್ತ ಬಿಇಒ ಬೆಳ್ಳಾರಪ್ಪ, ಜಿಲ್ಲಾ ಖಜಾಂಚಿ ಹಾಗೂ ನಿವೃತ್ತ ತಹಶೀಲ್ದಾರ್ ವೆಂಕಟರಾಮಯ್ಯ, ಸಂಘಟನಾ ಕಾರ್ಯದರ್ಶಿ ಹಾಗೂ ಬೆಂಗಳೂರು ನಗರ ಯೋಜನಾ ಪ್ರಾಧಿಕಾರದ ನಿವೃತ್ತ ಅಧಿಕಾರಿ ವೆಂಕಟೇಶಯ್ಯ, ನಿವೃತ್ತ ಶಿಕ್ಷಕ ಮುನಿರತ್ನಂ, ಮಾಜಿ ಗ್ರಾಪಂ ಅಧ್ಯಕ್ಷ ಶಿವಣ್ಣ, ಮುಖಂಡ ಚಲಪತಿ ಇನಿತರರು ಹಾಜರಿದ್ದರು.

### ಸೌಮ್ಯ ಚನ್ನಕೇಶವಸ್ವಾಮಿ ದೇವಾಲಯದ ಹುಂಡಿನಲ್ಲಿ 2.77 ಲಕ್ಷ


ಉದಯವಾಹಿನಿ ಚಿತ್ರ

• ಉದಯವಾಹಿನಿ, ವಿಜಯಪುರ

ಪಟ್ಟಣದ ಸೌಮ್ಯ ಚನ್ನಕೇಶವಸ್ವಾಮಿ ದೇವಾಲಯದಲ್ಲಿ, ಧಾರ್ಮಿಕ ದತ್ತಿ ಇಲಾಖೆ, ದೇವಾಲಯದ ವ್ಯವಸ್ಥಾಪನಾ ಸಮಿತಿ, ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಭಕ್ತಾದಿಗಳ ಸಮ್ಮುಖದಲ್ಲಿ ಹುಂಡಿ ಎಣಿಕೆ ಕಾರ್ಯ ಮಾಡಿದರು.

ಅಕ್ಟೋಬರ್ 2024ರ ನಂತರ ಇದೀಗ ದೇವಾಲಯದ ಹುಂಡಿಯಲ್ಲಿ 2 ಲಕ್ಷ 77 ಸಾವಿರದ 145 ರೂಪಾಯಿಗಳು ಸಂಗ್ರಹವಾಗಿದ್ದು, ಈ ಹುಂಡಿ ಹಣವನ್ನು ದೇವಾಲಯದ ಹೆಸರಿನಲ್ಲಿ ಎಸ್.ಬಿ.ಐ. ಬ್ಯಾಂಕಿನಲ್ಲಿರುವ ಖಾತೆಗೆ ಜಮೆ ಮಾಡಲಾಗಿದೆ.

ಉಪತಹಶೀಲ್ದಾರ್ ಮೋಹನ್ ಕುಮಾರ್ ಮಾತನಾಡಿ, ಧಾರ್ಮಿಕ ದತ್ತಿ ಇಲಾಖೆಯ ಸಮ್ಮುಖದಲ್ಲಿ, ಎಣಿಕೆ ಮಾಡಿದ ಕಾಣಿಕೆಯನ್ನು ಉಳಿತಾಯ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತಿದ್ದು, ಇಲಾಖೆಯ ನಿಯಮಗಳ ಪ್ರಕಾರ, ಮೇಲಾಧಿಕಾರಿಗಳು ಈ ಹಣದ ಬಳಕೆಯ ಕುರಿತು ತೀರ್ಮಾನಿಸುತ್ತಾರೆ.

ದೇವಾಲಯಗಳು ಜನರಲ್ಲಿ ಸಾಮರಸ್ಯವನ್ನು ಮೂಡಿಸುವಂತಹ ಕೇಂದ್ರಗಳಾಗಿದ್ದು, ಇಂತಹ ದೇವಾಲಯಗಳ ಅಭಿವೃದ್ಧಿಗಾಗಿ ಎಲ್ಲರೂ ಶ್ರಮಿಸಬೇಕಿದೆ ಎಂದರು.

### ವಿರಾಜಪೇಟೆ ಗಣೇಶ ವಿಸರ್ಜನೆ ವೇಳೆ ಕರೆಂಟ್ ಶಾಕ್

• ಉದಯವಾಹಿನಿ, ಕೊಡಗು


ಉದಯವಾಹಿನಿ ಚಿತ್ರ

ಕೊಡಗು ಜಿಲ್ಲೆಯ ವಿರಾಜಪೇಟೆಯಲ್ಲಿ ತಡರಾತ್ರಿ ನಡೆದ ಗಣೇಶ ವಿಸರ್ಜನಾ ಮೆರವಣಿಗೆ ವೇಳೆ, ಡಿಜೆ ವಾಹನಕ್ಕೆ ವಿದ್ಯುತ್ ತಂತಿ ತಗುಲಿದ್ದು, ಅವಘಡದಲ್ಲಿ ಐವರು ಗಾಯಗೊಂಡಿದ್ದಾರೆ. ಗಾಯಾಳುಗಳ ಪೈಕಿ ಇಬ್ಬರ ಸ್ಥಿತಿ ಗಂಭೀರವಾಗಿದೆ.

ಹುಬ್ಬಳ್ಳಿ - ಧಾರವಾಡ ಮೂಲದ ಬಸವರಾಜು ಹಾಗೂ ಮತ್ತೊಬ್ಬನ ಸ್ಥಿತಿ ಗಂಭೀರವಾಗಿದೆ. ಅವರಿಬ್ಬರನ್ನು ಮೈಸೂರು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಉಳಿದ ಮೂವರು ಗಾಯಾಳುಗಳನ್ನು ಮಡಿಕೇರಿಯ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಅಲಂಕೃತ ಮಂಟಪಗಳ ಮೆರವಣಿಗೆ ಸಾಗುತ್ತಿದ್ದ ಸಂದರ್ಭದಲ್ಲಿ ಡಿಜೆ ವಾಹನದ ಮೇಲಿದ್ದ ಐವರಿಗೆ ವಿದ್ಯುತ್ ತಂತಿ ತಗುಲಿದೆ. ಈ ಅವಘಡದಿಂದ ಐವರು ಅಸ್ವಸ್ಥಗೊಂಡಿದ್ದು, ತಕ್ಷಣ ಆಸ್ಪತ್ರೆಗೆ ದಾಖಲಿಸಲಾಯಿತು.ಓರ್ವನ ಮೈಮೇಲಿನ ಬಟ್ಟೆಗಳಿಗೆ ಬೆಂಕಿ ಹೊತ್ತಿಕೊಂಡ ಘಟನೆಯೂ ನಡೆಯಿತು. ಅದೃಷ್ಟವಶಾತ್ ದೊಡ್ಡ ಅನಾಹುತವೊಂದು ತಪ್ಪಿದೆ. ಆದರೆ ಇಬ್ಬರು ಸ್ಥಳದಲ್ಲೇ ಪ್ರಜ್ಞಾಹೀನರಾಗಿದ್ದರು ಎಂದು ವರದಿಯಾಗಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಎನ್. ಬಿಂದುಮಣಿ ಮತ್ತು ಇತರ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಅವರು ಆಸ್ಪತ್ರೆಗೆ ಭೇಟಿ ನೀಡಿ, ಗಾಯಗೊಂಡವರ ಆರೋಗ್ಯ ಸ್ಥಿತಿಯ ಬಗ್ಗೆ ವಿಚಾರಿಸಿದರು ಮತ್ತು ವೈದ್ಯರೊಂದಿಗೆ ಚರ್ಚಿಸಿದರು.

### ಹೆಚ್‌ಡಿಕೆ ಸಿಎಂ ಆಗುವುದು ಸಂಕಲ್ಪವಾಗಲಿ: ನಿಂಗಪ್ಪ

• ಉದಯವಾಹಿನಿ, ತುಮಕೂರು

ಮುಂದಿನ ಅವಧಿಯಲ್ಲಿ ಹೆಚ್.ಡಿ.ಕುಮಾರಸ್ವಾಮಿಯವರು ರಾಜ್ಯದ ಮುಖ್ಯಮಂತ್ರಿ ಆಗಬೇಕು ಎಂದು ಎಲ್ಲಾ ಕಾರ್ಯಕರ್ತರು ಸಂಕಲ್ಪ ಮಾಡಿ ಪಕ್ಷ ಸಂಘಟನೆಗೆ ಶ್ರಮಿಸಬೇಕು. ಹಿಂದೆ ಕುಮಾರಣ್ಣ ಮುಖ್ಯಮಂತ್ರಿಯಾಗಿ ನಾಡಿಗೆ ನೀಡಿದ್ದ ಉತ್ತಮ ಕಾರ್ಯಕ್ರಮಗಳನ್ನು ಜನರಿಗೆ ಪರಿಚಯಿಸಬೇಕು ಎಂದು ಜಿಲ್ಲಾ ಜೆಡಿಎಸ್ ಅಧ್ಯಕ್ಷ ಹೆಚ್.ನಿಂಗಪ್ಪ ಕಾರ್ಯಕರ್ತರಿಗೆ ಮನವಿ ಮಾಡಿದರು.

ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಜೆಡಿಎಸ್ ಸುಭದ್ರವಾಗಿದೆ. 11 ವಿಧಾನಸಭಾ ಕ್ಷೇತ್ರಗಳಲ್ಲಿ 9 ಸ್ಥಾನಗಳನ್ನು ಜೆಡಿಎಸ್ ಗೆದ್ದು ಬೀಗಿದ ಇತಿಹಾಸವಿದೆ. ಅಂತಹ ಗೆಲುವನ್ನು 2028ರ ಚುನಾವಣೆಯಲ್ಲಿ ಪಡೆದು ಕುಮಾರಣ್ಣನವರು ಮುಖ್ಯಮಂತ್ರಿ ಹುದ್ದೆ ಪಡೆಯಲು ನಾವೆಲ್ಲಾ ಕೆಲಸ ಮಾಡಬೇಕು.


ಉದಯವಾಹಿನಿ ಚಿತ್ರ

ಇದಕ್ಕಾಗಿ ಪಕ್ಷದ ವಿವಿಧ ಘಟಕಗಳಿಗೆ ಉತ್ಸಾಹಿಗಳನ್ನು ನೇಮಕ ಮಾಡಿ ಸಂಘಟನೆಯನ್ನು ಬಲವರ್ಧನೆ ಮಾಡಲಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೊರಟಗೆರೆ ತಾಲ್ಲೂಕು ತೋವಿನಕೆರೆಯ ಕೆ.ಮಂಜುನಾಥ್ ಅವರನ್ನು ಜೆಡಿಎಸ್ ಜಿಲ್ಲಾ ಕಾರ್ಯದರ್ಶಿಯಾಗಿ ನೇಮಕ ಮಾಡಿ ಜಿಲ್ಲಾಧ್ಯಕ್ಷ ಹೆಚ್.ನಿಂಗಪ್ಪ ನೇಮಕಾತಿ ಪತ್ರ ವಿತರಿಸಿದರು. ಸುಮಾರು ಎಂಟು ವರ್ಷ ಪಕ್ಷದ ಸೇವಾದಳ ವಿಭಾಗದಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದ ಮಂಜುನಾಥ್ ಅವರನ್ನು ಜಿಲ್ಲಾ ಘಟಕಕ್ಕೆ ನೇಮಕ ಮಾಡಲಾಗಿದೆ. ವಹಿಸಿರುವ ಜವಾಬ್ದಾರಿಯನ್ನು ಶ್ರದ್ಧೆಯಿಂದ ನಿರ್ವಹಿಸಿ ಜಿಲ್ಲೆಯಲ್ಲಿ ಪಕ್ಷವನ್ನು ಪರಿಣಾಮಕಾರಿಯಾಗಿ ಸಂಘಟಿಸುವಂತೆ ಹೆಚ್. ನಿಂಗಪ್ಪ ಸೂಚಿಸಿದರು.

## ಅಮರಾವತಿ ಗ್ರಾಮದಲ್ಲಿ 220/110 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರ ಸ್ಥಾಪನೆಗೆ ಸಚಿವ ಕಾಶಪ್ಪನವರ್ ಶಂಕು ಸ್ಥಾಪನೆ

# 147 ಕೋಟಿ ವೆಚ್ಚದ ಕಾಮಗಾರಿಗೆ ಸಚಿವ ಕಾಶಪ್ಪನವರ ಚಾಲನೆ

**ಉದಯವಾಹಿನಿ, ಬಾಗಲಕೋಟೆ**

ಜಿಲ್ಲೆಯ ಹುನಗುಂದ ತಾಲ್ಲೂಕಿನ ಅಮರಾವತಿ ಗ್ರಾಮದಲ್ಲಿ 147 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ 220/110 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರದ ಕಾಮಗಾರಿಗೆ ಸಣ್ಣ ಕೈಗಾರಿಕೆ, ಸಾರ್ವಜನಿಕ ಉದ್ಯಮಗಳ ಸಚಿವ ವಿಜಯಾನಂದ ಕಾಶಪ್ಪನವರ ಶಂಕುಸ್ಥಾಪನೆ ನೆರವೇರಿಸಿದ್ದಾರೆ.

**1.**220 ಕೆವಿ ಸ್ಟೇಷನ್ ನಿರ್ಮಾಣ
**2.**ಏತ ನೀರಾವರಿ ಯೋಜನೆ
**3.**ರೈತರಿಗೆ ನೀರಾವರಿ ಸೌಲಭ್ಯ



ಉದಯವಾಹಿನಿ ಚಿತ್ರ

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ಅಮರಾವತಿ ಗ್ರಾಮದಲ್ಲಿ ಜರುಗಿದ ಶಂಕುಸ್ಥಾಪನಾ ಸಮಾರಂಭವನ್ನು ನೆರವೇರಿಸಿ ಮಾತನಾಡಿದ ಅವರು ಕಳೆದ ಮೂರು ವರ್ಷಗಳ ಸತತ ಪ್ರಯತ್ನದ ಫಲವಾಗಿ ಅಮರಾವತಿಯಲ್ಲಿ 220 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರ ಸ್ಥಾಪನೆಗೆ ಮಂಜೂರಾತಿ ದೊರೆತಿದೆ. 20 ಎಕರೆ ಜಮೀನಿನಲ್ಲಿ ಇದೀಗ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಮೂಲತಃ ಇಂದಿನ ಸಚಿವ ಕೆ.ಜೆ.ಜಾರ್ಜ್ ಅವರು ಶಂಕುಸ್ಥಾಪನೆ ನೆರವೇರಿಸಬೇಕಾಗಿತ್ತು. ಆದರೆ ಪ್ರಸ್ತುತ ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಹಿನ್ನೆಲೆಯಲ್ಲಿ ತಮಗೆ ಈ ಅವಕಾಶ ಕಲ್ಪಿಸಿಕೊಡಲಾಗಿದೆ ಎಂದು ಸಚಿವ ಕಾಶಪ್ಪನವರ ಹೇಳಿದ್ದಾರೆ.

ಅಮರಾವತಿಯಲ್ಲಿ 220 ಕೆವಿ ಸ್ಟೇಷನ್ ನಿರ್ಮಾಣದಿಂದ ಮರೋಳ, ಕೊಪ್ಪಳ ಹಾಗೂ ನಂದವಾಡಗಿ ಏತ ನೀರಾವರಿ ಯೋಜನೆಗಳಿಗೆ ಹೆಚ್ಚಿನ ಅನುಕೂಲವಾಗಲಿದೆ. ಏತ ನೀರಾವರಿ ಯೋಜನೆಗಳಿಗೆ ಅಗತ್ಯವಿರುವ ವಿದ್ಯುತ್‌ಅನ್ನು ಅಡಚಣೆಯಿಲ್ಲದೆ ಪೂರೈಸಬೇಕಾಗುತ್ತದೆ. ಈ ಸ್ಟೇಷನ್ ನಿರ್ಮಾಣದಿಂದ ಸಾಧ್ಯವಾಗಲಿದೆ ಎಂದು ಅವರು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಮಳೆಯ ಕೊರತೆಯಿಂದ ಬರ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ರೈತರ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವುದು ಅತ್ಯಂತ ಅಗತ್ಯವಾಗಿದೆ. ರೈತರಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ವಿದ್ಯುತ್ ಪೂರೈಕೆ ನಿರಂತರವಾಗಿರಬೇಕು. ಇದರ ಜೊತೆಗೆ ಕಾಲುವೆಗಳಿಗೆ ನೀರು ಹರಿಸಲು ಸಹ ವಿದ್ಯುತ್ ಅಗತ್ಯವಿದ್ದು, ಪ್ರಸ್ತುತ ವಿದ್ಯುತ್ ಕೊರತೆಯಿಂದ ಕೆಲವೊಮ್ಮೆ ಅಡಚಣೆ ಉಂಟಾಗುತ್ತಿದೆ. 220 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರದಿಂದ ಈ ಸಮಸ್ಯೆ ನಿವಾರಣೆಗೆ ಹೆಚ್ಚಿನ ನೆರವಾಗಲಿದೆ ಎಂದು ಸಚಿವರು ಹೇಳಿದ್ದಾರೆ. ಸದ್ಯದಲ್ಲಿಯೇ ಇದಕ್ಕೂ ಸಹ ಭೂಮಿ ಪೂಜೆ ನೆರವೇರಿಸಲಾಗುತ್ತಿದೆ. ಈ ವಿದ್ಯುತ್ ಮೂಲಸೌಕರ್ಯಗಳ ಅಭಿವೃದ್ಧಿಯಿಂದ ರೈತರಿಗೆ, ನೀರಾವರಿ ಯೋಜನೆಗಳಿಗೆ ಹಾಗೂ ಗ್ರಾಮೀಣ ಪ್ರದೇಶಗಳ ವಿದ್ಯುತ್ ಬೇಡಿಕೆಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಸಚಿವರು ಹೇಳಿದ್ದಾರೆ. ಪ್ರಾರಂಭದಲ್ಲಿ ಬಾಗಲಕೋಟೆ ವಿದ್ಯುಚ್ಛಕ್ತಿ ಪ್ರಸರಣ ವಲಯದ ಮುಖ್ಯ ಅಭಿಯಂತರ ಬಸವರಾಜ ಎಸ್.ಹೆಚ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಅನೀಲಕುಮಾರ ದಡ್ಡಿ, ಹುನಗುಂದ ತಾಲ್ಲೂಕಾ ಗ್ಯಾರಂಟಿ ಯೋಜನೆ ಸಮಿತಿಯ ಅಧ್ಯಕ್ಷ ಮುತ್ತಣ್ಣ ಕಲಗೋಡಿ, ಜಿಲ್ಲಾಧಿಕಾರಿ ಸಂಗಪ್ಪ, ಜಿ. ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ವಿದ್ಯುಚ್ಛಕ್ತಿ ಪ್ರಸರಣ ವಲಯದ ಅಧೀಕ್ಷಕ ಅಭಿಯಂತರ ರಮೇಶ ಪವಾರ್, ಕಾರ್ಯನಿರ್ವಾಹಕ ಇಂಜಿನೀಯರ್ ಪ್ರಭುಸಿಂಗ್ ಹಜಾರೆ, ಹೆಸ್ಕಾಂನ ಅಧೀಕ್ಷಕ ಅಭಿಯಂತರ ಸಿ.ಬಿ.ಯಂಕಂಚಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

> ಅಮರಾವತಿಯಲ್ಲಿ 220 ಕೆವಿ ಸ್ಟೇಷನ್ ಸ್ಥಾಪನೆಯಿಂದ ಹುನಗುಂದ, ಇಲಕಲ್ಲ ತಾಲ್ಲೂಕು ಸೇರಿದಂತೆ ಜಿಲ್ಲೆಯ ನೀರಾವರಿ ಹಾಗೂ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ವಿದ್ಯುತ್ ಪೂರೈಕೆ ವ್ಯವಸ್ಥೆ ಮತ್ತಷ್ಟು ಬಲಪಡಲಿದೆ.
> – ವಿಜಯಾನಂದ ಕಾಶಪ್ಪನವರ, ಸಚಿವ

**5 ಎಕರೆ ಜಮೀನು ನೀಡಲಾಗಿದೆ**

ಅಮರಾವತಿಯ 220 ಕೆವಿ ಸ್ಟೇಷನ್ ನಿರ್ಮಾಣವಲ್ಲದೇ ಕುಣಬೆಂಚಿ, ಚಿಕ್ಕಮಾಗಿ ಹಾಗೂ ಮರೋಳ ಗ್ರಾಮಗಳಲ್ಲಿ ಹೊಸದಾಗಿ 110 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರಗಳನ್ನು ಸ್ಥಾಪಿಸುವಂತೆ ಸಹ ಮನವಿ ಮಾಡಲಾಗಿತ್ತು. ಸದ್ಯ ಕುಣಬೆಂಚಿಯಲ್ಲಿ 110 ಕೆವಿ ಸ್ಟೇಷನ್ ನಿರ್ಮಾಣಕ್ಕೆ ಈಗಾಗಲೇ ಟೆಂಡರ್ ಪ್ರಕ್ರಿಯೆ ಹಂತದಲ್ಲಿದ್ದು, ಕಾಮಗಾರಿಗೆ ಅಗತ್ಯವಿರುವ 5 ಎಕರೆ ಜಮೀನನ್ನು ಜಿಲ್ಲಾಡಳಿತದಿಂದ ಒದಗಿಸಲಾಗಿದೆ.

## ಕರ್ತವ್ಯ ಲೋಪವೆಸಗಿದರೆ ಕಠಿಣ ಕ್ರಮ

**ಉದಯವಾಹಿನಿ, ಹೊಸಪೇಟೆ**

ಅರ್ಜಿ ಸಲ್ಲಿಸಲು ಬರುವ ಸಾರ್ವಜನಿಕರೊಂದಿಗೆ ಗ್ರಾಮ ಒನ್ ಸಿಬ್ಬಂದಿ ಹಾಗೂ ಅಧಿಕಾರಿಗಳು ಮಾನವೀಯತೆಯಿಂದ ವರ್ತಿಸಬೇಕು. ಕರ್ತವ್ಯ ಲೋಪವೆಸಗಿದರೆ ಅಂತಹವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಹಶೀಲ್ದಾರ್ ಶೃತಿ ಅವರು ಸಿಬ್ಬಂದಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.




ಉದಯವಾಹಿನಿ ಚಿತ್ರ

ತಾಲ್ಲೂಕು ಆಡಳಿತದ ವತಿಯಿಂದ ಜಿಲ್ಲಾ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಹೋಬಳಿ ಮಟ್ಟದ ಪ್ರಜಾಸೇವಾ ಕಾರ್ಯಕ್ರಮದಲ್ಲಿ ಸಾರ್ವಜನಿಕರ ಅಹವಾಲು ಆಲಿಸಿ, ಅವರು ಹಲವು ಮನವಿಗಳಿಗೆ ತಕ್ಷಣದ ಸ್ಪಂದಿಸಿದರು. ಕಾರ್ಯಕ್ರಮದಲ್ಲಿ ಒಟ್ಟು 270 ಅರ್ಜಿಗಳು ಸ್ವೀಕೃತವಾಗಿದ್ದು, ಅದರಲ್ಲಿ ಮನೆ, ನಿವೇಶನಕ್ಕೆ ಸಂಬಂಧಿಸಿದಂತೆ 220, ಪಡಿತರ ಚೀಟಿಗಾಗಿ 10 ಹಾಗೂ ಪಿಂಚಣಿಗೆ ಸಂಬಂಧಿಸಿದಂತೆ 5 ರಿಂದ 6 ಅರ್ಜಿಗಳು ಬಂದಿವೆ ಎಂದು ಮಾಹಿತಿ ನೀಡಿದರು. ಅಹವಾಲು ಸ್ವೀಕರಿಸಿದ ಸಂದರ್ಭದಲ್ಲಿ ಮಾರುತಿ ಕಾಲೋನಿಯ ದೃಷ್ಟಿವಿಕಲಚೇತನ ವ್ಯಕ್ತಿಯೊಬ್ಬರ ಮನೆ ಬೆಂಕಿಗಾಹುತಿಯಾಗಿ, ಯಾವುದೇ ಗುರುತಿನ ಚೀಟಿ ಇಲ್ಲದೆ ಸಂಕಷ್ಟದಲ್ಲಿದ್ದರು. ಅವರಿಗೆ ಕಣ್ಣಿನ ಶಸ್ತ್ರಚಿಕಿತ್ಸೆಯ ಅಗತ್ಯವಿರುವುದನ್ನು ಮನಗಂಡ ತಹಶೀಲ್ದಾರ್, ವೈದ್ಯಕೀಯ ಕಾರಣಕ್ಕಾಗಿ ತಕ್ಷಣವೇ ಪಡಿತರ ಚೀಟಿ ಒದಗಿಸಲು ಅಧಿಕಾರಿಗಳಿಗೆ ಸ್ಥಳದಲ್ಲೇ ನಿರ್ದೇಶನ ನೀಡಿದರು. ಗುರುತಿನ ಚೀಟಿ, ದಾಖಲೆಗಳಿಲ್ಲದೆ ಕಷ್ಟಪಡುತ್ತಿದ್ದ ವೃದ್ಧೆಯೊಬ್ಬರ ಸ್ಥಿತಿಯನ್ನು ಕಂಡು ಬೇಸರ ವ್ಯಕ್ತಪಡಿಸಿದ ಅವರು, ಅಗತ್ಯವಿರುವ ಅಧಿಕೃತ ದಾಖಲೆಗಳನ್ನು ಜಾಲತಾಣಗಳಲ್ಲಿ ಪರಿಶೀಲಿಸಲಾಗುವುದು. ಇಲಾಖೆಯ ಅಧಿಕೃತ ಜಾಲತಾಣಗಳಲ್ಲಿ ಲಭ್ಯವಿದ್ದರೆ ಸೋಮವಾರ ದಾಖಲೆ ನೀಡಲಾಗುವುದು. ಇಲ್ಲವಾದಲ್ಲಿ ಶೀಘ್ರವಾಗಿ ದಾಖಲೆ ಮಾಡಿಸಿಕೊಡಲು ಸಂಬಂಧಿಸಿದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

## ಬಟ್ಟೆ ಬಿಚ್ಚಿಸಿ ಹಲ್ಲೆ ನಡೆಸಿದ್ದ ವಿದ್ಯಾರ್ಥಿಗಳ ಬಂಧನ!

**ಉದಯವಾಹಿನಿ, ಮಂಗಳೂರು**

ಮಂಗಳೂರಿನ ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ಬಿಬಿಎ ಪ್ರಥಮ ವರ್ಷದ ಇಬ್ಬರು ವಿದ್ಯಾರ್ಥಿಗಳ ಮೇಲೆ ಕಾಲೇಜಿನ ಹಿರಿಯ ವಿದ್ಯಾರ್ಥಿಗಳು ರ್‍ಯಾಗಿಂಗ್ ಮಾಡಿ, ಅಮಾನುಷವಾಗಿ ಬೆಲ್ಟ್ ನಿಂದ ಹಲ್ಲೆ ನಡೆಸಿರುವ ಘಟನೆ ಬೆಳಕಿಗೆ ಬಂದಿದೆ. ಕೇರಳ ಮೂಲದ ಬಿಬಿಎ ವಿದ್ಯಾರ್ಥಿಗಳ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ ಐವರು ದ್ವಿತೀಯ ವರ್ಷದ ಕಾಲೇಜು ವಿದ್ಯಾರ್ಥಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಇಬ್ಬರು ಪ್ರಥಮ ವರ್ಷದ ಬಿಬಿಎ ವಿದ್ಯಾರ್ಥಿಗಳು, ಸೆಪ್ಟೆಂಬರ್ 19 ರಂದು ಪಾಂಡೇಶ್ವರ ಪ್ರದೇಶದಲ್ಲಿರುವ ತಮ್ಮ ಕಾಲೇಜಿನ ಬಳಿ ನಡೆದುಕೊಂಡು ಹೋಗುತ್ತಿದ್ದಾಗ, ಹಿರಿಯ ವಿದ್ಯಾರ್ಥಿಗಳ ಗುಂಪೊಂದು ಅವರನ್ನು ಬೈಕ್‌ಗಳಲ್ಲಿ ಕರೆದೊಯ್ದಿತ್ತು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಆರೋಪಿಗಳು ಆ ಇಬ್ಬರು ವಿದ್ಯಾರ್ಥಿಗಳನ್ನು ನಿರ್ಜನ ಪ್ರದೇಶವೊಂದಕ್ಕೆ ಕರೆದೊಯ್ದು, ಅವರ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ದೂರಿನ ಪ್ರಕಾರ, ವಿದ್ಯಾರ್ಥಿಗಳ ಬಟ್ಟೆ ಬಿಚ್ಚಿಸಿ, ಅವರ ಮೇಲೆ ಬೆಲ್ಟ್ ಹಾಗೂ ಇತರ ಲೋಹದ ಸರಳುಗಳು ಮತ್ತು ಪೈಪ್‌ಗಳಿಂದ ಹಲ್ಲೆ ನಡೆಸಲಾಗಿದೆ. ಅಲ್ಲದೆ ಈ ಘಟನೆಯ ಬಗ್ಗೆ ಕಾಲೇಜು ಆಡಳಿತ ಮಂಡಳಿಗೆ ಅಥವಾ ಪೊಲೀಸರಿಗೆ ದೂರು ನೀಡಿದರೆ ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಬೆದರಿಕೆ ಹಾಕಿದ್ದಾರೆ. ನಂತರ ಗಾಯಗೊಂಡ ವಿದ್ಯಾರ್ಥಿಗಳು ಮನೆಗೆ ಮರಳಿ, ತಮ್ಮ ಪೋಷಕರ ಸಹಾಯದೊಂದಿಗೆ ಪಾಂಡೇಶ್ವರ ಪೊಲೀಸರಿಗೆ ದೂರು ನೀಡಿದ್ದಾರೆ. ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ಉದಯವಾಹಿನಿ ಚಿತ್ರ

## ರಾಜ್ಯಪಾಲರ ನಿರ್ದೇಶನ ಪಾಲಿಸಿದ VTU; ಪೂರ್ಣ 'ವಂದೇ ಮಾತರಂ' ಗಾಯನ




ಉದಯವಾಹಿನಿ ಚಿತ್ರ

**ಉದಯವಾಹಿನಿ, ಬೆಳಗಾವಿ**

ರಾಜ್ಯಪಾಲ ಹಾಗೂ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿ ದ್ಯಾಲಯದ ಕುಲಾಧಿಪತಿ ಥಾವರ್‌ಚಂದ್ ಗೆಹ್ಲೋಟ್ ಅವರ ನಿರ್ದೇಶನದ ಮೇರೆಗೆ ಬೆಳಗಾವಿಯಲ್ಲಿ ನಿನ್ನೆ ನಡೆದ ವಿಟಿಯುನ 26ನೇ ವಾರ್ಷಿಕ ಘಟಿಕೋತ್ಸವದಲ್ಲಿ 'ವಂದೇ ಮಾತರಂ'ನ ಪೂರ್ಣ ಆವೃತ್ತಿಯನ್ನು ಹಾಡಲಾಯಿತು.

ರಾಜ್ಯ ಸರ್ಕಾರದ ಕಾರ್ಯಕ್ರಮಗಳಲ್ಲಿ ರಾಷ್ಟ್ರಗೀತೆಯಾದ 'ವಂದೇ ಮಾತರಂ'ನ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವಂತೆ ಸರ್ಕಾರ ಸೆಪ್ಟೆಂಬರ್ 8ರಂದು ಹೊರಡಿಸಿದ್ದ ಆದೇಶದ ಹಿನ್ನೆಲೆಯಲ್ಲಿ ಈ ಬೆಳವಣಿಗೆ ನಡೆದಿದೆ. ಬಳಿಕ ರಾಜ್ಯಪಾಲರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದು, ಆದೇಶವನ್ನು ಮರುಪರಿಶೀಲಿಸುವಂತೆ ಹಾಗೂ ಕೇಂದ್ರ ಸರ್ಕಾರದ ಜಾರಿಯಲ್ಲಿರುವ ಮಾರ್ಗಸೂಚಿಗಳನ್ನು ಪಾಲಿಸುವಂತೆ ಮನವಿ ಮಾಡಿದ್ದರು.

ವಿಟಿಯು ಘಟಿಕೋತ್ಸವದಲ್ಲಿ ರಾಜ್ಯಪಾಲ ಗೆಹ್ಲೋಟ್, ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಹಾಗೂ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರ ಉಪಸ್ಥಿತಿಯಲ್ಲಿ 'ವಂದೇ ಮಾತರಂ'ನ ಎಲ್ಲಾ ಆರು ಚರಣಗಳನ್ನು ಹಾಡಲಾಯಿತು. ಕುಲಾಧಿಪತಿಯಾಗಿ ತಮ್ಮ ಅಧಿಕಾರವನ್ನು ಬಳಸಿ, ಘಟಿಕೋತ್ಸವದಲ್ಲಿ 'ವಂದೇ ಮಾತರಂ'ನ ಸಂಪೂರ್ಣ ಆವೃತ್ತಿಯನ್ನು ಹಾಡುವುದನ್ನು ಖಚಿತಪಡಿಸಿಕೊಳ್ಳುವಂತೆ ಗೆಹ್ಲೋಟ್ ಅವರು ವಿಟಿಯುಗೆ ನಿರ್ದಿಷ್ಟವಾಗಿ ನಿರ್ದೇಶನ ನೀಡಿದ್ದರು. ಅಧಿಕೃತ ಕಾರ್ಯಕ್ರಮಗಳಲ್ಲಿ ಸಾಮಾನ್ಯವಾಗಿ 'ವಂದೇ ಮಾತರಂ'ನ ಮೊದಲ ಎರಡು ಚರಣಗಳನ್ನು ಮಾತ್ರ ಹಾಡಬೇಕು ಎಂದು ರಾಜ್ಯ ಸರ್ಕಾರ ನಿರ್ಧರಿಸಿದ ಬಳಿಕ ಈ ವಿಚಾರ ಗಮನ ಸೆಳೆದಿತ್ತು. ಆದರೆ ರಾಷ್ಟ್ರಪತಿ, ಉಪ ರಾಷ್ಟ್ರಪತಿ, ಪ್ರಧಾನಮಂತ್ರಿ ಅಥವಾ ರಾಜ್ಯಪಾಲರು ಉಪಸ್ಥಿತರಿದ್ದ ಸಂದರ್ಭದಲ್ಲಿ ಸಂಪೂರ್ಣ ಆವೃತ್ತಿಯನ್ನು ಹಾಡಬಹುದು ಎಂದು ಸರ್ಕಾರ ಸೂಚಿಸಿತ್ತು.

## ಮಧು ಬಂಗಾರಪ್ಪ, MLCಗಳ ಬಣ್ಣ ಬಯಲು ಮಾಡುತ್ತೇನೆ, ವಿಡಿಯೋ ಕ್ಲಿಪ್‌ಗಳಿವೆ

**ಉದಯವಾಹಿನಿ, ಶಿವಮೊಗ್ಗ**

ಸಚಿವ ಮಧು ಬಂಗಾರಪ್ಪ ಹಾಗೂ ವಿಧಾನ ಪರಿಷತ್ ಸದಸ್ಯರಾದ ಬಲ್ಕೀಸ್ ಬಾನು ಮತ್ತು ಮಂಜುನಾಥ್ ಭಂಡಾರಿ ಅವರು ಕಾಂಗ್ರೆಸ್ ನಾಯಕರ ಕುರಿತು ಮಾತನಾಡಿದ್ದಾರೆ ಎನ್ನಲಾದ ಹೇಳಿಕೆಗಳ ವಿಡಿಯೋ ತುಣುಕುಗಳು ನನ್ನ ಬಳಿ ಇದ್ದು, ಈ ವಿಡಿಯೋಗಳನ್ನು ಪಕ್ಷದ ಹಿರಿಯ ನಾಯಕರಿಗೆ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಸಲ್ಲಿಸುತ್ತೇನೆಂದು ಶಿವಮೊಗ್ಗ–ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಚ್.ಎಸ್. ಸುಂದರೇಶ್ ಹೇಳಿದ್ದಾರೆ ಅವರು ಹೇಳಿದ್ದಾರೆ.



ಶಿವಮೊಗ್ಗದ ಖಾಸಗಿ ಹೋಟೆಲ್‌ನಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಹಿಂದೆ ನಡೆಸಿದ್ದ ಸುದ್ದಿಗೋಷ್ಠಿಯಲ್ಲಿ ತಾವು ನೀಡಿದ್ದ ಬಹುತೇಕ ಹೇಳಿಕೆಗಳಿಗೆ ಬದ್ಧವಾಗಿರುವುದಾಗಿ ಹೇಳಿದರು. ಆದರೆ, ಕೆಲವು ಹೇಳಿಕೆಗಳ ಬಗ್ಗೆ ವಿಷಾದ ವ್ಯಕ್ತಪಡಿಸಿದರು. ಶೀಘ್ರದಲ್ಲೇ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ಎಲ್ಲ ಬೆಳವಣಿಗೆಗಳ ಬಗ್ಗೆ ಅವರಿಗೆ ಮಾಹಿತಿ ನೀಡುತ್ತೇನೆ ಎಂದು ಹೇಳಿದರು. ಇದೇ ವೇಳೆ ಮಾಜಿ ಸಚಿವ ಕಿಮ್ಮನೆ ರತ್ನಾಕರ್ ಅವರ ವಿರುದ್ಧ ಅನುಚಿತ ಪದ ಬಳಕೆ ಮಾಡಿದ್ದಕ್ಕೆ ಸುಂದರೇಶ್ ಕ್ಷಮೆಯಾಚಿಸಿದರು. ಡಿಸಿಸಿ ಬ್ಯಾಂಕ್ ಅಧ್ಯಕ್ಷ ಆರ್.ಎಂ. ಮಂಜುನಾಥ್ ಗೌಡ ಅವರ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದರೆ ಅದಕ್ಕೂ ಕ್ಷಮೆಯಾಚಿಸುವುದಾಗಿ ಹೇಳಿದರು. ಮಧು ಬಂಗಾರಪ್ಪ ಅವರನ್ನು ಏಕವಚನದಲ್ಲಿ ಉಲ್ಲೇಖಿಸಿದ್ದಕ್ಕೆ ವಿಷಾದವಿದೆ. ಆದರೆ ಸಚಿವರ ಕುರಿತು ತಾವು ಈ ಹಿಂದೆ ನೀಡಿದ್ದ ಇತರ ಹೇಳಿಕೆಗಳಿಗೆ ಬದ್ಧವಾಗಿರುವುದಾಗಿ ಅವರು ಸ್ಪಷ್ಟಪಡಿಸಿದರು.

## ಬರಗಾಲದ ಬವಣೆಗೆ ಕಾವ್ಯದ ಧ್ವನಿ–ರೈತರ ಆತ್ಮಸ್ಥೈರ್ಯಕ್ಕೆ ಕವಿಗಳ ನುಡಿ

**ಉದಯವಾಹಿನಿ, ಜೇವರ್ಗಿ**

ಅಕ್ಷರ ಕಲಿಸುವ ಶಿಕ್ಷಕ ಕೇವಲ ಪಾಠ ಹೇಳುವ ವ್ಯಕ್ತಿಯಲ್ಲ; ವಿದ್ಯಾರ್ಥಿಯ ಬದುಕಿಗೆ ದಿಕ್ಕು ತೋರಿಸುವ ಮಾರ್ಗದರ್ಶಕ, ಸಮಾಜದ ಭವಿಷ್ಯ ರೂಪಿಸುವ ಶಿಲ್ಪಿ. ಅಂತಹ ಶಿಕ್ಷಕರ ಸೇವೆಯನ್ನು ಸ್ಮರಿಸುವುದರೊಂದಿಗೆ, ಬರಗಾಲದಿಂದ ಸಂಕಷ್ಟಕ್ಕೊಳಗಾದ ರೈತರ ಬದುಕಿನ ನೋವು, ಹತಾಶೆ ಮತ್ತು ಆತ್ಮಸ್ಥೈರ್ಯಕ್ಕೆ ಕಾವ್ಯದ ಮೂಲಕ ಧ್ವನಿ ನೀಡಿದ ಅರ್ಥಪೂರ್ಣ ಕಾರ್ಯಕ್ರಮವೊಂದು ಜೇವರ್ಗಿಯಲ್ಲಿ ನಡೆಯಿತು.

ತಾಲ್ಲೂಕು ಕಸಾಪ ಜೇವರ್ಗಿ ಶಿಕ್ಷಕರ ದಿನಾಚರಣೆ ಅಂಗವಾಗಿ 'ಸಾರ್ಥಕ ಶಿಕ್ಷಕ ಪ್ರಶಸ್ತಿ ಹಾಗೂ "ಬರಗಾಲ ಬವಣೆ" ಕವಿಗೋಷ್ಠಿ' ಕಾರ್ಯಕ್ರಮ ಸೆ.26ರಂದು ಸಂಜೆ ಪಟ್ಟಣದ ಸಜ್ಜನ ಕಲ್ಯಾಣ ಮಂಟಪದಲ್ಲಿ ನಡೆಯಿತು. ಸೊನ್ನ ವಿರಕ್ತ ಮಠದ ಪೂಜ್ಯ ಶ್ರೀ ಡಾ. ಮ.ನಿ.ಪ್ರ. ಶಿವಾನಂದ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಿಕ್ಷಣದ ಮೌಲ್ಯ, ಶಿಕ್ಷಕರ ಜವಾಬ್ದಾರಿ, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಗುರುವಿನ ಪಾತ್ರ ಹಾಗೂ ಸಮಾಜಮುಖಿ ಶಿಕ್ಷಣದ ಅಗತ್ಯತೆಯ ಕುರಿತು ಗಣ್ಯರು ಹಾಗೂ ಸಾಹಿತಿಗಳು ಮಾತನಾಡಿದರು. ಒಬ್ಬ ಶಿಕ್ಷಕನ ಮಾತು ವಿದ್ಯಾರ್ಥಿಯ ಬದುಕಿನಲ್ಲಿ ವರ್ಷಗಳ ಕಾಲ ಪ್ರತಿಧ್ವನಿಸಬಹುದು. ತರಗತಿಯ ನಾಲ್ಕು ಗೋಡೆಗಳೊಳಗೆ ನೀಡುವ ಜ್ಞಾನವು ವಿದ್ಯಾರ್ಥಿಯ ವೈಯಕ್ತಿಕ ಬದುಕನ್ನು ಮಾತ್ರವಲ್ಲದೆ ಕುಟುಂಬ, ಸಮಾಜ ಹಾಗೂ ರಾಷ್ಟ್ರದ ಭವಿಷ್ಯವನ್ನೂ ರೂಪಿಸುವ ಶಕ್ತಿಯನ್ನು ಹೊಂದಿದೆ.

## ಮಿನಿ ನ್ಯೂಸ್

## ಕೇಂದ್ರ NDRF ಮಾರ್ಗಸೂಚಿ ಬದಲಿಸುತ್ತಿಲ್ಲ

**ಉದಯವಾಹಿನಿ, ಬೆಳಗಾವಿ**

ಎನ್‌ಡಿಆರ್‌ಎಫ್ ಮಾರ್ಗಸೂಚಿ ಬದಲಾವಣೆ ಮಾಡುವಂತೆ ಈ ಹಿಂದೆ ಸಿದ್ದರಾಮಯ್ಯ, ನಾನು, ಸಿಎಂ ಡಿ.ಕೆ.ಶಿವಕುಮಾರ, ಕೃಷ್ಣಭೈರೇಗೌಡ ಅವರು ಕೇಂದ್ರ ಸರ್ಕಾರಕ್ಕೆ 10–11 ಪತ್ರ ಬರೆದಿದ್ದೇವೆ. ಆದರೆ, ಹೆಚ್ಚಿನ ಪರಿಹಾರ ಕೊಡಬೇಕಾಗುತ್ತದೆ ಅಂತಾ ಕೇಂದ್ರ ಗೈಡ್ ಲೈನ್ಸ್ ಬದಲಿಸುತ್ತಿಲ್ಲ ಎಂದು ಡಿಸಿಎಂ ಡಾ.ಜಿ.ಪರಮೇಶ್ವರ ಆರೋಪಿಸಿದರು. ಬೆಳಗಾವಿಯಲ್ಲಿ ಬರ ಪರಿಹಾರ ಕುರಿತು ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ತಕ್ಷಣದ ಪರಿಹಾರ ನೀಡಬೇಕು ಎಂಬ ಉದ್ದೇಶದಿಂದ ಪ್ರತಿ ರೈತನಿಗೆ 2,500 ರೂ. ನೀಡುತ್ತಿದ್ದೇವೆ. ಇದೇ ಅಂತಿಮ ಅಲ್ಲ. ಇದು ರಾಜ್ಯ ಸರ್ಕಾರದ ಮೊದಲ ಕಂತಿನ ಪರಿಹಾರ ಆಗಿದೆ ಎಂದರು. ರಾಜ್ಯದಲ್ಲಿ 18 ಸಾವಿರ ಕೋಟಿ ರೂ. ಹಾನಿ ಆಗಿದೆ. ಹಾಗಾಗಿ, 3,500 ಕೋಟಿ ರೂಪಾಯಿ ಪರಿಹಾರ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದೇವೆ. ಕೊಡೋದು, ಬಿಡೋದು ಅವರಿಗೆ ಬಿಟ್ಟಿದ್ದು. ಎರಡು, ಮೂರನೇ ಮನವಿಯನ್ನು ಶೀಘ್ರದಲ್ಲೇ ಸಲ್ಲಿಸುತ್ತೇವೆ ಎಂದು ಹೇಳಿದರು.ಮೂರನೇ ಹಂತದಲ್ಲಿ 77 ತಾಲ್ಲೂಕುಗಳನ್ನು ಬರ ಪೀಡಿತ ಅಂತಾ ಘೋಷಣೆ ಮಾಡಲಾಗಿದೆ. ಇನ್ನೊಂದು ಹಂತದಲ್ಲಿ ಮತ್ತೆ 50 ತಾಲ್ಲೂಕು ಘೋಷಣೆ ಆಗುತ್ತವೆ ಎಂದು ಡಾ.ಪರಮೇಶ್ವರ ತಿಳಿಸಿದರು.



ಪ್ರಧಾನಿ ನರೇಂದ್ರ ಮೋದಿಯವರ ಬಳಿ ಸರ್ವಪಕ್ಷ ನಿಯೋಗ ಕೊಂಡೊಯ್ಯುತ್ತೇವೆ. ಪ್ರಧಾನಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಭೇಟಿಗೆ ಪ್ರಯತ್ನ ಮಾಡುತ್ತಿದ್ದೇವೆ. ಈ ವೇಳೆ ತಕ್ಷಣ ಪರಿಹಾರ ಕೊಡಬೇಕು ಎಂದು ಒತ್ತಡ ಹೇರುತ್ತೇವೆ ಎಂದರು. ಇನ್ನು ಅಹಿಂದ ನಾಯಕರನ್ನು ಒಗ್ಗೂಡಿಸಲು ಕೆ.ಎನ್.ರಾಜಣ್ಣ ನೇತೃತ್ವದಲ್ಲಿ ಪ್ರಯತ್ನ ಮಾಡುತ್ತಿರುವ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ, ಅದರ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದಷ್ಟೇ ಪರಮೇಶ್ವರ ಹೇಳಿದರು.

## ದೀನದಯಾಳ್ ಉಪಾಧ್ಯಾಯರ ವಿಚಾರಗಳು ಮಾದರಿ

**ಉದಯವಾಹಿನಿ, ವಾಡಿ**

ಬಿಜೆಪಿಯ ಪೂರ್ವಾಶ್ರಮವಾದ ಭಾರತೀಯ ಜನಸಂಘದ ಮಾಜಿ ಅಧ್ಯಕ್ಷ, ಮಹಾನ್ ರಾಷ್ಟ್ರಭಕ್ತ ಹಾಗೂ ಪ್ರಖರ ರಾಜಕೀಯ ಚಿಂತಕ ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ ವಿಚಾರಗಳು ಮತ್ತು ಸಿದ್ಧಾಂತಗಳು ಭಾರತೀಯ ಜನತಾ ಪಕ್ಷದ ರಾಜಕೀಯ ಹಾಗೂ ವೈಚಾರಿಕತೆಗೆ ಭದ್ರ ಬುನಾದಿಯಾಗಿವೆ ಎಂದು ವಾಡಿ ಬಿಜೆಪಿ ಘಟಕದ ಅಧ್ಯಕ್ಷ ವೀರಣ್ಣ ಯಾರಿ ಹೇಳಿದರು. ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ 110ನೇ ಜನ್ಮದಿನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ,ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು. ಉಪಾಧ್ಯಾಯ ಅವರ ಪ್ರಮುಖ ಕೊಡುಗೆಗಳಲ್ಲಿ ಏಕಾತ್ಮ ಮಾನವತಾವಾದ ಅತ್ಯಂತ ಶ್ರೇಷ್ಠವಾದುದು. ಸಮಾಜದ ಅತ್ಯಂತ ಕೆಳಸ್ತರದಲ್ಲಿರುವ ಸಮಾಜದ ಕಟ್ಟಕಡೆಯ ವ್ಯಕ್ತಿಯ ಅಭಿವೃದ್ಧಿ ಮಾಡುವುದೇ ಇದರ ಮುಖ್ಯ ಉದ್ದೇಶವಾಗಿತ್ತು. ಅವರು ದೇಶದ ಬಡತನ ನಿರ್ಮೂಲನೆ ಮತ್ತು ಸ್ಥಳೀಯ ಆರ್ಥಿಕತೆಯ ಬಲವರ್ಧನೆಗೆ ಸದಾ ಒತ್ತು ನೀಡಿದ್ದರು. ದೀನದಯಾಳ್ ಅವರು ತಮ್ಮ ಶ್ರೇಷ್ಠ ಬರಹಗಳ ಮೂಲಕ ಭಾರತೀಯ ಸಂಸ್ಕೃತಿಯ ಮೌಲ್ಯಗಳನ್ನು ಸಾರಿದ್ದರು. ರಾಷ್ಟ್ರಧರ್ಮ ಪತ್ರಿಕೆಯ ಸ್ಥಾಪನೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಅವರು, ಯುವಜನತೆಯಲ್ಲಿ ದೇಶಭಕ್ತಿ ಮತ್ತು ಸಾಂಸ್ಕೃತಿಕ ತಿಳುವಳಿಕೆಯನ್ನು ಮೂಡಿಸಲು ನಿರಂತರ ಪ್ರಯತ್ನ ನಡೆಸಿದ್ದರು. ಇಂದು ಅವರ ತತ್ವ ಮತ್ತು ಆದರ್ಶಗಳೊಂದಿಗೆ ನಮ್ಮ ಪಕ್ಷವು ಅಧಿಕಾರಕ್ಕೆ ಬಂದಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಸಮರ್ಥ ನೇತೃತ್ವದಲ್ಲಿ ದೇಶವು ಅಭಿವೃದ್ಧಿಯತ್ತ ದಾಪುಗಾಲು ಇಡುತ್ತಿರುವುದು ನಮಗೆಲ್ಲಾ ಹೆಮ್ಮೆಯ ವಿಷಯವಾಗಿದೆ ಎಂದು ಉಪಾಧ್ಯಾಯ ಅವರ ದೇಶಸೇವೆಯನ್ನು ಕೊಂಡಾಡಿದರು.

## ರಾಮಲಿಂಗೇಶ್ವರ ದೇವಾಲಯ ಅಭಿವೃದ್ಧಿಗೊಳಿಸಿ

**ಉದಯವಾಹಿನಿ, ಕಲಬುರಗಿ**

ಐತಿಹಾಸಿಕ, ಅಪರೂಪದ ವಾಸ್ತುಶಿಲ್ಪ ಹೊಂದಿರುವ, ಸುಮಾರು 1400 ವರ್ಷಗಳ ಪ್ರಾಚೀನ ಕಾಲದ 'ಕಲಬುರಗಿ ಗ್ರಾಮ ದೇವತೆ' ಎಂದು ನಂಬಲ್ಪಟ್ಟ ನಗರದ ಶಹಾಬಜಾರ ನಾಕಾ ಸಮೀಪವಿರುವ ಸ್ಥಂಭ ರಾಮಲಿಂಗೇಶ್ವರ ದೇವಾಲಯ ಹಾಗೂ ಅದರ ಆವರಣದ ಸ್ಥಳ ಅಭಿವೃದ್ಧಿಗೊಳಿಸಿ, ಅದರ ಬಗ್ಗೆ ವ್ಯಾಪಕ ಪ್ರಚಾರವಾಗುವ ಕೆಲಸ ಜರುಗಬೇಕಾಗಿದೆ ಎಂದು ದೇವಸ್ಥಾನದ ಪೂಜ್ಯ ನಾಗೇಶ ಮಹಾರಾಜ ಸ್ವಾಮೀಜಿ ಹೇಳಿದರು. ನಗರದ ಆಳಂದ ರಸ್ತೆಯ ಶಹಾಬಜಾರ ನಾಕಾ ಸಮೀಪದಲ್ಲಿರುವ 'ಸ್ಥಂಭ ರಾಮಲಿಂಗೇಶ್ವರ ದೇವಸ್ಥಾನದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಭಾನುವಾರ ಜರುಗಿದ 'ರಾಷ್ಟ್ರೀಯ ಪ್ರವಾಸೋದ್ಯಮ ದಿನಾಚರಣೆ'ಯ ಕಾರ್ಯಕ್ರಮದಲ್ಲಿ ದೇವಸ್ಥಾನದ ವಾಸ್ತುಶಿಲ್ಪ ಕಲೆಯನ್ನು ಆಗಮಿಸಿದ್ದ ಭಕ್ತರಿಗೆ ವಿವರಣೆ ನೀಡುತ್ತಾ ಅವರು ಮಾತನಾಡುತ್ತಿದ್ದರು. ಈ ದೇವಸ್ಥಾನದಲ್ಲಿ ಬಹು ಪುರಾತನ ಸ್ಥಾವರಲಿಂಗವಿದೆ. ನಿರ್ಲಕ್ಷ್ಯದಿಂದ ಸುತ್ತಲು ಗಿಡ–ಗಂಟೆ ಬೆಳೆದಿತ್ತು. ಅನೈತಿಕ ಚಟುವಟಿಕೆಗಳ ಸ್ಥಳವಾಗಿತ್ತು. ದೇವಾಲಯದ ಪರಿಸರ ಕಸದಿಂದ ತುಂಬಿತ್ತು. ನಾನು ದೇವಸ್ಥಾನದ ಮುಖ್ಯಸ್ಥನಾದ ಮೇಲೆ ಸುತ್ತ–ಮುತ್ತಲಿನ ಸ್ಥಳವನ್ನು ಸ್ವಚ್ಛಗೊಳಿಸಿ, ದೇವಸ್ಥಾನದ ಆವರಣದ ಸುಚಿತ್ವವನ್ನು ಕಾಪಾಡಿಕೊಂಡು ಬರಲಾಗುತ್ತಿದೆ. ಭಕ್ತರು ದೇವಸ್ಥಾನದ ಮಹಿಮೆಯನ್ನು ಕಂಡು ಆಗಮಿಸುತ್ತಿದ್ದಾರೆ. ಪ್ರತಿ ಸೋಮವಾರ ಸಂಜೆ ದೀಪೋತ್ಸವ, ಶಿವರಾತ್ರಿ ದಿನದಂದು ವಿಶೇಷ ಕಾರ್ಯಕ್ರಮಗಳು ಜರುಗುತ್ತವೆ. ಐತಿಹಾಸಿಕ ದೇವಸ್ಥಾನವಾದ ಇದರ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಸರ್ಕಾರ, ಸಂಬಂಧಿಸಿದವರು ಇದರತ್ತ ಲಕ್ಷ್ಯವಹಿಸಬೇಕಾಗಾಗಿದೆ ಎಂದರು.



ಉದಯವಾಹಿನಿ ಚಿತ್ರ

## ಕಸ್ತೂರಿ ರಂಗನ್ ವರದಿ ವಿರೋಧಿಸಿ ಡಿ.ಸಿಗೆ ಮನವಿ

**ಉದಯವಾಹಿನಿ, ನರಸಿಂಹರಾಜಪುರ**

ಕಸ್ತೂರಿ ರಂಗನ್ ವರದಿ ವಿರೋಧಿಸಿ, ಕಾನೂರು ವಿವಿಧೋದ್ದೇಶ ಸಹಕಾರ ಸಂಘದಿಂದ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು. ಕಾನೂರು ವಿ.ಎಸ್.ಎಸ್.ಎನ್. ಸಭಾಂಗಣದಲ್ಲಿ ನಡೆದ 2025–26ನೇ ಸಾಲಿನ ಸರ್ವ ಸದಸ್ಯರ ಸಭೆಯಲ್ಲಿ ಕಸ್ತೂರಿ ರಂಗನ್ ವರದಿಯನ್ನು ತಿರಸ್ಕರಿಸುವ ಬಗ್ಗೆ ಸರ್ವಾನುಮತದಿಂದ ತೀರ್ಮಾನ ತೆಗೆದುಕೊಳ್ಳಲಾಗಿದೆ. ವರದಿ ಜಾರಿಗೆ ಬಂದರೆ ರೈತರ ಬದುಕು ದುಸ್ತರವಾಗಲಿದೆ. ಈಗಿರುವ ವರದಿ ಪ್ರಕಾರ ಜನವಸತಿ ಪ್ರದೇಶವೂ ವರದಿಯಲ್ಲಿ ಸೇರಿದೆ. ಆದ್ದರಿಂದ ಯಾವುದೇ ಕಾರಣಕ್ಕೂ ವರದಿ ಜಾರಿ ಮಾಡಬಾರದು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ತಹಶೀಲ್ದಾರ್ ನೂರಲ್ ಹುದಾ ಅವರಿಗೆ ಮನವಿ ಸಲ್ಲಿಸಲಾಯಿತು. ಕಾನೂರು ವಿವಿಧೋದ್ದೇಶ ಸಹಕಾರ ಸಂಘದ ಅಧ್ಯಕ್ಷ ವಿ.ಕೆ. ಸುಧಾಕರ್, ಉಪಾಧ್ಯಕ್ಷ ಟಿ. ಹಿರಿಯಣ್ಣ, ನಿರ್ದೇಶಕರಾದ ಎಚ್.ಕೆ. ಬಾಲಚಂದ್ರ, ಎಚ್.ಎನ್. ಅಶೋಕ್, ಎಂ.ಡಿ. ಇಂಪಾ ಇದ್ದರು.



ಉದಯವಾಹಿನಿ ಚಿತ್ರ

## ವೈವಿಧ್ಯಮಯ ಬೀಜ ಬಳಸಿಕೊಂಡು ಬಗೆ ಬಗೆಯ ಕಲಾಕೃತಿ, ಆಭರಣ ತಯಾರಿಸಿದ ವಿದ್ಯಾರ್ಥಿಗಳು

# ಕೃಷಿಮೇಳದಲ್ಲಿ ಗಮನ ಸೆಳೆದ ಫಲಪುಷ್ಪ ಪ್ರದರ್ಶನ

**ಉದಯವಾಹಿನಿ, ಧಾರವಾಡ**

**1.**ಕಾಯಿಯಲ್ಲಿ ಅರಳಿದ ದೇವರ ಮೂರ್ತಿಗಳು
**2.**ಹಣ್ಣಿನಲ್ಲಿ ಅರಳಿದ ಮಹನೀಯರ ಕೃತಿಗಳು
**3.**ಹೆಸರು, ಕಾಳು ಬಳಸಿಕೊಂಡು ಕಲಾಕೃತಿ

ಇಲ್ಲಿನ ಕೃಷಿ ವಿಶ್ವವಿದ್ಯಾಲಯದ ಕೃಷಿಮೇಳ ಇಂದು ಮೂರನೇ ದಿನಕ್ಕೆ ಕಾಲಿಟ್ಟಿದೆ. ಲಕ್ಷಾಂತರ ಸಂಖ್ಯೆಯಲ್ಲಿ ರೈತರು ಆಗಮಿಸಿದ್ದಾರೆ. ಮೇಳದಲ್ಲಿ ಆಯೋಜಿಸಿರುವ ಫಲಪುಷ್ಪ ಪ್ರದರ್ಶನ ಗಮನ ಸೆಳೆಯುತ್ತಿದೆ.

ಗುಲಾಬಿ, ಸೇವಂತಿಗೆ, ಕಾರ್ನೇಶನ್, ಅಂಥೋರಿಯಂ, ಗ್ಲ್ಯಾಡಿಯೋಲಸ್, ಲಿಲ್ಲಿ, ಜರ್ಬೆರಾ– ಒಂದಾ? ಎರಡಾ? ಹತ್ತಾರು ಬಗೆಯ ಹೂವುಗಳ ರಾಶಿ. ಅದನ್ನು ಅಚ್ಚರಿ ಹಾಗೂ ಸಂತೋಷದಿಂದ ನೋಡುತ್ತಿರುವ ಯುವತಿಯರು, ಹೂವಿಗಿಂತಲೂ ತಾವೇ ಸುಂದರ ಅನ್ನುವಂತೆ ನಸುನಗುತ್ತಾ ನಲಿಯುತ್ತಿರುವ ಕಾಲೇಜು ಬೆಡಗಿಯರು, ನಿಮಗಿಂತಲೂ ನಾನೇನು ಕಮ್ಮಿ ಅಂತಾ ಮುಖವರಳಿಸಿ ನಿಂತ ಬಗೆ ಬಗೆಯ ಹೂವುಗಳು, ಅವುಗಳೊಂದಿಗೆ ಬಗೆ ಬಗೆಯ ಆಂಗಲ್‌ಗಳಲ್ಲಿ ಸೆಲ್ಫಿ ಕ್ಲಿಕ್ಕಿಸಿಕೊಳ್ಳುತ್ತಿರುವ ಚೆಲುವೆಯರು, ಇಂಥ ಬಗೆ ಬಗೆಯ ಬಣ್ಣ ಬಣ್ಣದ ಹೂವುಗಳ ಹಾಗೂ ಸುಂದರ ಯುವತಿಯರ ಸ್ಪರ್ಧೆಗೆ ಸಾಕ್ಷಿಯಾಗಿದ್ದು ಧಾರವಾಡದ ಕೃಷಿ ಮೇಳ–2025. ಇಡೀ ಕೃಷಿ ಮೇಳ ಒಂದು ಬಗೆಯ ಆಕರ್ಷಣೆಯಾಗಿದೆ.

ಈ ಪ್ರದರ್ಶನದಲ್ಲಿ ಬರೀ ಹೂವುಗಳಷ್ಟೇ ಅಲ್ಲದೇ ಬಗೆ ಬಗೆಯ ದೃಶ್ಯಗಳು ಕೂಡ ಕಂಡುಬಂದಿದೆ. ಕಲ್ಲಂಗಡಿ ಹಣ್ಣಿನಲ್ಲಿ ಅರಳಿದ ಮಹನೀಯರ ಕೃತಿಗಳು, ತೆಂಗಿನ ಕಾಯಿಯಲ್ಲಿ ಅರಳಿದ ದೇವರ ಮೂರ್ತಿಗಳು ಗಮನ ಸೆಳೆದವು. ಇದರೊಂದಿಗೆ ಮತ್ತೊಂದು ಗಮನ ಸೆಳೆದ ಸಂಗತಿ ಎಂದರೆ ನಿತ್ಯ ಬದುಕಿನಲ್ಲಿ ಕಂಡು ಬರುವ ಬೀಜಗಳಿಂದಲೇ ವಿದ್ಯಾರ್ಥಿನಿಯರು ಆಭರಣಗಳನ್ನು ತಯಾರಿಸಿದ್ದು. ಹೆಸರು, ಅವರೆ ಕಾಳು, ಸುಬಾಬುಲ್ ಬೀಜಗಳನ್ನು ಬಳಸಿಕೊಂಡು ಬಗೆ ಬಗೆಯ ಕಲಾಕೃತಿಗಳನ್ನು ಹಾಗೂ ಆಭರಣಗಳನ್ನು ತಯಾರಿಸಲಾಗಿದೆ. ಈ ಆಭರಣಗಳಿಗೆ ಬೀಜಾಭರಣೆ ಅಂತಾ ಹೆಸರಿಡಲಾಗಿದೆ.

ಇತ್ತೀಚಿನ ದಿನಗಳಲ್ಲಿ ಹೂವು ಕೂಡ ಪ್ರಮುಖ ಬೆಳೆಯಾಗಿ, ಆ ಮೂಲಕ ರೈತರಿಗೆ ಮುಖ್ಯ ಆದಾಯದ ಮೂಲವಾಗಿ ಬದಲಾಗಿದೆ. ಎಷ್ಟೋ ಜನ ರೈತರು ಸಾಂಪ್ರದಾಯಿಕ ಹಾಗೂ ವಿದೇಶಿ ತಳಿಗಳ ಹೂವುಗಳಿಂದಲೇ ಸಾಕಷ್ಟು ಆದಾಯ ಗಳಿಸುತ್ತಿದ್ದಾರೆ. ಹೀಗಾಗಿ ರೈತರ ಆದಾಯದಲ್ಲಿ ಹೂವು ತರಾನೇ ಪ್ರಮುಖ ಪಾತ್ರ ವಹಿಸುತ್ತಿವೆ.

ಇದೇ ಕಾರಣಕ್ಕೆ ರೈತರಿಗೆ ಈ ಆದಾಯ ತರೋ ಹೂವುಗಳ ಬಗ್ಗೆ ಹಾಗೂ ಸಾಂಪ್ರದಾಯಿಕ ತಳಿಗಳ ಬಗ್ಗೆ ಅರಿವು ಮೂಡಿಸಲು ಇಂಥದ್ದೊಂದು ಮೇಳವನ್ನು ಆಯೋಜಿಸಲಾಗಿದೆ. ಒಟ್ಟಿನಲ್ಲಿ ಬಗೆ ಬಗೆಯ ಪ್ರದರ್ಶನಗಳಲ್ಲಿ ಫಲ-ಪುಷ್ಪ ಪ್ರದರ್ಶನ ಸಾಕಷ್ಟು ಗಮನ ಸೆಳೆಯುತ್ತಿರೋದು ಮಾತ್ರ ಸತ್ಯವಾಗಿದೆ.ಇನ್ನು ಇವುಗಳೊಂದಿಗೆ ವಿವಿಧ ಔಷಧಿ ಸಸ್ಯಗಳ ಪ್ರದರ್ಶನವನ್ನೂ ಇಡಲಾಗಿದೆ. ಮಧುನಾಶಿನಿ, ಅಶ್ವಗಂಧ, ಸರ್ಪಗಂಧ, ಬ್ರಾಹ್ಮಿ ಎಲೆ ಸೇರಿದಂತೆ ಹಲವಾರು ಔಷಧಿ ಸಸ್ಯಗಳು ಕೂಡ ಜನರ ಆಕರ್ಷಣೆಗೆ ಕಾರಣವಾಗಿವೆ.

ಕೃಷಿ ಮೇಳಕ್ಕೆ ಬರುವ ಬಹುತೇಕರು ಮರೆಯದೇ ಭೇಟಿ ಕೊಡುತ್ತಿರೋ ಈ ಫಲ-ಪುಷ್ಪ ಪ್ರದರ್ಶನದ ಸ್ಥಳಕ್ಕೆ ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಆರಂಭವಾದ ನಾಲ್ಕು ದಿನಗಳ ಕೃಷಿ ಮೇಳದ ಹೈಲೈಟ್ ಅಂದ್ರೆ ಇದೇ ಫಲ-ಪುಷ್ಪ ಪ್ರದರ್ಶನ.



ಉದಯವಾಹಿನಿ ಚಿತ್ರ

**ಕಣ್ಮನ ಸೆಳೆದ ಫಲಪುಷ್ಪ ಪ್ರದರ್ಶನ**

ಆವರಣದಲ್ಲಿರೋ ರೈತರ ಜಾನಾಭಿವೃದ್ಧಿ ಕೇಂದ್ರದಲ್ಲಿ ಈ ಮೇಳವನ್ನು ಆಯೋಜಿಸಲಾಗಿದೆ. ಮೇಳಕ್ಕೆ ಬರುವ ಪ್ರತಿಯೊಬ್ಬರೂ ಇಲ್ಲಿಗೆ ಭೇಟಿ ನೀಡಲೇಬೇಕು ಅನ್ನುವಷ್ಟರ ಮಟ್ಟಿಗೆ ಪ್ರದರ್ಶನ ಜನರನ್ನು ಸೆಳೆಯುತ್ತಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ**
ನಿಮ್ಮ ಆರೋಗ್ಯದ ಬಗ್ಗೆ ವಿಶೇಷವಾಗಿ ರಕ್ತದೊತ್ತಡ ರೋಗಿಗಳ ಬಗ್ಗೆ ಸ್ವಲ್ಪ ಜಾಗ್ರತೆಯಿಂದಿರಿ. ಇಂದು ನೀವು ಅಗತ್ಯವಿರುವವರಿಗೆ ಹಣವನ್ನು ಕೊಟ್ಟು ವಿಶ್ರಾಂತಿಯನ್ನು ಅನುಭವಿಸುವಿರಿ

**ವೃಷಭ**
ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನೀವು ಇಂದು ಗಣನೀಯ ಪ್ರಮಾಣದ ಹಣ ಹೊಂದಿರುತ್ತೀರಿ

**ಮಿಥುನ**
ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ, ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ದಿ ಜೀವನದ ಹೆಬ್ಬಾಗಿಲಾಗಿದೆ.

**ಕರ್ಕಾಟಕ**
ನೀವು ಸುತ್ತಲಿರುವವರು ನಿಮಗೆ ಬೆಂಬಲ ನೀಡುವುದರಿಂದ ನೀವು ಸಂತೋಷವಾಗಿರುವಿರಿ. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು.

**ಸಿಂಹ**
ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಲೋನ್‌ನ ಮೊತ್ತವನ್ನು ಮರುಪಾವತಿಸುವಲ್ಲಿ ತೊಂದರೆ ಉಂಟಾಗಬಹುದು.

**ಕನ್ಯಾ**
ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆಕ್ರಮಿಸಿಕೊಳ್ಳಲು ಬಿಡಬೇಡಿ. ಶಾಂತವಾಗಿ ಮತ್ತು ಒತ್ತಡ ಮುಕ್ತವಾಗಿ ಉಳಿಯಲು ಪ್ರಯತ್ನಿಸಿ ಹಾಗೂ ಅದು ನಿಮ್ಮ ಮಾನಸಿಕ ದೃಢತೆ ಹೆಚ್ಚಿಸುತ್ತದೆ.

**ತುಲಾ**
ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ, ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ವೃಶ್ಚಿಕ**
ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ಧನಸ್ಸು**
ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು, ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ.

**ಮಕರ**
ವಯಸ್ಸಾದವರು ತಮ್ಮ ಆರೋಗ್ಯವನ್ನು ನೋಡಿಕೊಳ್ಳಬೇಕು. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

**ಕುಂಭ**
ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.

**ಮೀನ**
ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ.

ಚುನಾವಣೆಗಾಗಿ ಈಗಾಗಲೇ ಕಾರ್ಯತಂತ್ರ ರೂಪಿಸಲಾಗಿದ್ದು, ಮೈತ್ರಿಗಾಗಿ ಸಮಿತಿಯನ್ನೂ ರಚಿಸಲಾಗಿದೆ ಎಂದು ಆಂಧ್ರಪ್ರದೇಶ ಕಾಂಗ್ರೆಸ್ ಉಸ್ತುವಾರಿ

# ಆಂಧ್ರಪ್ರದೇಶ ಸ್ಥಳೀಯ ಸಂಸ್ಥೆ ಚುನಾವಣೆಗೆ ಕಾಂಗ್ರೆಸ್ ಭರ್ಜರಿ ಸಿದ್ಧತೆ

**ಉದಯವಾಹಿನಿ, ಮಂಗಳೂರು**
ಆಂಧ್ರಪ್ರದೇಶದಲ್ಲಿ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ಕಾಂಗ್ರೆಸ್ ಪಕ್ಷವು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಚುನಾವಣೆಯನ್ನು ಎದುರಿಸಲು ಸಮಗ್ರ 'ರೋಡ್‌ಮ್ಯಾಪ್' ಹಾಗೂ ಮೈತ್ರಿಕೂಟ ರಚನೆಗೆ ಪ್ರತ್ಯೇಕ ಸಮಿತಿ ರಚಿಸಿ ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಆಂಧ್ರಪ್ರದೇಶ ಕಾಂಗ್ರೆಸ್ ಉಸ್ತುವಾರಿ ಹಾಗೂ ವಿಧಾನ ಪರಿಷತ್ ಸದಸ್ಯ ಪಿ.ವಿ. ಮೋಹನ್ ತಿಳಿಸಿದ್ದಾರೆ.

1. ಸಮಗ್ರ 'ರೋಡ್‌ಮ್ಯಾಪ್'
2. ಮೈತ್ರಿಕೂಟ ರಚನೆ
3. ಕಾರ್ಯವೈಖರಿ ವಿಸ್ತೃತ

ಮಂಗಳೂರಿನಲ್ಲಿ ವಿಶೇಷವಾಗಿ ಮಾತನಾಡಿದ ಅವರು, ಆಂಧ್ರಪ್ರದೇಶದ ಸ್ಥಳೀಯ ಸಂಸ್ಥೆಗಳ ಚುನಾವಣೆ, ಪಕ್ಷ ಸಂಘಟನೆ ಹಾಗೂ ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ವಿಸ್ತೃತವಾಗಿ ಅಭಿಪ್ರಾಯ ಹಂಚಿಕೊಂಡರು.

**ಎನ್‌ಡಿಎ ವಿರುದ್ಧ ಹೋರಾಡುವ ಏಕೈಕ ಪಕ್ಷ ಕಾಂಗ್ರೆಸ್:** ಆಂಧ್ರಪ್ರದೇಶದ ಪ್ರಸ್ತುತ ರಾಜಕೀಯ ಸ್ಥಿತಿಗತಿ ವಿಶಿಷ್ಟವಾಗಿದೆ ಎಂದ ಪಿ.ವಿ. ಮೋಹನ್ "ಆಂಧ್ರಪ್ರದೇಶದಲ್ಲಿ ಆಡಳಿತಾರೂಢ ತೆಲುಗು ದೇಶಂ ಪಾರ್ಟಿ, ಜನಸೇನಾ ಹಾಗೂ ವಿರೋಧ ಪಕ್ಷವಾದ ವೈಎಸ್‌ಆರ್ ಕಾಂಗ್ರೆಸ್ ಪಕ್ಷಗಳೆಲ್ಲವೂ ಕೇಂದ್ರದ ಎನ್‌ಡಿಎ ಒಕ್ಕೂಟವನ್ನು ಬೆಂಬಲಿಸುತ್ತಿವೆ. ಅಲ್ಲಿ ಎನ್‌ಡಿಎ ಮತ್ತು ಬಿಜೆಪಿಯ ವಿರುದ್ಧ ಜನಪರವಾಗಿ ಹೋರಾಡಲು ಉಳಿದಿರುವ ಏಕೈಕ ಪರ್ಯಾಯ ಶಕ್ತಿ ಎಂದರೆ ಅದು ಕಾಂಗ್ರೆಸ್ ಮಾತ್ರ. ಹೀಗಾಗಿ ಆಂಧ್ರಪ್ರದೇಶದಲ್ಲಿ ಪಕ್ಷವನ್ನು ತಳಮಟ್ಟದಿಂದ ಪುನರ್ ನಿರ್ಮಿಸಲು ನಮಗೆ ಅತ್ಯುತ್ತಮ ಅವಕಾಶವಿದೆ. ಜನರು ಕಾಂಗ್ರೆಸ್‌ನತ್ತ ಮುಖ ಮಾಡುತ್ತಿದ್ದಾರೆ" ಎಂದರು.



ಮುಂಬರುವ ತಿಂಗಳ ಮೊದಲ ವಾರದಿಂದ ಆಂಧ್ರ ಪ್ರದೇಶದ ಎಲ್ಲಾ ಜಿಲ್ಲೆಗಳು ಹಾಗೂ ವಿಧಾನಸಭಾ ಕ್ಷೇತ್ರಗಳಿಗೆ ಭೇಟಿ ನೀಡಿ ಸರಣಿ ಪ್ರವಾಸ ಕೈಗೊಳ್ಳಲಾಗುವುದು. ಆಂಧ್ರಪ್ರದೇಶದಲ್ಲಿ ವ್ಯಾಪಕವಾ ಗಿರುವ ಭ್ರಷ್ಟಾಚಾರವೇ ಪ್ರಮುಖ ಚುನಾವಣಾ ವಿಷಯವಾಗಲಿದ್ದು, ಜನರ ಬಳಿಗೆ ತೆರಳಿ ಜಾಗೃತಿ ಮೂಡಿಸಲಾಗುವುದು ಎಂದರು.

– ಪಿ.ವಿ. ಮೋಹನ್, ವಿಧಾನ ಪರಿಷತ್ ಸದಸ್ಯ

**ಪಕ್ಷಕ್ಕೆ ಹೊಸ ಚೈತನ್ಯ, ಬಲ ನೀಡಲಿದೆ**

**ಕಳೆದ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಶೇ. 2.1 ರಿಂದ ಶೇ. 2.7 ರಷ್ಟು ಮತ ಹಂಚಿಕೆ ಪಡೆದುಕೊಂಡಿತ್ತು. ಲೋಕಸಭಾ ಚುನಾವಣೆ ಮುಗಿದ ಬಳಿಕ ಪಕ್ಷ ಸಂಘಟನೆ ಕೊಂಚ ಮಂಕಾಗಿತ್ತು. ಆದರೆ, ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯು ಪಕ್ಷಕ್ಕೆ ಹೊಸ ಚೈತನ್ಯ ಹಾಗೂ ಬಲ ನೀಡಲಿದೆ.**

ಇತ್ತೀಚೆಗಷ್ಟೇ ಆಂಧ್ರಪ್ರದೇಶ ಕಾಂಗ್ರೆಸ್‌ನ ರಾಜಕೀಯ ವ್ಯವಹಾರಗಳ ಸಮಿತಿ ಸಭೆ ನಡೆದಿದ್ದು, ಪಕ್ಷದ ಎಲ್ಲಾ ಹಿರಿಯ ನಾಯಕರು ಒಗ್ಗಟ್ಟಿನಿಂದ ಹೋರಾಡಲು ಒಮ್ಮತದ ತೀರ್ಮಾನಕ್ಕೆ ಬಂದಿದ್ದಾರೆ. ನಾವೆಲ್ಲರೂ ಒಟ್ಟಾಗಿ ಸಾಗಿದರೆ ಮಾತ್ರ ಪಕ್ಷವನ್ನು ಮುನ್ನಡೆಸಲು ಸಾಧ್ಯ ಎಂಬ ಸ್ಪಷ್ಟ ಸಂದೇಶವನ್ನು ನಾಯಕರು ಒಪ್ಪಿಕೊಂಡಿದ್ದಾರೆ.

**ಶೇ. 40ರಷ್ಟು ಯುವಜನತೆ ರಾಹುಲ್ ಗಾಂಧಿ ನಾಯಕತ್ವದತ್ತ:** "ಆಂಧ್ರಪ್ರದೇಶದ ಜನಸಂಖ್ಯೆಯಲ್ಲಿ ಶೇ. 40ರಷ್ಟು ಯುವಜನರಿದ್ದಾರೆ. ಇಂದೋರ್ ಮತ್ತು ಪುಣೆಯಲ್ಲಿ ನಡೆದ ರಾಹುಲ್ ಗಾಂಧಿ ಅವರ ಕಾರ್ಯಕ್ರಮಗಳ ನಂತರ ಯುವಜನತೆಯಲ್ಲಿ ಹೊಸ ಸಂಚಲನ ಮೂಡಿದೆ. ಆಂಧ್ರದ ಯುವಕರು ರಾಹುಲ್ ಗಾಂಧಿ ಅವರ ನಾಯಕತ್ವವನ್ನು ಮುಕ್ತವಾಗಿ ಒಪ್ಪಿಕೊಳ್ಳುತ್ತಿದ್ದಾರೆ. 2029ರ ವೇಳೆಗೆ ಆಂಧ್ರಪ್ರದೇಶದಲ್ಲಿ ಕಾಂಗ್ರೆಸ್ ಅತ್ಯಂತ ಪ್ರಬಲ ಹಾಗೂ ನಿರ್ಣಾಯಕ ಶಕ್ತಿಯಾಗಿ ಹೊರಹೊಮ್ಮಲಿದೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ 'ಅಪ್ರೂವರ್' ಆಗಲಿ: ಮತದಾರರ ಪಟ್ಟಿ ವಿವಾದ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಕುರಿತು ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಪಿ.ವಿ. ಮೋಹನ್, "ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗಿಂತಲೂ ಹೆಚ್ಚಾಗಿ, ಅವರು ಈ ವ್ಯವಸ್ಥೆಯಲ್ಲಿ ಯಾರ ಸೂಚನೆಯಂತೆ ಅಕ್ರಮಗಳು ನಡೆದಿವೆ ಎಂಬುದನ್ನು ಬಯಲಿಗೆಳೆದು 'ಅಪ್ರೂವರ್' ಆಗಿ ಸಾಕ್ಷ್ಯ ನುಡಿಯಬೇಕು. ಅವರು ಕೇವಲ ಪ್ರಜಾಪ್ರಭುತ್ವದ ಆಶಯವನ್ನು ನಾಶಮಾಡಿದ್ದಷ್ಟೇ ಅಲ್ಲ, ಚುನಾವಣಾ ವ್ಯವಸ್ಥೆಯ ಮೇಲಿದ್ದ ಜನರ ನಂಬಿಕೆಗೆ ಸರಿಪಡಿಸಲಾಗದ ಧಕ್ಕೆ ತಂದಿದ್ದಾರೆ" ಎಂದು ಹೇಳಿದರು.



ಉದಯವಾಹಿನಿ ಚಿತ್ರ

## ವಚನಗಳ ಅಧ್ಯಯನದಿಂದ ವ್ಯಕ್ತಿತ್ವ ವೃದ್ಧಿ

**ಉದಯವಾಹಿನಿ, ಬಸವನಬಾಗೇವಾಡಿ**
ಬಸವಣ್ಣನವರ ವ್ಯಕ್ತಿತ್ವವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರವನ್ನು ಅಕ್ಕ ನಾಗಮ್ಮನವರು ವಹಿಸಿದ್ದರು ಎಂದು ಅನುಭವವಿಗಳಾದ ಶ್ರೀಕಾಂತ ಗುರೂಜಿ ಅಭಿಪ್ರಾಯಪಟ್ಟರು.

ಸ್ಥಳೀಯ ಜ್ಞಾನಭಾರತಿ ವಿದ್ಯಾಸಂಸ್ಥೆಯಲ್ಲಿ ಶರಣ ಸಾಹಿತ್ಯ ಪರಿಷತ್ತು ಕದಳಿ ವೇದಿಕೆ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಶರಣರು ನಮಗಾಗಿ ಬಿಟ್ಟು ಹೋದ ವಚನ ಸಾಹಿತ್ಯವನ್ನು ನಾವುಗಳೆಲ್ಲ ಸರಿಯಾದ ಅಭ್ಯಾಸ ಮಾಡುವ ಮೂಲಕ ನಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕೆಂದರು. ಡಾ. ಸೌಭಾಗ್ಯ ಗುಬ್ಬಾ ಮಾತನಾಡಿ, ಬಸವಣ್ಣನ ವ್ಯಕ್ತಿತ್ವವನ್ನು ರೂಪಿಸುವದರ ಜೊತೆಗೆ ಚನ್ನಬಸವಣ್ಣನಂತಹ ವ್ಯಕ್ತಿತ್ವವನ್ನು ರೂಪಿಸಿದ ಕೀರ್ತಿ ಅಕ್ಕನಾಗಮ್ಮನಿಗೆ ಸಲ್ಲುತ್ತದೆ ಎಂದರು. ಶರಣ ಸಾಹಿತ್ಯ ಪರಿಷತ್ತಿನ ತಾಲೂಕಾಧ್ಯಕ್ಷ ವೀರಣ್ಣ. ಬಿ ಮರ್ತೂರ ಮಾತನಾಡಿ, ಶರಣರ ವಿಚಾರಗಳನ್ನು ಮನೆ ಮನಗಳಿಗೆ ಮುಟ್ಟಿಸುವ ಕೆಲಸವನ್ನು ಸದಾ ಮಾಡುತ್ತಾ ಬಂದಿದೆ ಎಂದು ಹೇಳಿದರು. ಕದಳಿ ವೇದಿಕೆ ಅಧ್ಯಕ್ಷೆ ಸಾವಿತ್ರಿ ಕಲ್ಯಾಣಶೆಟ್ಟಿ ಮಾತನಾಡಿ, ತಾಲ್ಲೂಕಿನಲ್ಲಿ ಶರಣ ಸಾಹಿತ್ಯ ಪರಿಷತ್ತು ವಿನೂತನ ಕಾರ್ಯಕ್ರಮಗಳನ್ನು ಮಾಡುವ ಮೂಲಕ ರಾಜ್ಯದಲ್ಲಿಯೇ ಹೆಸರುವಾಸಿಯಾಗಿದೆ ಎಂದರು.

ಹಿರಿಯರಾದ ಎಸ್ ಎಸ್ ಝುಳಕಿ, ಎಚ್. ಎಸ್ ಬಿರಾದಾರ, ಪಿ. ಎಲ್ ಹಿರೇಮಠ, ನೀಲಮ್ಮ ಎನ್ ಹೂಗಾರ, ಸುರೇಖಾ ಉಪಾಧ್ಯಾಯ,ಬಸವರಾಜ ಕೊಟ್ಲಿ,ಗೀತಾ ಮುಳವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.ನೀಲಕಂಠ ಹೂಗಾರ ಸ್ವಾಗತಿಸಿದರು. ಆರ್ ಜಿ ಅಳ್ಳಗಿ ನಿರೂಪಿಸಿ ವಂದಿಸಿದರು.

## ಶರಣರ ವಿಚಾರಗಳು ನಮಗೆಲ್ಲಾ ದಾರಿದೀಪ

**ಉದಯವಾಹಿನಿ, ಬಸವನಬಾಗೇವಾಡಿ**
ತಾಲ್ಲೂಕು ಶರಣ ಸಾಹಿತ್ಯ ಪರಿಷತ್ತು ತಾಲ್ಲೂಕಿನ ಹೂವಿನಹಿಪ್ಪರಗಿ ಗ್ರಾಮಾಂತರ ವಿವಿ ಸಂಘದಲ್ಲಿ ಶನಿವಾರ ಆಯೋಜಿಸಿದ್ದ ಲಿಂ. ಕೋರಿ ಹಾಗೂ ಬ್ಯಾಕೋಡ ಸ್ಮರಣಾರ್ಥ ದತ್ತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವೀರಣ್ಣ ಮರ್ತೂರ ಮಾತನಾಡಿ,12ನೇ ಶತಮಾನದ ಬಸವಾದಿ ಶರಣರ ವಿಚಾರಗಳು ಇಂದಿನ ಯುವ ಜನಾಂಗಕ್ಕೆ ಅವಶ್ಯಕತೆ ಇದ್ದು. ಮಾನವೀಯತೆ ನೆಲೆಗಟ್ಟಿನ ಮೇಲೆ ಬದುಕು ರೂಪಿಸಿಕೊಳ್ಳಲು ಸಹಾಯಕವಾಗಿವೆ ಎಂದರು. ರಾಷ್ಟ್ರೀಯ ಪ್ರಜ್ಞೆ ಮತ್ತು ಮಾನವೀಯ ಮೌಲ್ಯಗಳ ಕುರಿತು ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಆರ್. ಜಿ ಅಳ್ಳಗಿ ಮಾತನಾಡಿ, .ಶರಣರ ಪ್ರತಿ ವಚನಗಳಲ್ಲಿಯೂ ಕೂಡ ಮೌಲ್ಯಗಳು ಅಡಕವಾಗಿದ್ದು. ಇಂದಿನ ವಿದ್ಯಾರ್ಥಿಗಳು ಜನ ಜನ್ಮ ಕೊಟ್ಟ ತಂದೆ ತಾಯಿಗಳಿಗೆ ವಿದ್ಯೆ ಕಲಿಸಿದ ಗುರುಗಳಿಗೆ ಶಿಕ್ಷಣ ಕೊಟ್ಟ ಸಂಸ್ಥೆಗೆ ಕೃತಜ್ಞರಾಗಿರಬೇಕು ಎಂದರು. ಉಪನ್ಯಾಸಕ ಬಿರಾದಾರ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತನ್ನು ಅಳವಡಿಸಿಕೊಳ್ಳಬೇಕು ಶಿಕ್ಷಕರು ಹೇಳುವ ಪ್ರತಿಯೊಂದು ಮಾತುಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ, ಸಮಾಜದಲ್ಲಿ ಉತ್ತಮ ವ್ಯಕ್ತಿಯಾಗಿ ಬಾಳಲು ಸಾಧ್ಯವಾಗುತ್ತದೆ ಎಂದರು. ಶ.ಸಾ.ಪ ಅಧ್ಯಕ್ಷ ಸುಭಾಸ ಬಸವರಡ್ಡಿ ಮಾತನಾಡಿದರು. ರಮೇಶ ಕೋರಿ, ಎಮ್ ಎಸ್ ಬ್ಯಾಕೋಡ, ಅರವಿಂದ ಬ್ಯಾಕೋಡ,ಗುರುಸಂಗಪ್ಪ ಹಳ್ಳೂರ,ಸಿಎಂ ಗಬ್ಬುರ, ಎಸ್ಕೆ ಭಜಂತ್ರಿ, ಪಿಎಲ್ ಹಿರೇಮಠ, ಸಾವಿತ್ರಿ ಕಲ್ಯಾಣಶೆಟ್ಟಿ ಎಸ್ ಕೆ ಸೋಮನಕಟ್ಟಿ ಸೇರಿದಂತೆ ಅನೇಕರು ಹಾಜರಿದ್ದರು.



ಉದಯವಾಹಿನಿ ಚಿತ್ರ

## ಸರ್ಕಾರಿ ಆಸ್ಪತ್ರೆಯಲ್ಲಿ ರೋಟಾವೈರಸ್ ಲಸಿಕೆ ತೀವ್ರ ಅಭಾವ

**ಉದಯವಾಹಿನಿ, ಶಿರಸಿ**
ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ನವಜಾತ ಶಿಶುಗಳಿಗೆ ನೀಡಲಾಗುವ ರೋಟಾವೈರಸ್ ಲಸಿಕೆಯ ತೀವ್ರ ಅಭಾವ ಉಂಟಾಗಿದ್ದು, ಮೂರು ತಿಂಗಳಿಗೂ ಹೆಚ್ಚು ಅವಧಿಯಿಂದ ಲಸಿಕೆ ಪೂರೈಕೆಯಾಗದೆ ಪೋಷಕರು ಪರದಾಡುವಂತಾಗಿದೆ. ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿ ಉಚಿತವಾಗಿ ದೊರೆಯಬೇಕಿದ್ದ ಈ ಲಸಿಕೆ ಸಿಗದೆ, ಹಸುಗೂಸುಗಳ ಆರೋಗ್ಯದ ಕುರಿತು ಆತಂಕ ಎದುರಾಗಿದೆ.



ಉದಯವಾಹಿನಿ ಚಿತ್ರ

ಮಕ್ಕಳಲ್ಲಿ ಕಂಡುಬರುವ ತೀವ್ರ ಸ್ವರೂಪದ ಭೇದಿ, ವಾಂತಿ ಹಾಗೂ ದೇಹದಲ್ಲಿ ನೀರನಾಂಶ ಕಡಿಮೆಯಾಗುವ ಜೀವಾಪಾಯದ ಸ್ಥಿತಿ ತಡೆಯಲು ರೋಟಾವೈರಸ್ ಲಸಿಕೆ ನೀಡಲಾಗುತ್ತದೆ. ಮಗುವಿಗೆ 6, 10 ಮತ್ತು 14ನೇ ವಾರಗಳಲ್ಲಿ ಈ ಲಸಿಕೆ ನೀಡಬೇಕಾಗುತ್ತದೆ. ಆದರೆ ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಗೆ ಮೂರು ತಿಂಗಳಿಗೂ ಹೆಚ್ಚು ಅವಧಿಯಿಂದ ಲಸಿಕೆ ಪೂರೈಕೆಯಾಗಿಲ್ಲ. ಇದರಿಂದ ಬಡ ಮತ್ತು ಮಧ್ಯಮ ವರ್ಗದ ಪೋಷಕರು ಆತಂಕಕ್ಕೆ ಒಳಗಾಗಿದ್ದಾರೆ.

ಶಿರಸಿ ಪಂಡಿತ ಸರ್ಕಾರಿ ಆಸ್ಪತ್ರೆಯಲ್ಲಿ ತಿಂಗಳಿಗೆ ಸರಾಸರಿ 250ಕ್ಕೂ ಹೆಚ್ಚು ಮಕ್ಕಳು ಜನಿಸುತ್ತಿದ್ದು, ಖಾಸಗಿ ಆಸ್ಪತ್ರೆಗಳಲ್ಲಿ ಕನಿಷ್ಠ 100 ಮಕ್ಕಳು ಜನಿಸುತ್ತಾರೆ. ಅಂದರೆ, ಪ್ರತಿ ತಿಂಗಳು ಕನಿಷ್ಠ 350ಕ್ಕೂ ಹೆಚ್ಚು ಮಕ್ಕಳಿಗೆ ರೋಟಾ ಲಸಿಕೆಯ ಅಗತ್ಯವಿರುತ್ತದೆ. ಖಾಸಗಿಯಲ್ಲಿ ಮಕ್ಕಳು ಜನಿಸಿದರೂ ಬಹುತೇಕ ಪಾಲಕರು ಸರ್ಕಾರಿ ಆಸ್ಪತ್ರೆಯಲ್ಲೇ ಈ ಲಸಿಕೆ ಹಾಕಿಸುತ್ತಾರೆ. ಆದರೆ, ಮೂರು ತಿಂಗಳಿಂದ ಲಸಿಕೆಯ ಸರಬರಾಜು ಸಂಪೂರ್ಣವಾಗಿ ಸ್ಥಗಿತಗೊಂಡಿರುವುದರಿಂದ ಸಾವಿರಕ್ಕೂ ಹೆಚ್ಚು ಮಕ್ಕಳು ಈ ಸುರಕ್ಷಾ ಕವಚದಿಂದ ವಂಚಿತರಾಗಿದ್ದಾರೆ.

'ನವಜಾತ ಶಿಶುಗಳ ಆರೋಗ್ಯ ಹಿತದೃಷ್ಟಿಯಿಂದ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆ ತಕ್ಷಣವೇ ಮಧ್ಯಪ್ರವೇಶಿಸಿ, ಅಗತ್ಯವಿರುವ ರೋಟಾವೈರಸ್ ಲಸಿಕೆಯನ್ನು ತುರ್ತಾಗಿ ಪೂರೈಸಬೇಕು' ಎಂದು ಅವರು ಒತ್ತಾಯಿಸಿದ್ದಾರೆ.

## 12 ವರ್ಷದಿಂದ ಬಳಕೆಯಾಗದ ಆಸ್ಪತ್ರೆ ಕಟ್ಟಡ

**ಉದಯವಾಹಿನಿ, ವಾಡಿ**
ನಾಲವಾರ ವಲಯದ ಜನರಿಗೆ ಆರೋಗ್ಯ ರಕ್ಷೆ ನೀಡಬೇಕಿದ್ದ ಆಸ್ಪತ್ರೆ ರಕ್ಷಣೆಭಾವ ಕಳೆದುಕೊಂಡಿದ್ದು ಅನಾಥವಾಗಿದೆ.10ಕ್ಕೂ ಅಧಿಕ ಗ್ರಾಮಗಳು, 15ಕ್ಕೂ ಅಧಿಕ ತಾಂಡಾಗಳ ಜನರ ಅರೋಗ್ಯ ಕಾಪಾಡಲು ನಾಲವಾರ ಹೊರವಲಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವಿದ್ದು, ಆರೋಗ್ಯ ಸೇವೆ ಆಟಕ್ಕುಂಟು ಲೆಕ್ಕಕ್ಕಿಲ್ಲ ಎನ್ನುವಂತಿದೆ. ಆರೋಗ್ಯ ಸೇವೆ ಖಾತ್ರಿಪಡಿಸಲು ನೂತನ ಕಟ್ಟಡ ಕಟ್ಟಲಾಗಿದೆ. ಆದರೆ, 12 ವರ್ಷ ಕಳೆದರೂ ಕಟ್ಟಡ ಮಾತ್ರ ಆರೋಗ್ಯ ಇಲಾಖೆಗೆ ಬಳಕೆಯಾಗದೆ ಹಾಳಾಗಿ ನಿಂತಿದೆ. ಇದು ಆಡಳಿತದ ನಿರ್ಲಕ್ಷ್ಯಕ್ಕೆ ಉದಾಹರಣೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸುತ್ತಾರೆ ಸ್ಥಳೀಯರು.



ಉದಯವಾಹಿನಿ ಚಿತ್ರ

ನಾಲವಾರ, ಬಾಪುನಗರ, ಯಾಗಾಪುರ, ಬೆಳಗೇರಾ, ಶಿವನಗರ, ಸೂಗೂರು ಹೀಗೆ ಸುಮಾರು 50 ಸಾವಿರಕ್ಕೂ ಅಧಿಕ ಜನರ ಆರೋಗ್ಯ ಖಾತ್ರಿ ಪಡಿಸಬೇಕಾಗಿದ್ದ ಆಸ್ಪತ್ರೆ ಸ್ವತಃ ಅನಾರೋಗ್ಯಕ್ಕೆ ತುತ್ತಾಗಿ ಮೂಕರೋಧನೆ ಅನುಭವಿಸುತ್ತಿದೆ. ಹಳೆಯ ಕಟ್ಟಡದಲ್ಲೇ ಸದ್ಯ ಆರೋಗ್ಯ ಕೇಂದ್ರ ನಡೆಯುತ್ತಿದ್ದು, ಮಳೆ ಬಂದರೆ ಸಂಪೂರ್ಣ ಸೋರುತ್ತದೆ. ಔಷಧ ಸಂಗ್ರಹ ಕೋಣೆ, ಚಿಕಿತ್ಸೆ ಕೋಣೆ, ವೈದ್ಯಾಧಿಕಾರಿ ಮತ್ತು ಸಿಬ್ಬಂದಿ ಕೋಣೆ ಸಂಪೂರ್ಣ ಶಿಥಿಲಗೊಂಡಿದ್ದು ಸಂಪೂರ್ಣ ಸೋರುತ್ತವೆ. ಚಾವಣಿ ಪದರು ಕಳಚಿ ಬೀಳುತ್ತಿದ್ದು ಸಿಬ್ಬಂದಿಗೆ ಮತ್ತು ರೋಗಿಗಳಿಗೆ ಯಾವುದೇ ಭದ್ರತೆ ಇಲ್ಲದಂತಾಗಿದೆ. ಹಲವು ಸಮಸ್ಯೆಗಳ ಮಧ್ಯೆ ಹಳೆ ಕಟ್ಟಡದಲ್ಲೇ ಆರೋಗ್ಯ ಸೇವೆ ನೀಡಲಾಗುತ್ತಿದೆ.

**ಹಾಳು ಬಿದ್ದ ಹೊಸ ಕಟ್ಟಡ:** 13 ವರ್ಷಗಳ ಹಿಂದೆ ಕೆಆರ್‌ಐಡಿಎಲ್‌ನಿಂದ ನಿರ್ಮಿಸಿರುವ ಆಸ್ಪತ್ರೆ ಕಟ್ಟಡ ಆರೋಗ್ಯ ಇಲಾಖೆಗೆ ಬಳಕೆಯಾಗದ ಕಾರಣ ಹಾಳುಬಿದ್ದಿದ್ದು, ಕಿಟಕಿ, ಬಾಗಿಲುಗಳು, ಗಾಜುಗಳು ಒಡೆದು ಪುಡಿಪುಡಿಯಾಗಿವೆ. ವಿದ್ಯುತ್ ಉಪಕರಣ, ಪೈಪ್‌ಗಳ ಕಳ್ಳತನವಾಗಿವೆ. ಸುತ್ತಲೂ ಜಾಲಿಮರಗಳು ಬೆಳೆದು ನಿಂತಿವೆ. ಹಾವು ಚೇಳುಗಳ ಹುತ್ತವಾಗಿದ್ದು ಹಗಲಲ್ಲೂ ಭಯ ಹುಟ್ಟಿಸುತ್ತಿದೆ.

## ಸರ್ಕಾರಿ ಜಾಗದಲ್ಲಿ ಇಸ್ಪೀಟ್ ಆಟಕ್ಕೆ ನಿರ್ಮಿಸಿದ್ದ ಶೆಡ್ ನೆಲಸಮ

**ಉದಯವಾಹಿನಿ, ಬಳ್ಳಾರಿ**
ಪತ್ರಕರ್ತ ಕೆ.ವೀರಭದ್ರಗೌಡ ಪುರಾತತ್ವ ವಸ್ತುಗಳ ಸಂಗ್ರಹಕ್ಕೆಂದು ಜಿಲ್ಲೆಯ ಕುರುಗೋಡು ಪಟ್ಟಣದ ಸರ್ವೆ ನಂ.675 ರ ಒಂದು ಎಕರೆ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ಶೆಡ್ ನಿರ್ಮಿಸಿ. ಅಲ್ಲಿ ಇಸ್ಪೀಟ್ ದಂಧೆ ನಡೆಸುತ್ತಿದ್ದರು. ಪೊಲೀಸರು ಮೊನ್ನೆ ರಾತ್ರಿ ದಾಳಿ ನಡೆಸಿ ಕೇಸು ದಾಖಲಿಸಿದ್ದರಿಂದ ಇಂದು ತಾಲ್ಲೂಕು ಆಡಳಿತ ಆ ಅಕ್ರಮ ಶೆಡ್ ನ್ನು ಡಾಲಿಶ್ ಮಾಡಿತು.ಪತ್ರಕರ್ತ ಕೆ.ವೀರಭದ್ರಗೌಡ ಸೇರಿದಂತೆ ಈ ಪ್ರಕರಣದಲ್ಲಿ 23 ಜನರ ವಿರುದ್ಧ ಕುರುಗೋಡು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪುರಾತತ್ವ ಕುರುಹುಗಳ ವಸ್ತು ಸಂಗ್ರಹಾಲಯ ಮಾಡುವುದಾಗಿ ಶೆಡ್ ನಿರ್ಮಿಸಿ.ಅಲ್ಲಿ ರಾತ್ರಿ ವೇಳೆ ಇಸ್ಪೀಟ್ ಆಡಿಸುವ ದಂಧೆ ಮಾಡುತ್ತಿದ್ದುದರ ಬಗ್ಗೆ ಸಾರ್ವಜನಿಕರಿಂದ ದೂರು ಬಂದ ಹಿನ್ನಲೆಯಲ್ಲಿ ಈ ಕ್ರಮಕೈಗೊಳ್ಳಲಾಗಿದೆ. ಕುರುಗೋಡಿನ ಗ್ರೇಡ್–2 ತಹಶೀಲ್ದಾರ್ ಮಲ್ಲೇಶಪ್ಪ. ತಹಸೀಲ್ದಾರ್ ಕಚೇರಿ ಶಿರಸ್ತೇದಾರ್ ವಿಜಯಕುಮಾರ, ಕಂದಾಯ ನಿರೀಕ್ಷಕ ಮಲ್ಲಿಕಾರ್ಜುನ ಮತ್ತು ಭದ್ರಯ್ಯ, ಗ್ರಾಮಲೆಕ್ಕಾಧಿಕಾರಿ ರಮೇಶ ಮತ್ತು ನಾಗರಾಜ ಪೊಲೀಸ್ ಪೇದೆ ಹನುಮೇಶ್ ಮೊದಲಾದವರು ಡೆಮಾಲಿಶ್ ಕಾರ್ಯದಲ್ಲಿ ಪಾಲ್ಗೊಂಡಿದ್ದರು. ಇನ್ನಾದರೂ ತಾಲ್ಲೂಕು ಆಡಳಿತ ಮಾಧ್ಯಮದ ಹೆಸರಲ್ಲಿ ವಂಚನೆ ಮಾಡುತ್ತಿರುವ ಪತ್ರಕರ್ತರ ಇಂತಹ ದಂಧೆಗಳ ಮೇಲೆ ಅಗತ್ಯ ಕ್ರಮ ಜರುಗಿಸಬೇಕೆಂಬುದು ಸಾರ್ವಜನಿಕರ ಆಗ್ರಹವಾಗಿದೆ.



ಉದಯವಾಹಿನಿ ಚಿತ್ರ

## ಸೃಜನಶೀಲತೆ ಉಳಿಸಿ ಬೆಳೆಸುವುದು ಅಗತ್ಯ

**ಉದಯವಾಹಿನಿ, ಬಳ್ಳಾರಿ**
ಮನದ ಭಾವನೆಗಳನ್ನು ಅಭಿವ್ಯಕ್ತಿಪಡಿಸುವ ಅತ್ಯಂತ ಪರಿಣಾಮಕಾರಿ ಮಾಧ್ಯಮವೇ ಕಲೆ. ಸಂಗೀತ, ಸಾಹಿತ್ಯ, ರಂಗಭೂಮಿ, ಚಿತ್ರಕಲೆ, ನೃತ್ಯ ಸೇರಿದಂತೆ ವಿವಿಧ ಕಲಾ ಪ್ರಕಾರಗಳಲ್ಲಿ ಮನುಷ್ಯನ ಭಾವನೆ, ಅನುಭವ, ಚಿಂತನೆ ಹಾಗೂ ಬದುಕಿನ ಸೌಂದರ್ಯ ಪ್ರಸ್ತುತಗೊಳ್ಳುತ್ತದೆ. ಕಲೆ ಕೇವಲ ಮನರಂಜನೆಯ ಸಾಧನವಲ್ಲ; ಅದು ಸಮಾಜದ ಸಂಸ್ಕೃತಿ, ಪರಂಪರೆ ಮತ್ತು ಮಾನವೀಯ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ಮಹತ್ವದ ಸಾಧನವಾಗಿದೆ ಎಂದು ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸಿದ್ದರಾಮ ಕಲ್ಮಠ ಹೇಳಿದರು. ನಗರದ ಗುಗ್ಗರಹಟ್ಟಿಯಲ್ಲಿರುವ ಶ್ರೀ ಶ್ರೀ ಶ್ರೀ ಭ್ರಮಾರಾಂಭ ಮಲ್ಲಿಕಾರ್ಜುಜನ ಸ್ವಾಮಿ ಶಿವ ದೀಕ್ಷಾ ಮಂದಿರ ಟ್ರಸ್ಟ್‌ನಲ್ಲಿ ಶ್ರೀ ಹುಲಿಕುಂಟೆರಾಯ ತೊಗಲುಗೊಂಬೆ ಕಲಾ ತಂಡದ ವತಿಯಿಂದ ಆಯೋಜಿಸಿದ್ದ "ಚಂದ್ರಮ ಕಲಾ ಸಂಭ್ರಮ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಉದಯವಾಹಿನಿ ಚಿತ್ರ

## ಅದಿರು ಲಾರಿ ಸಂಚಾರಕ್ಕೆ ವಿರೋಧ: ಪೊಲೀಸರಿಗೆ ದಿಗ್ಬಂಧನ

**ಉದಯವಾಹಿನಿ, ಚಿತ್ರದುರ್ಗ**
ಗಣಿಗಳಿಂದ ಕಬ್ಬಿಣದ ಅದಿರು ಸಾಗಿಸುವ ಲಾರಿಗಳು ಗ್ರಾಮಗಳೊಳಗೆ ಸಂಚರಿಸುವುದನ್ನು ವಿರೋಧಿಸಿ ತಾಲ್ಲೂಕಿನ ಭೀಮಸಮುದ್ರದಲ್ಲಿ ನಡೆಯುತ್ತಿದ್ದ ಪ್ರತಿಭಟನೆಯು ಗ್ರಾಮಸ್ಥರು ಹಾಗೂ ಪೊಲೀಸರ ನಡುವೆ ತೀವ್ರ ವಾಗ್ವಾದಕ್ಕೆ ಕಾರಣವಾಯಿತು. ಪ್ರತಿಭಟನಕಾರರನ್ನು ಬಂಧಿಸಲು ಬಂದಿದ್ದ ಪೊಲೀಸರಿಗೇ ಗ್ರಾಮಸ್ಥರು ದಿಗ್ಬಂಧನ ಹಾಕಿದರು.ಗಣಿಬಾಧಿತ ಪರಿಸರ ಪುನಶ್ಚತನ ಸಮಿತಿ, ರೈತಸಂಘದ ಸದಸ್ಯರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಗಣಿ ಲಾರಿಗಳ ಓಡಾಟ ಖಂಡಿಸಿ 50 ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದಾರೆ. ಪೊಲೀಸರು ಏಕಾಏಕಿ ಹಲವು ಪ್ರತಿಭಟನಕಾರರನ್ನು ಬಂಧಿಸಿದರು. ಅವರನ್ನು ಗ್ರಾಮದ ಮೂಲಕ ಪೊಲೀಸ್ ಠಾಣೆಗೆ ಕರೆದೊಯ್ಯುವಾಗ ವಿವಿಧ ಹಳ್ಳಿಗಳ ಗ್ರಾಮಸ್ಥರು, ರೈತರು, ಮಹಿಳೆಯರು, ಮಕ್ಕಳು ಪೊಲೀಸರ ವಾಹನವನ್ನು ತಡೆದರು. ವಾಹನದ ಸುತ್ತಲೂ ಕುಳಿತ ನೂರಾರು ಜನರು ಬಂಧನ ಕ್ರಮದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ತಮ್ಮನ್ನೂ ಬಂಧಿಸಿ ಕರೆದೊಯ್ಯುವಂತೆ ಘೋಷಣೆ ಕೂಗಿದರು. ಇಲ್ಲದಿದ್ದರೆ ಪೊಲೀಸ್ ವಾಹನ ಮುಂದಕ್ಕೆ ಹೋಗಲು ಬಿಡುವುದಿಲ್ಲ ಎಂದು ಪಟ್ಟು ಹಿಡಿದರು. ಪೊಲೀಸರು ಎಷ್ಟೇ ಪ್ರಯತ್ನಪಟ್ಟರೂ ಪೊಲೀಸ್ ವಾಹನ, ಅಧಿಕಾರಿಗಳ ವಾಹನಗಳನ್ನು ಮುಂದಕ್ಕೆ ಹೋಗದಂತೆ ದಿಗ್ಬಂಧನ ಹಾಕಿದರು. ಈ ವೇಳೆ ಪೊಲೀಸರು ಹಾಗೂ ಗ್ರಾಮಸ್ಥರ ನಡುವೆ ಮಾತಿನ ಚಕಮಕಿ ನಡೆಯಿತು. ತಂಡೋಪತಂಡವಾಗಿ ಬಂದ ರೈತರು, ಪೊಲೀಸರ ವಿರುದ್ಧ ಘೋಷಣೆ ಕೂಗಿದರು. ಕೆಲಕಾಲ ಗ್ರಾಮದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು.



ಉದಯವಾಹಿನಿ ಚಿತ್ರ

ವಿಜಯಪುರ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆಯಾಗಿ ಘೋಷಿಸುವಲ್ಲಿ ರೈತರು ಹಾಗೂ ಪಕ್ಷಾತೀತವಾಗಿ ನಡೆದ ಹೋರಾಟದ ಪಾತ್ರವಿದೆ

# ರೈತರ ಸಮಸ್ಯೆ ಬದಿಗಿಟ್ಟು ಬೆಂಗಳೂರು ಚರ್ಚೆ: ನಡಹಳ್ಳಿ ವಾಗ್ದಾಳಿ

**ಉದಯವಾಹಿನಿ, ಮುದ್ದೇಬಿಹಾಳ**
ರಾಜ್ಯದಲ್ಲಿ ತೀವ್ರ ಬರಗಾಲದಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಸಂದರ್ಭದಲ್ಲಿ ಬರಗಾಲದ ಕುರಿತು ನಡೆದ ವಿಶೇಷ ವಿಧಾನಸಭಾ ಅಧಿವೇಶನದಲ್ಲಿ ರೈತರ ಸಮಸ್ಯೆಗಳ ಬಗ್ಗೆ ಗಂಭೀರ ಚರ್ಚೆ ನಡೆಯಲಿಲ್ಲ. 224 ಶಾಸಕರು ಒಮ್ಮತದಿಂದ ರೈತರ ಪರ ನಿರ್ಣಯ ಕೈಗೊಳ್ಳದಿರುವುದು ರಾಜ್ಯದ ಜನತೆ ಹಾಗೂ ರೈತರಿಗೆ ಮಾಡಿದ ಅವಮಾನ ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಹಾಗೂ ಮಾಜಿ ಶಾಸಕ ಎ.ಎಸ್. ಪಾಟೀಲ ನಡಹಳ್ಳಿ ಆರೋಪಿಸಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಸುಮಾರು 150 ವರ್ಷಗಳ ಬಳಿಕ ರಾಜ್ಯದಲ್ಲಿ ಇಂತಹ ಭೀಕರ ಬರಗಾಲ ಎದುರಾಗಿದೆ. ರೈತರ ಸಂಕಷ್ಟಕ್ಕೆ ಪರಿಹಾರ ಕಂಡುಕೊಳ್ಳುವ ಕುರಿತು ಸದನದಲ್ಲಿ ಸಮರ್ಪಕ ಚರ್ಚೆ ನಡೆಯಲಿಲ್ಲ. ಶಾಸಕರು ಹಾಗೂ ಸಚಿವರ ಬಳಿ ಬರದ ಕುರಿತ ಅಗತ್ಯ ಅಂಕಿ–ಅಂಶಗಳೂ ಇರಲಿಲ್ಲ ಎಂದು ದೂರಿದರು.

ವಿಜಯಪುರ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆಯಾಗಿ ಘೋಷಿಸುವಲ್ಲಿ ರೈತರು ಹಾಗೂ ಪಕ್ಷಾತೀತವಾಗಿ ನಡೆದ ಹೋರಾಟದ ಪಾತ್ರವಿದೆ. ಆದರೆ ಬರದ ಕುರಿತು ನಡೆದ ವಿಶೇಷ ಅಧಿವೇಶನದಲ್ಲಿ ರಾಜ್ಯದ ಹಣಕಾಸಿನ ಪರಿಸ್ಥಿತಿ, ರೈತರಿಗೆ ನೀಡಬೇಕಾದ ಪರಿಹಾರ ಹಾಗೂ ಸರ್ಕಾರ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಮಗ್ರ ಚರ್ಚೆಯಾಗಲಿಲ್ಲ. ಕೇಂದ್ರ ಸರ್ಕಾರದತ್ತ ಬೆರಳು ತೋರಿಸುವ ಮೂಲಕ ಕಾಲಹರಣ ಮಾಡಲಾಗಿದೆ ಎಂದು ನಡಹಳ್ಳಿ ಟೀಕಿಸಿದರು.

1. ಕ್ರಮಗಳ ಕುರಿತು ಸಮಗ್ರ ಚರ್ಚೆಯಾಗಲಿಲ್ಲ
2. ಸದನದಲ್ಲಿ ಸಮರ್ಪಕ ಚರ್ಚೆ ನಡೆಯಲಿಲ್ಲ
3. ಸಮಸ್ಯೆಗಳಿಗೂ ಆದ್ಯತೆ ನೀಡಬೇಕಲ್ಲವೇ



**ರೈತರನ್ನು ಸರ್ಕಾರ ಭಿಕ್ಷುಕರಂತೆ ಕಾಣಬಾರದು ಎಂದು ಆಕ್ರೋಶ ವ್ಯಕ್ತಪಡಿಸಿದ ನಡಹಳ್ಳಿ, ಮುದ್ದೇಬಿಹಾಳ ಎಪಿಎಂಸಿಯಲ್ಲಿ ನಮ್ಮ ಭಾಗದ ರೈತರು ಒಂದು ದಿನ ಕೂಲಿ ಮಾಡಿ ಗಳಿಸಿದ ಹಣವನ್ನು ಮುಖ್ಯಮಂತ್ರಿ ಅವರಿಗೆ ಅಂಚೆ ಮೂಲಕ ಕಳುಹಿಸಲಗುವುದು.**

–ಎ.ಎಸ್. ಪಾಟೀಲ ನಡಹಳ್ಳಿ, ಮಾಜಿ ಶಾಸಕ

ವಿಶೇಷ ಅಧಿವೇಶನದಲ್ಲಿ ಶಾಸಕರು ರೈತರ ಸಮಸ್ಯೆಗಳ ಕುರಿತು ಮಾತನಾಡುವ ಬದಲು ಬೆಂಗಳೂರಿನ ವಿಚಾರಗಳ ಬಗ್ಗೆ ಹೆಚ್ಚು ಚರ್ಚಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸದನದಲ್ಲಿ ರೈತರ ಸಮಸ್ಯೆಗಳಿಗಿಂತ ಬೆಂಗಳೂರಿನ ಕುರಿತು ಹೆಚ್ಚು ಮಾತನಾಡಿದ್ದಾರೆ ಎಂದು ಆರೋಪಿಸಿದ ಅವರು, ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕದ ಜನರ ಸಮಸ್ಯೆಗಳಿಗೂ ಸಮಾನ ಆದ್ಯತೆ ನೀಡಬೇಕಲ್ಲವೇ ಎಂದು ಪ್ರಶ್ನಿಸಿದರು.

ರೈತರಿಗೆ 2,500 ಪರಿಹಾರ ನೀಡುವ ಕುರಿತು ಸರ್ಕಾರದ ನಿರ್ಧಾರವನ್ನು ಟೀಕಿಸಿದ ನಡಹಳ್ಳಿ, ವಿಶೇಷ ಅಧಿವೇಶನದಲ್ಲಿ ಒಬ್ಬ ಶಾಸಕರ ಊಟ–ತಿಂಡಿ ಸೇರಿದಂತೆ ಒಂದು ದಿನದ ಖರ್ಚೇ ಸುಮಾರು 10 ಸಾವಿರವಾಗುತ್ತದೆ ಎಂದು ಹೇಳಿದರು. ಆದರೆ ರೈತರ ಸಮಸ್ಯೆ ಹಾಗೂ ಪರಿಹಾರದ ಕುರಿತು ಶಾಸಕರು ಮತ್ತು ಸಚಿವರು ಸಮರ್ಪಕವಾಗಿ ಮಾತನಾಡಲಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಬರ ಪರಿಹಾರವಾಗಿ ಎನ್‌ಡಿಆರ್‌ಎಫ್ ನಿಯಮಾನುಸಾರ ಖುಷ್ಕಿ ಭೂಮಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಒಟ್ಟು 13,600 ಮತ್ತು ನೀರಾವರಿ ಪ್ರದೇಶಕ್ಕೆ ಒಟ್ಟು 25,000 ಪ್ರತಿ ಹೆಕ್ಟೇರ್‌ಗೆ ನೀಡಲಾಗಿತ್ತು ಎಂದು ನಡಹಳ್ಳಿ ಹೇಳಿದರು. ಪ್ರಸ್ತುತ ಬರ ಪರಿಹಾರದ ಕುರಿತು ಇಂತಹ ಸಮಗ್ರ ಚರ್ಚೆ ನಡೆಯದಿರುವುದು ವಿಷಾದನೀಯ ಎಂದರು. ಮುಂದೆ ಯಾವುದೇ ಜನಪ್ರತಿನಿಧಿ ಅಥವಾ ಸಚಿವರು ಕ್ಷೇತ್ರಕ್ಕೆ ಬಂದಾಗ ರೈತರು ತಮ್ಮ ಒಂದು ದಿನದ ದುಡಿಮೆಯ 2,500 ಮೊತ್ತವನ್ನು 10 ಮತ್ತು 20 ಮುಖಬೆಲೆಯ ನೋಟುಗಳ ಹಾರ ಮಾಡಿ ನೀಡಿ ರೈತರ ಸ್ವಾಭಿಮಾನ ಪ್ರದರ್ಶಿಸಬೇಕು ಎಂದು ಕರೆ ನೀಡಿದರು. ಈ ಕುರಿತು ಬೆಂಗಳೂರಿನಲ್ಲಿಯೂ ಪತ್ರಿಕಾಗೋಷ್ಠಿ ನಡೆಸಿ ರಾಜ್ಯದ ರೈತರಿಗೆ ಕರೆ ನೀಡುವುದಾಗಿ ತಿಳಿಸಿದರು.

ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ಆಯುಕ್ತರ ಆಕ್ಷೇಪದ ಕುರಿತು ಆಯೋಗದ ಸ್ಪಷ್ಟನೆ

# SIR ಪ್ರಕ್ರಿಯೆ ಎಲ್ಲಾ ಆಯುಕ್ತರ ಒಮ್ಮತದ ನಿರ್ಧಾರ

**ನವದೆಹಲಿ:** ಮುಖ್ಯ ಚುನಾವಣಾಧಿಕಾರಿ ಜ್ಞಾನೇಶ್ ಕುಮಾರ್ ಅವರ ವಿರುದ್ಧ ಹಲವು ಆಕ್ಷೇಪಗಳು ಎದ್ದಿವೆ. ಸದ್ಯ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ನಡೆಯುತ್ತಿದೆ. ಈ ನಡುವೆ ಭಾರತೀಯ ಚುನಾವಣಾ ಆಯೋಗವು ಒಂದು ಪ್ರಮುಖ ನಿರ್ಧಾರವನ್ನು ಕೈಗೊಂಡಿದೆ.

ಪ್ರಸ್ತುತ ನಡೆಯುತ್ತಿರುವ ಪರಿಷ್ಕರಣಾ ಪ್ರಕ್ರಿಯೆಯಲ್ಲಿ, ಮತದಾರರ ಪಟ್ಟಿಯಲ್ಲಿ ತಾಳೆಯಾಗದ ಮತ್ತು ತಾರ್ಕಿಕ ವ್ಯತ್ಯಾಸಗಳ ಕಾರಣಕ್ಕೆ ನೋಟಿಸ್ ಪಡೆದಿರುವ ಜನರು ಚುನಾವಣಾಧಿಕಾರಿಗಳ ಕಚೇರಿಗೆ ಹೋಗುವ ಅಗತ್ಯವಿಲ್ಲ. ಅಂತಹ ವ್ಯಕ್ತಿಗಳ ಮನೆಗಳಿಗೆ ಬಿಎಲ್ ಮಟ್ಟದ ಅಧಿಕಾರಿಗಳೇ ಖುದ್ದಾಗಿ ಭೇಟಿ ನೀಡಿ ಅಗತ್ಯ ದಾಖಲೆಗಳನ್ನು ಸಂಗ್ರಹಿಸಲಿದ್ದಾರೆ. ಬಳಿಕ ಅದನ್ನು ಇಸಿಐನೆಟ್ ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲಿದ್ದಾರೆ ಎಂದು ತಿಳಿಸಿದೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಮತ್ತು ಚುನಾವಣಾ ಆಯುಕ್ತರಾದ ವಿವೇಕ್ ಜೋಶಿ, ಸುಖ್ ಬೀರ್ ಸಿಂಗ್ ಸಂಧು ಅವರ ನೇತೃತ್ವದಲ್ಲಿ ಇಲ್ಲಿನ ಪ್ರಧಾನ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಚುನಾವಣಾ ಆಯೋಗದ ಪ್ರಕಟಣೆಯ ಪ್ರಕಾರ, ದಾಖಲೆ ಸಲ್ಲಿಕೆಗಾಗಿ ಜನರು ಚುನಾವಣಾಧಿಕಾರಿ ಕಚೇರಿಗಳಿಗೆ ಅಲೆಯಬೇಕಿಲ್ಲ. ಕೇವಲ



ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಆನ್‌ಲೈನ್ ಮೂಲಕ ವಿಚಾರಣೆ ನಡೆಸಲು ಇಆರ್‌ಒ ನಿರ್ಧರಿಸಬಹುದು. ಅಗತ್ಯಬಿದ್ದಲ್ಲಿ ಮತದಾರರ ಪರವಾಗಿ ಕುಟುಂಬ ಯಾವುದೇ ವಯಸ್ಕ ಸದಸ್ಯ ವಿಚಾರಣೆಗೆ ಹಾಜರಾಗಬಹುದು ಎಂದು ತಿಳಿಸಿದೆ.

**ಆಂತರಿಕ ಭಿನ್ನಾಭಿಪ್ರಾಯಗಳ ವರದಿಗಳಿಗೆ ಸ್ಪಷ್ಟನೆ:** ಇತ್ತೀಚೆಗೆ ಮಾಧ್ಯಮಗಳಲ್ಲಿ ವರದಿಯಾಗಿದ್ದ ಚುನಾವಣಾ ಆಯೋಗದಲ್ಲಿನ ಭಿನ್ನಾಭಿಪ್ರಾಯಗಳ ಕುರಿತು ಆಯೋಗವು ಪ್ರತಿಕ್ರಿಯಿಸಿದೆ. ಕ್ಯಾಬಿನೆಟ್ ಕಾರ್ಯದರ್ಶಿಗೆ ಪತ್ರ ಬರೆಯಲಾಗಿದ್ದು, ಆಯೋಗದ ಇತರ ಆಯುಕ್ತರ ಆಕ್ಷೇಪ ಉನ್ನತಾಧಿಕಾರಿಯ ಕಾರ್ಯವೈಖರಿಯ ಕುರಿತಾಗಿದೆ. ದೇಶಾದ್ಯಂತ ಜಾರಿಗೆ ತರಲಾದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಆದೇಶ ಸೇರಿದಂತೆ ಇತ್ತೀಚಿನ ಎಲ್ಲ ಪ್ರಮುಖ ನಿರ್ಧಾರಗಳನ್ನು ಆಯೋಗವು ಒಮ್ಮತದ ಅಂಗೀಕಾರಗೊಂದಿಗೆ ತೆಗೆದುಕೊಳ್ಳಲಾಗಿದೆ. ಇದನ್ನು ಸುಪ್ರೀಂ ಕೋರ್ಟ್ ಕೂಡ ಎತ್ತಿಹಿಡಿದಿದೆ ಎಂದು ಸ್ಪಷ್ಟನೆ ನೀಡಿದೆ.

### ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ದೆಹಲಿ ಮತ್ತು ಮಹಾರಾಷ್ಟ್ರ ಮುಖ್ಯ ಚುನಾವಣಾಧಿಕಾರಿಗಳ ಮನವಿಯ ಮೇರೆಗೆ ಮತದಾರರ ಪಟ್ಟಿಗೆ ಸಂಬಂಧಿಸಿದ ಆಕ್ಷೇಪಣೆ ಮತ್ತು ಹಕ್ಕುಗಳ ಸಲ್ಲಿಕೆ ಅವಧಿಯನ್ನು ವಿಸ್ತರಿಸಲಾಗಿದೆ. ದೆಹಲಿಯಲ್ಲಿ ಅಕ್ಟೋಬರ್ 30 ರವರೆಗೆ, ಮಹಾರಾಷ್ಟ್ರದಲ್ಲಿ ಅಕ್ಟೋಬರ್ 12 ರವರೆಗೆ ಅವಕಾಶ ನೀಡಲಾಗಿದೆ.

### ಮತದಾರರ ನೋಂದಣಿಗೆ ವಿಶೇಷ ಆಂದೋಲನ

ಬಿಹಾರ ಮತ್ತು ಪಶ್ಚಿಮ ಬಂಗಾಳ ಸೇರಿದಂತೆ 20 ರಾಜ್ಯಗಳು–ಕೇಂದ್ರಾಡಳಿತ ಪ್ರದೇಶಗಳಲ್ಲಿ ಈಗಾಗಲೇ ಎಸ್‌ಐಆರ್ ನಡೆದಿದೆ. ಈ ಪ್ರಕ್ರಿಯೆಯಲ್ಲಿ ಹೆಸರು ಬಿಟ್ಟು ಹೋದವರು ಅಥವಾ ಹೊಸ ಮತದಾರರು ತಮ್ಮ ಹೆಸರನ್ನು ಸೇರ್ಪಡೆ ಮಾಡಿಕೊಳ್ಳಲು ಅರ್ಜಿ ಸಲ್ಲಿಸಬಹುದು. ಈ ಮತದಾರರ ನೋಂದಣಿಗೆ ವಿಶೇಷ ಆಂದೋಲನ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.



## ಮಿನಿ ನ್ಯೂಸ್

### ಹೆಬ್ಬಾವು ಕರ್‍ರಿ ಮಾಡಿ ತಿಂದ ಮೂವರು ಅರೆಸ್ಟ್!

**ತ್ರಿಶೂರ್ (ಕೇರಳ):** ಬೃಹತ್ ಗಾತ್ರದ ಹೆಬ್ಬಾವೊಂದನ್ನು ಹಿಡಿದು ಕೊಂದು, ಕರಿ ಮಾಡಿ ಸೇವಿಸಿದ ಮೂವರು ಯುವಕರನ್ನು ಅರಣ್ಯ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ. ತ್ರಿಶೂರ್‌ನ ಮಂದಮಂಗಲಂನ ಚೆರುಕುನ್ನು ಎಂಬಲ್ಲಿ ಘಟನೆ ನಡೆದಿದೆ. ಚೆರುಕುನ್ನು



ನಿವಾಸಿಗಳಾದ ಜಿನ್ಸನ್ ಜೋಸ್ (36), ಜಿಷ್ಣು (30) ಮತ್ತು ವಿವೇಕ್ (30) ಬಂಧಿತ ಆರೋಪಿಗಳಾಗಿದ್ದಾರೆ. ಮಂದಮಂಗಲಂ ಅರಣ್ಯ ನಿಲ್ದಾಣದ ಡೆಪ್ಯುಟಿ ರೇಂಜ್ ಫಾರೆಸ್ಟ್ ಆಫೀಸರ್ ಎಂ. ಶಾಹಜಹಾನ್ ನೇತೃತ್ವದ ತಂಡವು ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ. ಈ ತಂಡದಲ್ಲಿ ಅಧಿಕಾರಿಗಳಾದ ಎಸ್. ರಾಜೇಶ್, ಟಿ. ಯು. ರಾಜ್‌ಕುಮಾರ್, ಕೆ. ಎಸ್. ಅನಿಲ್‌ಕುಮಾರ್, ಕೆ. ಎ. ಸಲೀಂ, ಎಂ. ಆರ್. ರಾಹುಲ್ ಶಂಕರ್ ಮತ್ತು ಪಿ. ವಿ. ಅಮ್ಮಿನಿ ಇದ್ದರು. ಸುರಕ್ಷಿತ ಸ್ಥಳಾಂತರಿಸುವ ಬದಲು ಅಡುಗೆ ಮಾಡಿ ಭಕ್ಷಿಸಿದರು: ರಾತ್ರಿ ವೇಳೆ ಆರೋಪಿಗಳ ಮನೆಯ ಸಮೀಪ ಬೃಹತ್ ಗಾತ್ರದ ಹೆಬ್ಬಾವೊಂದು ಕಾಣಿಸಿಕೊಂಡಿತ್ತು. ಸಾಮಾನ್ಯವಾಗಿ, ವಸತಿ ಪ್ರದೇಶಗಳಲ್ಲಿ ಹಾವುಗಳು ಕಂಡುಬಂದಾಗ ಸ್ಥಳೀಯರು ಅರಣ್ಯ ಇಲಾಖೆಗೆ ಅಥವಾ ಹಾವು ಹಿಡಿಯುವವರಿಗೆ ಮಾಹಿತಿ ನೀಡುತ್ತಾರೆ. ಆದರೆ, ಈ ಯುವಕರು ಹಾಗೆ ಮಾಡುವ ಬದಲಾಗಿ, ಜೀವಂತ ಹೆಬ್ಬಾವನ್ನು ಹಿಡಿದು, ಅದನ್ನು ತುಂಡರಿಸಿ ಸಾರು ಮಾಡಿ ಸೇವಿಸಿದ್ದಾರೆ.

## 9 ವರ್ಷ ಹೋರಾಡಿ ಕೇಸ್ ಗೆದ್ದ ತಂದೆ

**ನವದೆಹಲಿ:** ಇದು 2017ರ ಘಟನೆ. ಅಂದು ಯುವಕನೊಬ್ಬ ಅಚಾನಕ್ಕಾಗಿ ಚಲಿಸುತ್ತಿದ್ದ ರೈಲಿನಿಂದ ಬಿದ್ದು ಮೃತಪಟ್ಟಿದ್ದ. ಮಗನ ಸಾವಿಗೆ ಪರಿಹಾರ ಕೋರಿ ಪೋಷಕರು ಕಳೆದ 9 ವರ್ಷಗಳಿಂದ ಹೋರಾಟ ನಡೆಸಿ ಕೊನೆಗೂ ಜಯ ಸಾಧಿಸಿದ್ದಾರೆ. ಸುಪ್ರೀಂ ಕೋರ್ಟ್ ಅವರಿಗೆ ನ್ಯಾಯ ಒದಗಿಸಿದೆ.

ರೈಲು ಅಪಘಾತದ ಸಂದರ್ಭದಲ್ಲಿ ಟಿಕೆಟ್ ಸಿಗದ ಕಾರಣಕ್ಕೆ ಮೃತರ ಕುಟುಂಬದ ಪರಿಹಾರದ ಹಕ್ಕನ್ನು ನಿರಾಕರಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿತು. ಈ ಮೂಲಕ ರೈಲ್ವೆ ಹಕ್ಕುಗಳ ನ್ಯಾಯಾಧೀಕರಣ ನೀಡಿದ್ದ ಪರಿಹಾರದ ಆದೇಶವನ್ನು ನ್ಯಾಯಾಲಯವು ಎತ್ತಿಹಿಡಿಯಿತು. ನ್ಯಾಯಮೂರ್ತಿಗಳಾದ ಉಜ್ವಲ್ ಭುಯಾನ್ ಮತ್ತು ಎ.ಎಸ್. ಚಂದುರ್ಕರ್ ಅವರಿದ್ದ ಪೀಠವು ಈ ಪ್ರಕರಣದ ವಿಚಾರಣೆ ನಡೆಸಿ ನ್ಯಾಯಯುತವಾಗಿ ಇತ್ಯರ್ಥಪಡಿಸಿತು.

**ಪ್ರಕರಣದ ವಿವರ:** 2017ರ ಸೆಪ್ಟೆಂಬರ್‌ನಲ್ಲಿ ಮಹೇಶ್ ಭಾಯ್ ಎಂಬ ಯುವಕ ಅಹಮದಾಬಾದ್ ಮಾರ್ಗವಾಗಿ ಸೂರತ್‌ಗೆ ಸಾಮಾನ್ಯ

## ರೈಲ್ವೆ ಅಪಘಾತದಲ್ಲಿ ಟಿಕೆಟ್ ಸಿಗಲಿಲ್ಲ ಎಂಬ ಕಾರಣಕ್ಕೆ ಸಂತ್ರಸ್ತರಿಗೆ ಪರಿಹಾರ ನಿರಾಕರಿಸುವಂತಿಲ್ಲ: ಸುಪ್ರೀಂ

ಬೋಗಿಯಲ್ಲಿ ಪ್ರಯಾಣಿಸುತ್ತಿದ್ದ. ಸಬರಮತಿ ಮತ್ತು ಅಹಮದಾಬಾದ್ ನಿಲ್ದಾಣಗಳ ನಡುವೆ ರೈಲು ಇದ್ದಕ್ಕಿದ್ದಂತೆ ಜೋರಾಗಿ ಜರ್ಕ್ ಆದ ಕಾರಣ ಕೆಳಗೆ ಬಿದ್ದು ಗಂಭೀರ ಗಾಯಗೊಂಡಿದ್ದ. ಆತನನ್ನು ಆಸ್ಪತ್ರೆಗೆ ದಾಖಲಿಸಿದರೂ ಚಿಕಿತ್ಸೆ ಫಲಿಸದೇ ಅಕ್ಟೋಬರ್‌ನಲ್ಲಿ ಆತ ಸಾವಿಗೀಡಾಗಿದ್ದ.

ಬಳಿಕ, ಮೃತನ ಪೋಷಕರು 1987ರ ರೈಲ್ವೆ ಹಕ್ಕುಗಳ ನ್ಯಾಯಾಧಿಕರಣ ಕಾಯ್ದೆಯ ಸೆಕ್ಷನ್ 16ರ ಅಡಿ ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಿದ್ದರು. ಜೂನ್ 2022ರಲ್ಲಿ ಈ ಅರ್ಜಿಯ ವಿಚಾರಣೆ ನಡೆಸಿದ್ದ ನ್ಯಾಯಾಧಿಕರಣವು, ಮಹೇಶ್ ಭಾಯ್ ಆಕಸ್ಮಿಕವಾಗಿ ರೈಲಿನಿಂದ ಬಿದ್ದು ಮೃತಪಟ್ಟಿರುವುದು ದೃಢಪಟ್ಟಿದೆ. ಅವರ ಪೋಷಕರಿಗೆ ಘಟನೆ ನಡೆದ ದಿನದಿಂದ ಆದೇಶದ ದಿನದವರೆಗೆ ವಾರ್ಷಿಕ ಶೇಕಡಾ 9 ರಷ್ಟು ಬಡ್ಡಿಯೊಂದಿಗೆ 8 ಲಕ್ಷ ರೂಪಾಯಿ ಪರಿಹಾರ ನೀಡುವಂತೆ ರೈಲ್ವೆ ಇಲಾಖೆಗೆ ಆದೇಶಿಸಿತ್ತು.

**ಉಲ್ಟಾ ಆದೇಶ ನೀಡಿದ್ದ ಹೈಕೋರ್ಟ್:** ನ್ಯಾಯಾಧಿಕರಣದ ಆದೇಶವನ್ನು ಪ್ರಶ್ನಿಸಿ ಕೇಂದ್ರ ಸರ್ಕಾರವು ಗುಜರಾತ್ ಹೈಕೋರ್ಟ್ ಮೆಟ್ಟಿಲೇರಿತ್ತು. ಜುಲೈ 2025ರಲ್ಲಿ ಅರ್ಜಿಯ ವಿವಾರಣೆ ನಡೆಸಿದ್ದ ಗುಜರಾತ್ ಹೈಕೋರ್ಟ್, ಯುವಕ ರೈಲಿನಿಂದಲೇ ಬಿದ್ದಿದ್ದಾನೆ ಎಂಬುದಕ್ಕೆ ಯಾವುದೇ ಪುರಾವೆಗಳಿಲ್ಲ. ಆತನ ಬಳಿ ಟಿಕೆಟ್ ಕೂಡ ಪತ್ತೆಯಾಗಿಲ್ಲ ಎಂದು ಹೇಳಿ ರೈಲ್ವೆ ಇಲಾಖೆ ಪರವಾಗಿ ತೀರ್ಪು ನೀಡಿ ಪರಿಹಾರ ರದ್ದುಗೊಳಿಸಿತ್ತು.

ಇದನ್ನು ಪ್ರಶ್ನಿಸಿ ಪೋಷಕರು ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು. ಪೋಷಕರ ಪರವಾಗಿ ವಾದ ಮಂಡಿಸಿದ ಹಿರಿಯ ವಕೀಲ ನಾಚಿಕೇತ ಜೋಶಿ, ಸಂತ್ರಸ್ತನ ಬಳಿ ಇದ್ದ ಟಿಕೆಟ್ ಕಳೆದು ಹೋಗಿದೆ ಎಂದು ಪೋಷಕರು ಪ್ರಮಾಣ ಮಾಡಿ ತಿಳಿಸಿದ್ದಾರೆ. ಇಂತಹ ಸಂದರ್ಭದಲ್ಲಿ ಟಿಕೆಟ್ ರಹಿತ ಪ್ರಯಾಣಿಕ ಎಂಬುದನ್ನು ಸಾಬೀತುಪಡಿಸುವ ಜವಾಬ್ದಾರಿ ರೈಲ್ವೆ ಇಲಾಖೆಯ ಮೇಲಿರುತ್ತದೆ ಎಂದು ವಾದಿಸಿದ್ದರು. ಮತ್ತೊಂದೆಡೆ ಕೇಂದ್ರ ಸರ್ಕಾರದ ಪರ ವಕೀಲರು, ಇದು ಸ್ವಯಂ ಅಪರಾಧದಿಂದ ಮಾಡಿಕೊಂಡ ಗಾಯವಾಗಿದೆ. ಟಿಕೆಟ್ ಇಲ್ಲದ ಕಾರಣ ಪರಿಹಾರ ನೀಡಲು ಸಾಧ್ಯವಿಲ್ಲ ಎಂದಿದ್ದರು.

## ಸಂಧಾನ ಪ್ರಸ್ತಾಪ ತಿರಸ್ಕೃತ: ಟ್ರಂಪ್ ಹೇಳಿಕೆಗೆ ಕ್ಯಾರೇ ಎನ್ನದ Iran

**ಇರಾನ್:** ಮಧ್ಯಪ್ರಾಚ್ಯದಲ್ಲಿ ಯುದ್ಧದ ಕಿಚ್ಚು ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇದೆ. ಇರಾನ್ ಪ್ರಸ್ತಾಪಿಸಿದ್ದ ಏಳು ದಿನಗಳ ಶಾಂತಿ ಮಾರ್ಗಸೂಚಿಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಾರಾಸಗಟಾಗಿ ತಿರಸ್ಕರಿಸಿದ್ದಾರೆ. ಆದರೆ, ಟ್ರಂಪ್ ಅವರ ಈ ಸಾರ್ವಜನಿಕ ಹೇಳಿಕೆಗೆ ಇರಾನ್ ಕಿಂಚಿತ್ತೂ ತಲೆಕೆಡಿಸಿಕೊಂಡಿಲ್ಲ. ಬದಲಿಗೆ, ಅಮೆರಿಕದಿಂದ ಅಧಿಕೃತ ಮತ್ತು ಲಿಖಿತ ಪ್ರತಿಕ್ರಿಯೆ ಬರುವವರೆಗೂ ಕಾಯುವುದಾಗಿ ಇರಾನ್ ರಾಜತಾಂತ್ರಿಕ ನಡೆ ಇಟ್ಟಿದೆ.



ಟೆಲಿಗ್ರಾಂನಲ್ಲಿ ಪ್ರಕಟಿಸಿರುವ ಸಂದೇಶದಲ್ಲಿ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ, ಟ್ರಂಪ್ ಪ್ರಸ್ತಾವನೆಯನ್ನು ತಿರಸ್ಕರಿಸಿರುವುದನ್ನು ಒಪ್ಪಿಕೊಂಡಿದ್ದಾರೆ. ಆದರೆ, ಈ ಹಿಂದೆ ಟ್ರಂಪ್ ಪರಸ್ಪರ ವಿರುದ್ಧವಾದ ಹೇಳಿಕೆಗಳನ್ನು ನೀಡಿದ್ದರು ಎಂದು ಆರೋಪಿಸಿದ್ದಾರೆ. ಟ್ರಂಪ್ ಹಲವು ಉತ್ತಮ ಹೇಳಿಕೆಗಳನ್ನು ನೀಡಿದ್ದಾರೆ, ಆದರೆ, ಅನೇಕ ಬಾರಿ ಪರಸ್ಪರ ವಿರುದ್ಧವಾದ ಹೇಳಿಕೆಗಳನ್ನೂ ನೀಡಿದ್ದಾರೆ. ದುರದೃಷ್ಟವಶಾತ್, ನಾವು ಇದನ್ನು ಆಗಾಗ್ಗೆ ಕೇಳುತ್ತೇವೆ. ಮಧ್ಯಸ್ಥರು ತಮ್ಮ ಅಂತಿಮ ನಿಲುವನ್ನು ನಮಗೆ ತಿಳಿಸುವುದಕ್ಕಾಗಿ ನಾವು ಕಾಯುತ್ತಿದ್ದೇವೆ. ಅವರ ಪ್ರತಿಕ್ರಿಯೆಯ ಆಧಾರದ ಮೇಲೆ ನಾವು ನಿರ್ಧಾರ ಕೈಗೊಳ್ಳುತ್ತೇವೆ ಎಂದು ಹೇಳಿದ್ದಾರೆ. ಇದಕ್ಕೂ ಮುನ್ನ ಶ್ವೇತಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ್ದ ಟ್ರಂಪ್, ಟೆಹ್ರಾನ್ ಮುಂದಿಟ್ಟಿರುವ ಪ್ರಸ್ತಾವನೆ "ಸ್ವೀಕಾರಾರ್ಹವಲ್ಲ" ಎಂದು ಹೇಳಿದ್ದರು. ನಾನು ಅವರ ಒಪ್ಪಂದವನ್ನು ತಿರಸ್ಕರಿಸುತ್ತಿದ್ದೇನೆ. ಹಾರ್ಮುಜ್ ಜಲಸಂಧಿಯ ಮೇಲೆ ಈಗಾಗಲೇ ಅಮೆರಿಕ "ಸಂಪೂರ್ಣ ನಿಯಂತ್ರಣ ಹೊಂದಿದ್ದು, ಅದರ ಮೂಲಕ "ಭಾರಿ ಪ್ರಮಾಣದ ತೈಲ" ಸಾಗುತ್ತಿದೆ. ಹಾರ್ಮುಜ್ ಜಲಸಂಧಿಯನ್ನು ತಕ್ಷಣವೇ ತೆರೆಯುವ ಒಪ್ಪಂದ ಮಾಡಿಕೊಳ್ಳಲು ಇರಾನ್ ಬಯಸಿದೆ. ಏಕೆಂದರೆ "ಅವರು ಭಾರಿ ನಷ್ಟ ಅನುಭವಿಸುತ್ತಿ ದ್ದಾರೆ" ಎಂದು ತಿಳಿಸಿದ್ದರು. ಕಳೆದ ವಾರ ನ್ಯೂಯಾರ್ಕ್‌ನಲ್ಲಿ ನಡೆದ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಸಂದರ್ಭದಲ್ಲಿ ನಡೆದ ಮಾತುಕತೆಗಳಲ್ಲಿ ಹಾರ್ಮುಜ್ ಜಲಸಂಧಿಯನ್ನು ಪುನಃ ತೆರೆಯುವುದು ಹಾಗೂ ಸಂಘರ್ಷವನ್ನು ಅಂತ್ಯಗೊಳಿಸುವ ಕುರಿತು ಪ್ರಸ್ತಾಪಿಸಿದ್ದಾಗಿ ಇರಾನ್ ತಿಳಿಸಿತ್ತು. ವಿಶ್ವದ ಒಟ್ಟು ಅನಿಲ ಮತ್ತು ತೈಲ ಪೂರೈಕೆಯ ಸುಮಾರು ಐದನೇ ಒಂದು ಭಾಗ ಸಾಗುವ ಈ ಪ್ರಮುಖ ಜಲಮಾರ್ಗವು ಫೆಬ್ರವರಿಯಲ್ಲಿ ಯುದ್ಧ ಆರಂಭವಾದ ಬಳಿಕ ಬಹುತೇಕ ಬಂದ್ ಆಗಿದೆ.

## NEET ಪ್ರಶ್ನೆಪತ್ರಿಕೆ ಸೋರಿಕೆ: NTA ಕಚೇರಿಗೆ CISF ಕಾವಲು

ದೆಹಲಿಯಲ್ಲಿರುವ ಕೇಂದ್ರ ಹೊಸ ಕಚೇರಿಗೆ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ತನ್ನ ಗೌಪ್ಯ ಹಾಗೂ ಸೂಕ್ಷ್ಮ ಕಾರ್ಯಾಚರಣೆಗಳನ್ನು ಸ್ಥಳಾಂತರಿಸಿದೆ. ಇನ್ನು ಮುಂದೆ ಈ ಕಚೇರಿ ಆವರಣದ ಭದ್ರತೆಯನ್ನು ಕೇಂದ್ರ ಕೈಗಾರಿಕಾ ಭದ್ರತಾ ಪಡೆ ನಿರ್ವಹಿಸಲಿದ್ದು, ಗೌಪ್ಯ ಎಂದು ಗುರುತಿಸಲಾದ ಪ್ರದೇಶಗಳಿಗೆ ಪ್ರವೇಶವನ್ನು ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಮಾಡಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



NEET-UG ಪ್ರಶ್ನೆಪತ್ರಿಕೆ ಸೋರಿಕೆ ವಿವಾದ ಹಾಗೂ ಪರೀಕ್ಷಾ ಭದ್ರತಾ ವ್ಯವಸ್ಥೆಯಲ್ಲಿನ ಲೋಪಗಳ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. NTAಯ ಹೊಸ ಕಚೇರಿ ದೆಹಲಿಯ ಮಿಂಟೋ ರಸ್ತೆಯಲ್ಲಿರುವ ಭಾರತ ಸರ್ಕಾರದ ಮುದ್ರಣಾಲಯದ ಕಟ್ಟಡದಲ್ಲಿದ್ದು, ಭದ್ರತೆ ಮತ್ತು ಪ್ರವೇಶ ನಿಯಂತ್ರಣಕ್ಕಾಗಿ 39 CISF ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಮಿಂಟೋ ರಸ್ತೆಯಲ್ಲಿರುವ ಕೇಂದ್ರ ಸರ್ಕಾರದ ಮುದ್ರಣಾಲಯದ ಕಟ್ಟಡದಲ್ಲಿ 55,000 ಚದರ ಅಡಿಗೂ ಹೆಚ್ಚಿನ ಪ್ರತ್ಯೇಕ ಕಚೇರಿ ಸ್ಥಳವನ್ನು NTAಗೆ ನೀಡಲಾಗಿದೆ. ಕಟ್ಟಡದ ಐದನೇ ಮಹಡಿ ಹಾಗೂ ನಾಲ್ಕನೇ ಮತ್ತು ಆರನೇ ಮಹಡಿಯ ಕೆಲವು ಭಾಗಗಳನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆಗೆ ಹಂಚಿಕೆ ಮಾಡಲಾಗಿದೆ. ಕಳೆದ ಒಂದು ತಿಂಗಳಲ್ಲಿ ಗೌಪ್ಯ ಹಾಗೂ ಸೂಕ್ಷ್ಮ ಕಾರ್ಯಾಚರಣೆಗಳನ್ನು ಹೊಸದಾಗಿ ಹಂಚಿಕೆಯಾಗಿರುವ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ" ಎಂದು ಹಿರಿಯ ಅಧಿಕಾರಿಯೊಬ್ಬರು ಪಿಟಿಐ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.

### ಬಿಜೆಪಿ ಬಗ್ಗೆ 'ಅಸಮಾಧಾನ' ಕುರಿತು ಅಮರಿಂದರ್ ಸಿಂಗ್

**ನವದೆಹಲಿ:** ಪಂಜಾಬ್‌ನ ಬಗ್ಗೆ ತಮಗಿರುವ ಅಭಿಪ್ರಾಯವನ್ನು ತಮ್ಮ ಪಕ್ಷಕ್ಕೆ (ಬಿಜೆಪಿ) ತಿಳಿಸುವುದು ತಮ್ಮ ಕರ್ತವ್ಯ. ಹಾಗಂದ ಮಾತ್ರಕ್ಕೆ ತಾವು ಪಕ್ಷವನ್ನು ತೊರೆಯುತ್ತಿಲ್ಲ ಎಂದು ಪಂಜಾಬ್‌ನ ಮಾಜಿ ಮುಖ್ಯಮಂತ್ರಿ ಅಮರಿಂದರ್ ಸಿಂಗ್ ಸ್ಪಷ್ಟಪಡಿಸಿದ್ದಾರೆ.



ಅಲ್ಲದೆ, ತಾವು ಕಠಿಣ ಸಮಯವನ್ನು ಎದುರಿಸುತ್ತಿರುವುದಾಗಿಯೂ ಅವರು ತಿಳಿಸಿದ್ದು, ಆದರೆ ಆ ಬಗ್ಗೆ ಹೆಚ್ಚಿನ ವಿವರಗಳನ್ನು ನೀಡಿಲ್ಲ. ತಮಗೆ 84 ವರ್ಷ ವಯಸ್ಸಾಗಿದ್ದರೂ ತಾವು ಇನ್ನೂ ವೃದ್ಧರಾಗಿಲ್ಲ ಎಂದ ಸಿಂಗ್, ತೀರಾ ತಡವಾದ ವಯಸ್ಸಿನಲ್ಲಿ ಪ್ರಧಾನಿಯಾದ ಮೊರಾರ್ಜಿ ದೇಸಾಯಿ ಅವರ ಉದಾಹರಣೆಯನ್ನು ಪ್ರಸ್ತಾಪಿಸಿದರು. ಮಾಜಿ ಕ್ರಿಕೆಟಿಗ ಬಿಷನ್ ಸಿಂಗ್ ಬೇಡಿ ಅವರ ಸ್ಮರಣಾರ್ಥ 'ಬಿಷನ್ ವಿತ್ ಲವ್' ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, 'ನನಗೆ 84 ವರ್ಷ, ಆದರೆ ಮೊರಾರ್ಜಿ ದೇಸಾಯಿ ಅವರಿಗೆ 92 ವರ್ಷವಾಗಿತ್ತು...' ಎಂದು ಹೇಳಿದರು. ಇದೇ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಫಾರೂಕ್ ಅಬ್ದುಲ್ಲಾ, ಅಮರಿಂದರ್ ಸಿಂಗ್ ಅವರು ಮತ್ತೊಮ್ಮೆ ಮುಖ್ಯಮಂತ್ರಿಯಾಗಬೇಕೆಂದು ತಾವು ಬಯಸುವುದಾಗಿ ಹೇಳಿ ಅವರಿಗೆ ಶುಭ ಹಾರೈಸಿದರು.

### ಪಂಜಾಬ್ LPU ಕ್ಯಾಂಪಸ್‌ನಲ್ಲಿ ಭೀಕರ ಹಿಂಸಾಚಾರ?

**ಫಗ್ವಾರಾ (ಪಂಜಾಬ್):** ಸಾಮಾಜಿಕ ಜಾಲತಾಣಗಳಲ್ಲಿ ಹರಡುವ ಸಣ್ಣದೊಂದು ವದಂತಿ ಕೆಲವೇ ನಿಮಿಷಗಳಲ್ಲಿ ಎಂತಹ ಭೀಕರ ಅನಾಹುತ ಸೃಷ್ಟಿಸಬಹುದು ಎಂಬುದಕ್ಕೆ ಪಂಜಾಬ್‌ನ ಪ್ರತಿಷ್ಠಿತ ವಿಶ್ವವಿದ್ಯಾಲಯದಲ್ಲಿ ನಡೆದ ಘಟನೆಯೇ ಸಾಕ್ಷಿ.! ಹೌದು, ಪಂಜಾಬಿನ ಫಗ್ವಾರಾದಲ್ಲಿರುವ ಲವ್ಲಿ ಪ್ರೊಫೆಷನಲ್ ಯೂನಿವರ್ಸಿಟಿ ಕ್ಯಾಂಪಸ್‌ನಲ್ಲಿ ಹೊರಗಿನ ವ್ಯಕ್ತಿಯೊಬ್ಬರು ವಿದ್ಯಾರ್ಥಿನಿಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂಬ ಸಾಮಾಜಿಕ ಜಾಲತಾಣದಲ್ಲಿನ ವದಂತಿಗಳಿಂದಾಗಿ ಹಿಂಸಾಚಾರ ನಡೆದಿದೆ.

**ಏನಿದು ಪ್ರಕರಣ?:** ಲವ್ಲಿ ಪ್ರೊಫೆಷನಲ್ ಯೂನಿವರ್ಸಿಟಿಯಲ್ಲಿ ವಿದ್ಯಾರ್ಥಿನಿಯೊಬ್ಬಳ ಮೇಲೆ ಸಾಮೂಹಿಕ ಅತ್ಯಾಚಾರ ನಡೆದಿದ್ದು, ಆಕೆ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂಬ ವದಂತಿಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಡಿದ್ದರಿಂದ, ಆರಂಭವಾದ ಪ್ರತಿಭಟನೆ ತಡರಾತ್ರಿ 2 ಗಂಟೆಯ ಸುಮಾರಿಗೆ ತೀವ್ರ ಹಿಂಸಾತ್ಮಕ ರೂಪಕ್ಕೆ ತಿರುಗಿತು. ಆಕ್ರೋಶಗೊಂಡ ಸುಮಾರು 2,000 ವಿದ್ಯಾರ್ಥಿಗಳು ಕ್ಯಾಂಪಸ್‌ನ ಕಿಟಕಿ ಗಾಜುಗಳನ್ನು, ಕುಂಡಗಳನ್ನು ಒಡೆದು ಹಾಕಿ ದಾಂಧಲೆ ನಡೆಸಿದರು. ಅಷ್ಟೇ ಅಲ್ಲದೆ, ವಿಶ್ವವಿದ್ಯಾಲಯದ ಕಟ್ಟಡದ ಕೆಲವು ಭಾಗಗಳು ಹಾಗೂ ವಾಹನಗಳಿಗೆ ಬೆಂಕಿ ಹಚ್ಚಿ ಭಾರಿ ಆಸ್ತಿ ಹಾನಿ ಮಾಡಿದರು. ಇದರೊಂದಿಗೆ, ಉದ್ರಿಕ್ತ ವಿದ್ಯಾರ್ಥಿಗಳು ಕ್ಯಾಂಪಸ್‌ನಿಂದ ಹೊರಬಂದು ಜಲಂಧರ್–ಫಗ್ವಾರಾ ರಾಷ್ಟ್ರೀಯ ಹೆದ್ದಾರಿಯನ್ನು ಸಂಪೂರ್ಣವಾಗಿ ಬ್ಲಾಕ್ ಮಾಡಿದರು. ಇದರಿಂದಾಗಿ ಹೆದ್ದಾರಿಯಲ್ಲಿ ಭಾರಿ ಸಂಚಾರ ದಟ್ಟಣೆ ಉಂಟಾಯಿತು. ಪ್ರತಿಭಟನಾಕಾರರ ಪ್ರಕಾರ, ಕ್ಯಾಂಪಸ್‌ನಲ್ಲಿ ನಿರ್ಮಾಣ ಕಾರ್ಮಿಕನೊಬ್ಬ ವಿದ್ಯಾರ್ಥಿನಿಯ ಮೇಲೆ ಅತ್ಯಾಚಾರ ಎಸಗಿದ್ದರಿಂದ ಆಕೆ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಮತ್ತು ಆಡಳಿತ ಮಂಡಳಿ ಇದನ್ನು ಮುಚ್ಚಿಡಲು ಯತ್ನಿಸುತ್ತಿದೆ ಎಂದು ಆರೋಪಿಸಿದ್ದರು. ಏತನ್ಮಧ್ಯೆ, ಪ್ರತಿಭಟನೆಯು ಹಿಂಸಾಚಾರಕ್ಕೆ ತಿರುಗುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ಕಪುರ್ತಲಾ ಎಸ್‌ಎಸ್‌ಪಿ ಗೌರವ್ ತೂರಾ ಮತ್ತು ಡಿಐಜಿ ನವೀನ್ ಸಿಂಗ್ಲಾ ನೇತೃತ್ವದ ಪೊಲೀಸ್ ಪಡೆ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿತು. ಇದರ ತರುವಾಯ ಪೊಲೀಸರು ಮತ್ತು ಎಲ್‌ಪಿಯು ಆಡಳಿತ ಮಂಡಳಿ ಜಂಟಿ ಹೇಳಿಕೆ ನೀಡಿ, ಅತ್ಯಾಚಾರ ಅಥವಾ ಆತ್ಮಹತ್ಯೆಗೆ ಸಂಬಂಧಿಸಿದಂತೆ ಯಾವುದೇ ದೂರು ದಾಖಲಾಗಿಲ್ಲ ಮತ್ತು ಯಾವುದೇ ಪುರಾವೆಗಳಿಲ್ಲ. ಇದೊಂದು ಸಂಪೂರ್ಣ ಸುಳ್ಳು ವದಂತಿ ಎಂದು ಸ್ಪಷ್ಟಪಡಿಸಿದ್ದಾರೆ.

## ಅಸ್ಸಾಂನಲ್ಲಿ ಸಿಜೆಪಿ ನಾಯಕರ ದಿಢೀರ್ ಬಂಧನ

**ಗುವಾಹಟಿ (ಅಸ್ಸಾಂ):** ಅಸ್ಸಾಂನ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಿಂದ ಬಾಧಿತರಾದ ಕುಟುಂಬಗಳನ್ನು ಭೇಟಿ ಮಾಡಲು ಹಾಗೂ ತಮ್ಮ ಸ್ಕೂಲ್ ಠೀಕ್ ಕರೋ (ಶಾಲೆಗಳನ್ನು ಸರಿಪಡಿಸಿ) ಅಭಿಯಾನದ ಭಾಗವಾಗಿ ಸರ್ಕಾರಿ ಶಾಲೆಗಳ ಪರಿಶೀಲನೆ ನಡೆಸಲು ಗುವಾಹಟಿಗೆ ಆಗಮಿಸಿದ್ದ ಕಾಕ್ರಾಚ್ ಜನತಾ ಪಾರ್ಟಿ ಸಹ–ಸಂಘಟಕ ಅಶುತೋಷ್ ರಂಕಾ ಸೇರಿದಂತೆ 30ಕ್ಕೂ ಹೆಚ್ಚು ಕಾರ್ಯಕರ್ತರನ್ನು ಅಸ್ಸಾಂ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಸಿಜೆಪಿ ಸಂಸ್ಥಾಪಕ ಅಭಿಜೀತ್ ದಿಪ್ಕೆ ಅವರು ಸಾಮಾಜಿಕ ಜಾಲತಾಣದಲ್ಲಿ ಈ ವಿಷಯವನ್ನು ಖಚಿತಪಡಿಸಿದ್ದು, ಗುವಾಹಟಿಯ ಖಾಸಗಿ ಆವರಣವೊಂದರಲ್ಲಿ ಸಭೆ ನಡೆಸಲು ಸಿದ್ಧತೆ ನಡೆಸುತ್ತಿದ್ದಾಗ ಪೊಲೀಸರು ಸ್ಥಳಕ್ಕೆ ಬ್ಯಾರಿಕೇಡ್‌ಗಳನ್ನು ಹಾಕಿ ಅಶುತೋಷ್ ರಾಂಕಾ ಮತ್ತು ಇತರೆ ಕಾರ್ಯಕರ್ತರನ್ನು ವಶಕ್ಕೆ ಪಡೆದು ಅಪರಿಚಿತ ಸ್ಥಳಕ್ಕೆ ಕರೆದೊಯ್ದಿದ್ದಾರೆ ಎಂದು ಆರೋಪಿಸಿದ್ದಾರೆ. ಏತನ್ಮಧ್ಯೆ, ಪೊಲೀಸರ ವಾಹನದಲ್ಲಿದ್ದಾಗಲೇ ವಿಡಿಯೋ ಹೇಳಿಕೆ ಬಿಡುಗಡೆ ಮಾಡಿರುವ ಅಶುತೋಷ್ ರಾಂಕಾ, "ಅಸ್ಸಾಂನ ಸರ್ಕಾರಿ ಶಾಲೆಗಳ ದುಸ್ಥಿತಿ, ಕಾಜಿರಂಗದಲ್ಲಿ ಕಾರ್ಪೊರೇಟ್‌ಗಳಿಗಾಗಿ ಜನರ ಹಕ್ಕುಗಳನ್ನು ಕಸಿದುಕೊಳ್ಳುತ್ತಿರುವುದು ಹಾಗೂ ಇಲ್ಲಿನ ಕೃತಕ ಪ್ರವಾಹದ ನೈಜತೆಯನ್ನು ನಾವು ಬಹಿರಂಗಪಡಿಸುತ್ತೇವೆ ಎಂಬ ಭಯದಿಂದ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ



ಅವರು ಪೊಲೀಸರನ್ನು ಬಳಸಿ ನಮ್ಮನ್ನು ತಡೆದಿದ್ದಾರೆ" ಎಂದು ನೇರವಾಗಿ ವಾಗ್ದಾಳಿ ನಡೆಸಿದ್ದಾರೆ.

**ಬಂಧನವ್ಯಾಕೆ?:** ಸಿಜೆಪಿ ನಾಯಕರು ಅಸ್ಸಾಂನ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಿಂದ ಬಾಧಿತರಾದ ಕುಟುಂಬಗಳನ್ನು ಭೇಟಿ ಮಾಡಲು ಹಾಗೂ ತಮ್ಮ 'ಸ್ಕೂಲ್ ಠೀಕ್ ಕರೋ' (ಶಾಲೆಗಳನ್ನು ಸರಿಪಡಿಸಿ) ಅಭಿಯಾನದ ಭಾಗವಾಗಿ ಸರ್ಕಾರಿ ಶಾಲೆಗಳ ಪರಿಶೀಲನೆ ನಡೆಸಲು ಗುವಾಹಟಿಗೆ ಆಗಮಿಸಿದ್ದರು. ಆದರೆ, ದಿಸ್ಪುರ್‌ನಲ್ಲಿರುವ ಅಸ್ಸಾಂ ಸಚಿವಾಲಯದ ಸಮೀಪವೇ ಸಿಜೆಪಿ ಸಭೆ ನಿಗದಿಯಾಗಿದ್ದರಿಂದ, ಪೊಲೀಸರು ಇಡೀ ಪ್ರದೇಶವನ್ನು ಹೈ ಅಲರ್ಟ್‌ನಲ್ಲಿ ಇರಿಸಿದ್ದರು. ಜೊತೆಗೆ, ಸಭೆ ನಡೆಯಬೇಕಿದ್ದ ಸ್ಥಳಕ್ಕೆ ಹೋಗುವ ಎಲ್ಲಾ ಪ್ರಮುಖ ರಸ್ತೆಗಳನ್ನು ದೊಡ್ಡ ಬ್ಯಾರಿಕೇಡ್‌ಗಳನ್ನು ಹಾಕಿ ಸಂಪೂರ್ಣವಾಗಿ ಬಂದ್ ಮಾಡಲಾಗಿತ್ತು.

## ಭಯೋತ್ಪಾದನೆಗೆ ಶೂನ್ಯ ಸಹಿಷ್ಣುತೆ ನೀತಿ

**ನವದೆಹಲಿ:** 2016ರ ಉರಿ ಸರ್ಜಿಕಲ್ ಸ್ಟ್ರೈಕ್ ಭಯೋತ್ಪಾದನೆಗೆ ಭಾರತದ ನಿರ್ಣಾಯಕ ಪ್ರತಿಕ್ರಿಯೆಯಾಗಿದ್ದು, ಜಗತ್ತಿನ ಮುಂದೆ ಭಾರತದ ಭಯೋತ್ಪಾದನಾ ವಿರೋಧಿ ನೀತಿಗೆ "ಹೊಸ ದಿಟ್ಟ ಉದಾಹರಣೆ"ಯನ್ನು ಸ್ಥಾಪಿಸಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಭಾನುವಾರ ಹೇಳಿದ್ದಾರೆ.

ತಮ್ಮ ಮಾಸಿಕ ರೇಡಿಯೋ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಮಾತನಾಡಿದ ಮೋದಿಯವರು, ಭಾರತ ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆಯ ನೀತಿಯನ್ನು ಅನುಸರಿಸುತ್ತಿದೆ. ಭಯೋತ್ಪಾದಕ ದಾಳಿಗಳಿಗೆ "ಬಲಿಷ್ಠ ಮತ್ತು ನಿರ್ಣಾಯಕ ಪ್ರತಿಕ್ರಿಯೆ" ನೀಡಲಾಗುವುದು ಎಂಬುದನ್ನು ಸ್ಪಷ್ಟಪಡಿಸಲಾಗಿದೆ ಎಂದು ಹೇಳಿದರು. ಇದೇ ವೇಳೆ 2016ರ ಸೆಪ್ಟೆಂಬರ್ 28–29ರಂದು ಉಗ್ರರ ನಡೆದ ಕಾರ್ಯಾಚರಣೆಯನ್ನು ಸ್ಮರಿಸಿದ ಅವರು, ಜಮ್ಮು–ಕಾಶ್ಮೀರದ ಉರಿ ಸೇನಾ ಶಿಬಿರದ ಮೇಲಿನ ದಾಳಿಯ ಬಳಿಕ ಭಾರತೀಯ ಸೇನೆ ನಿಯಂತ್ರಣ ರೇಖೆ ದಾಟಿ ಭಯೋತ್ಪಾದಕರ ನೆಲೆಗಳ ಮೇಲೆ ದಾಳಿ ನಡೆಸಿತ್ತು. ಸರ್ಜಿಕಲ್ ಸ್ಟ್ರೈಕ್ ಇಡೀ ಜಗತ್ತಿನ ಮುಂದೆ ಭಾರತದ ಭಯೋತ್ಪಾದನಾ ವಿರೋಧಿ ನೀತಿಗೆ ಹೊಸ ದಿಟ್ಟ ಉದಾಹರಣೆಯನ್ನು ನೀಡಿತು. ಈ ಕಾರ್ಯಾಚರಣೆಯ ಮೂಲಕ ಭಯೋತ್ಪಾದನೆಗೆ ನಿರ್ಣಾಯಕವಾಗಿ ಪ್ರತಿಕ್ರಿಯಿಸುವ ಭಾರತದ ಸಂಕಲ್ಪವನ್ನು ಪ್ರದರ್ಶಿಸಲಾಯಿತು ಎಂದು ಹೇಳಿದರು. ಭಯೋತ್ಪಾದಕ ದಾಳಿಗಳ ನೋವನ್ನು ಭಾರತ ದೀರ್ಘಕಾಲ ಸಹಿಸಿಕೊಂಡಿತ್ತು. ಆ "ನೋವಿಗೆ" ಸರ್ಜಿಕಲ್ ಸ್ಟ್ರೈಕ್ ನಿರ್ಣಾಯಕ ಪ್ರತಿಕ್ರಿಯೆಯಾಗಿತ್ತು ಎಂದು ಬಣ್ಣಿಸಿದರು. ಭಯೋತ್ಪಾದನೆ ವಿರುದ್ಧ ಭಾರತ ಶೂನ್ಯ ಸಹಿಷ್ಣುತೆಯ ನೀತಿಯನ್ನು ಅನುಸರಿಸುತ್ತಿದೆ ಎಂದು ಪ್ರಧಾನಿ ಪ್ರತಿಪಾದಿಸಿದರು.

> ಭಾರತದ ದಿಟ್ಟ ನಿಲುವಿಗೆ ಹೊಸ ಉದಾಹರಣೆ: ಪ್ರಧಾನಿ

## ಸಂಧಾನ ಪ್ರಸ್ತಾಪ ಕಸದ ಬುಟ್ಟಿಗೆ ಎಸೆದು, Iran ಸ್ಥಿತಿ ಲೇವಡಿ ಮಾಡಿದ ಡೊನಾಲ್ಡ್ ಟ್ರಂಪ್..!

# ಅವರ ಹತ್ತಿರ ದುಡ್ಡೇ ಇಲ್ಲ, ಆರ್ಥಿಕವಾಗಿ ತುಂಬಾ ಸಂಕಷ್ಟದಲ್ಲಿದ್ದಾರೆ

**ವಾಷಿಂಗ್ಟನ್:** ಜಾಗತಿಕ ರಾಜಕೀಯ ವಲಯದಲ್ಲಿ ಭಾರೀ ಸಂಚಲನ ಮೂಡಿಸಿರುವ ವಿದ್ಯಮಾನವೊಂದರಲ್ಲಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ನೀಡಿದ್ದ ಮಹತ್ವದ ಸಂಧಾನದ ಪ್ರಸ್ತಾಪವನ್ನು ಸರಾಸಗಟಾಗಿ ತಿರಸ್ಕರಿಸಿದ್ದಾರೆ.

1. ಇರಾನ್ ಅವರು ತಕ್ಷಣವೇ ಹಾರ್ಮುಜ್ ಜಲಸಂಧಿಯನ್ನು ತೆರೆಯಲು ಬಯಸುತ್ತಿದ್ದಾರೆ.
2. ಅವರಿಗೆ ಹಣ ಬರುತ್ತಿದ್ದದ್ದು ಹಾರ್ಮುಜ್ ಜಲಸಂಧಿಯಿಂದ.
3. ಹೀಗಾಗಿ ಅವರೇ ತಮ್ಮನ್ನು ತಾವು ಸಂಕಷ್ಟಕ್ಕೆ ಸಿಲುಕಿಸಿಕೊಂಡಿದ್ದಾರೆ.

ವ್ಯೂಹಾತ್ಮಕವಾಗಿ ಅತ್ಯಂತ ಪ್ರಮುಖವಾಗಿರುವ ಸ್ಟ್ರೈಟ್ ಆಫ್ ಹಾರ್ಮುಜ್‌ಜಲಸಂಧಿಯನ್ನು ಮರುಪ್ರಾರಂಭಿಸುವ ಇರಾನ್ ಯೋಜನೆಯನ್ನು ಅಮೆರಿಕ ಒಪ್ಪಿಲ್ಲ.

ಶ್ವೇತಭವನದ ಹೊರಗೆ ಮಾಧ್ಯಮಗಳೊಂದಿಗೆ ಮಾತನಾಡಿದ ಟ್ರಂಪ್, ಇರಾನ್ ತೀವ್ರ ಆರ್ಥಿಕ ಸಂಕಷ್ಟದಲ್ಲಿದೆ ಎಂದು ಲೇವಡಿ ಮಾಡಿದ್ದಾರೆ. ಅವರು ತಕ್ಷಣವೇ ಹಾರ್ಮುಜ್ ಜಲಸಂಧಿಯನ್ನು ತೆರೆಯಲು ಬಯಸುತ್ತಿದ್ದಾರೆ. ಏಕೆ ಗೊತ್ತೇ? ಏಕೆಂದರೆ ಅವರು ಸಂಕಷ್ಟದಲ್ಲಿದ್ದಾರೆ. ಏಕೆಂದರೆ ಅವರಿಗೆ ಹಣವೇ ಬರುತ್ತಿಲ್ಲ. ಅವರಿಗೆ



ಹಣ ಬರುತ್ತಿದ್ದದ್ದು ಹಾರ್ಮುಜ್ ಜಲಸಂಧಿಯಿಂದ. ಹೀಗಾಗಿ ಅವರೇ ತಮ್ಮನ್ನು ತಾವು ಸಂಕಷ್ಟಕ್ಕೆ ಸಿಲುಕಿಸಿಕೊಂಡಿದ್ದಾರೆ ಎಂದು ಹೇಳಿದ್ದಾರೆ.

ಇದೇ ವೇಳೆ ಹಾರ್ಮುಜ್ ಜಲಸಂಧಿಯನ್ನು ಬಂದ್ ಮಾಡಿದ್ದರಿಂದ ಇಡೀ ಜಗತ್ತಿಗೇ ಸಮಸ್ಯೆ ಎದುರಾಗಿದೆ ಎಂದು ಹೇಳಿದ ಟ್ರಂಪ್, ಇರಾನ್ ಬಂದರುಗಳ ಮೇಲೆ "ಇತಿಹಾಸದಲ್ಲೇ ಅತ್ಯಂತ ದೊಡ್ಡ ದಿಗ್ಬಂಧನ" ಹೇರಿಸುವ ಮೂಲಕ ಅಮೆರಿಕ ಸೇನೆ ಇರಾನ್ ಆರ್ಥಿಕತೆಯನ್ನು ಗುರಿಯಾಗಿಸಿಕೊಂಡಿದೆ ಎಂದು ತಿಳಿಸಿದ್ದಾರೆ.

ಅವರು ಅದನ್ನು ಬಂದ್ ಮಾಡಿ ಜಗತ್ತಿಗೆ ಸಮಸ್ಯೆ ಸೃಷ್ಟಿಸೋಣ ಎಂದುಕೊಂಡರು. ಬಳಿಕ ನಾನು ಬಂದೆ. ನಾವು ಸೇನಾ ಇತಿಹಾಸದಲ್ಲೇ ಅತ್ಯಂತ ದೊಡ್ಡ ದಿಗ್ಬಂಧನವನ್ನು ಹೇರಿದೆವು. ಅದು ಉಕ್ಕಿನ ಗೋಡೆಯಂತಿದೆ.

> ಟ್ರಂಪ್ ಈ ಪ್ರಸ್ತಾವನೆಯನ್ನು ತಿರಸ್ಕರಿಸಿದರೂ, ಅವರ ನಿರಾಕರಣೆಯನ್ನು ಅಧಿಕೃತವಾಗಿ ಇರಾನ್‌ಗೆ ತಿಳಿಸಲಾಗಿಲ್ಲ.
> – ಸೆಯ್ಯದ್ ಅಬ್ಬಾಸ್ ಅರಾಘ್ಚಿ, ಇರಾನ್ ವಿದೇಶಾಂಗ ಸಚಿವ

ನಾವು ಅದನ್ನು ನಿರ್ಮಿಸಿದ್ದೇವೆ. ಈಗ ಏನಾಗಿದೆ ಗೊತ್ತೇ? ಅವರಿಗೆ ಹಣವೇ ಇಲ್ಲ. ಅವರು ಜಲಸಂಧಿಯನ್ನು ಮುಚ್ಚಲು ಬಯಸಿದ್ದರು. ನಾನು, 'ಸರಿ, ನಾವು ಅದನ್ನು ನಿಮ್ಮ ಮೇಲೆಯೇ ಬಂದ್ ಮಾಡುತ್ತೇವೆ. ಆದರೆ ಉಳಿದವರಿಗೆ ಅದನ್ನು ಬಳಸಲು ಅವಕಾಶ ಇರುತ್ತದೆ' ಎಂದು ಹೇಳಿದೆ ಎಂದು ಹೇಳಿದರು.

ಕತಾರ್ ಮಧ್ಯಸ್ಥಿಕೆಯ ಮೂಲಕ ಇರಾನ್ ಮುಂದಿಟ್ಟಿದ್ದ ಪ್ರಸ್ತಾವನೆಯನ್ನು ತಾನು ತಿರಸ್ಕರಿಸಿರುವುದಾಗಿ ಟ್ರಂಪ್ ಬಹಿರಂಗಪಡಿಸಿದ ಒಂದು ದಿನದ ಬಳಿಕ ಅವರ ಈ ಹೇಳಿಕೆ ಬಂದಿದೆ.

ವಿಶ್ವಸಂಸ್ಥೆಯ ಸಾಮಾನ್ಯ ಸಭೆ ಹಿನ್ನೆಲೆಯಲ್ಲಿ ಈ ವಾರದ ಆರಂಭದಲ್ಲಿ ನ್ಯೂಯಾರ್ಕ್‌ನಲ್ಲಿ ಇರಾನ್ ತನ್ನ ಶಾಂತಿ ಪ್ರಸ್ತಾವನೆಯನ್ನು ಮುಂದಿಟ್ಟಿತ್ತು.

ಇದರ ಬೆನ್ನಲ್ಲೇ ಭಾನುವಾರ ಇರಾನ್, ಅಮೆರಿಕ ಮತ್ತು ಇಸ್ರೇಲ್ ನಡುವಿನ ಸಂಘರ್ಷವನ್ನು ರಾಜತಾಂತ್ರಿಕ ಮಾತುಕತೆಯ ಮೂಲಕವೇ ಪರಿಹರಿಸಲು ಸಾಧ್ಯ ಎಂದು ಹೇಳಿದೆ. ಪ್ರಮುಖ ಹಾರ್ಮುಜ್ ಜಲಸಂಧಿಯನ್ನು ತೆರೆಯುವುದು ಮತ್ತು ಪ್ರದೇಶದಲ್ಲಿನ ಹೋರಾಟವನ್ನು ನಿಲ್ಲಿಸುವ ಕುರಿತು ತಾನು ಮುಂದಿಟ್ಟಿರುವ ಶಾಂತಿ ಪ್ರಸ್ತಾವನೆಗೆ ಅಧಿಕೃತ ಪ್ರತಿಕ್ರಿಯೆಗಾಗಿ ಇನ್ನೂ ಕಾಯುತ್ತಿರುವುದಾಗಿ ಇರಾನ್ ತಿಳಿಸಿದೆ.

### ಲಾಟರಿ: 500 ಟಿಕೆಟ್‌ಗೆ 30 ಕೋಟಿ ಜಾಕ್‌ಪಾಟ್

**ತಿರುವನಂತಪುರಂ (ಕೇರಳಂ):** ರಾಜ್ಯದ ಪ್ರಸಿದ್ಧ ತಿರುವೋಣಂ ಬಂಪರ್ ಲಾಟರಿ ಫಲಿತಾಂಶ ಪ್ರಕಟವಾಗಿದ್ದು, ವ್ಯಕ್ತಿಯೊಬ್ಬರು 30 ಕೋಟಿ ರೂಪಾಯಿ ಬಂಪರ್ ಲಾಟರಿ ಪಡೆದಿದ್ದಾರೆ. ಇಂದು ಮಧ್ಯಾಹ್ನ ಇಲ್ಲಿನ ಗೋರ್ಕಿ ಭವನದಲ್ಲಿ ನಡೆದ ಡ್ರಾದಲ್ಲಿ TL 360615 ಸಂಖ್ಯೆಯ ಟಿಕೆಟ್‌ಗೆ ಮೊದಲ ಬಹುಮಾನ ಬಂದಿದೆ. ಈ ಅದೃಷ್ಟಶಾಲಿ ಟಿಕೆಟ್ ಕಣ್ಣೂರಿನ 'ಮುತ್ತು ಲಾಟರಿ ಏಜೆನ್ಸಿ'ಯಲ್ಲಿ ಮಾರಾಟವಾಗಿದೆ. ಟಿಕೆಟ್ ಹೊಂದಿರುವವರಿಗೆ ಓಣಂ ಹಬ್ಬದ ಭರ್ಜರಿ ಉಡುಗೊರೆ ಸಿಕ್ಕಂತಾಗಿದೆ. ತಿರುವೋಣಂ ಬಂಪರ್ ಬಿಆರ್–111 ಲಾಟರಿಯ ಮೊದಲ ಬಹುಮಾನದ ಮೊತ್ತ 30 ಕೋಟಿಯಾಗಿದ್ದು, ಅದರ ಟಿಕೆಟ್ ಬೆಲೆ 500 ಆಗಿತ್ತು. ಲಾಟರಿ ಇಲಾಖೆಯು ಈ ವರ್ಷದ ಬಂಪರ್‌ಗಾಗಿ 90 ಲಕ್ಷ ಟಿಕೆಟ್‌ಗಳನ್ನು ಮುದ್ರಿಸಿತ್ತು. ಇಲಾಖೆ ನೀಡಿದ ಮಾಹಿತಿಯ ಪ್ರಕಾರ, ಎಲ್ಲಾ ಟಿಕೆಟ್‌ಗಳೂ ಮಾರಾಟವಾಗಿದ್ದವು. ಇನ್ನು ಎರಡನೇ ಬಹುಮಾನವಾಗಿ 20 ಟಿಕೆಟ್‌ಗಳಿಗೆ ತಲಾ 1 ಕೋಟಿ ನೀಡಲಾಗಿದೆ. ಮೊದಲ ಬಂಪರ್ ಮತ್ತು ಎರಡನೇ ಬಹುಮಾನ ಪಡೆದ ಟಿಕೆಟ್‌ಗಳ ಫಲಿತಾಂಶ ಪ್ರಕ್ರಿಯೆ ಪೂರ್ಣಗೊಂಡ ಕಾರಣ, ಲಾಟರಿ ಇಲಾಖೆಯು ಮೂರನೇ ಬಹುಮಾನ ಮತ್ತು ಸಮಾಧಾನಕರ ಬಹುಮಾನಗಳನ್ನು ಒಳಗೊಂಡಂತೆ ಸಂಪೂರ್ಣ ಬಹುಮಾನಗಳ ಪಟ್ಟಿಯನ್ನು ಪ್ರಕಟಿಸುವ ನಿರೀಕ್ಷೆಯಿದೆ.

**ವಿಜೇತರಿಗೆ ಸಿಗುವ ಮೊತ್ತವೆಷ್ಟು?:** ಮೊದಲ ಬಹುಮಾನವಾಗಿ ಘೋಷಿಸಲಾದ 30 ಕೋಟಿ ರೂಪಾಯಿ ಬಹುಮಾನದ ಒಟ್ಟು ಮೊತ್ತವಾಗಿದೆ. ವಿಜೇತರಿಗೆ ಅಷ್ಟೂ ಹಣ ಕೈಗೆ ಸಿಗುವುದಿಲ್ಲ. ಲಾಟರಿ ಮೂಲಕ ಗಳಿಸಿದ ಮೊತ್ತವು ಆದಾಯ ತೆರಿಗೆ ಕಾಯ್ದೆಯ ಅನ್ವಯ ತೆರಿಗೆಗೆ ಒಳಪಡುತ್ತದೆ. ಆದಾಯ ತೆರಿಗೆ ಇಲಾಖೆಯು ಲಾಟರಿ ಗೆಲುವಿನ ಮೊತ್ತವನ್ನು 'ಇತರ ಮೂಲಗಳಿಂದ ಬರುವ ಆದಾಯ' ಎಂಬ ವರ್ಗದ ಅಡಿಯಲ್ಲಿ ತೆರಿಗೆಗೆ ಒಳಪಡುವ ಆದಾಯ ಎಂದು ಪರಿಗಣಿಸುತ್ತದೆ.

# ಒಂದು ಗಂಟೆ ಕಾಲ ನನಗೆ ನಿದ್ದೆ ಬರಲಿಲ್ಲ

**ವಿಶ್ವನಾಥ್ ಅಂಡ್ ಸನ್ಸ್ ಚಿತ್ರ ವೀಕ್ಷಿಸಿದ ನಂತರ ನಟ ಶಿವರಾಜ್‌ಕುಮಾರ್ ಭಾವುಕ!**




ಸೂರ್ಯ ಮತ್ತು ಮಮಿತಾ ಬೈಜು ಅಭಿನಯದ 'ವಿಶ್ವನಾಥ್ ಅಂಡ್ ಸನ್ಸ್' ಚಿತ್ರವು ಈಗಾಗಲೇ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗಿದೆ. ವೆಂಕಿ ಅಟ್ಲೂರಿ ನಿರ್ದೇಶನದ ಈ ಚಿತ್ರದಲ್ಲಿ ಸೂರ್ಯ ಅವರು ಸಂಜಯ್ ವಿಶ್ವನಾಥ್ ಎಂಬ ವ್ಯಕ್ತಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. 'ಮಧಿ' ಪಾತ್ರದಲ್ಲಿ ಮಮಿತಾ ಬೈಜು ನಟಿಸಿದ್ದಾರೆ. ಈ ಚಿತ್ರವು ಆಗಸ್ಟ್ 14, 2026 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾಯಿತು. ಚಿತ್ರವನ್ನು ವಿಮರ್ಶಕರು ಮೆಚ್ಚಿಕೊಂಡಿದ್ದಾರೆ.

ಕನ್ನಡದ ನಟ ಶಿವರಾಜ್‌ಕುಮಾರ್ ಅವರು 'ವಿಶ್ವನಾಥ್ ಅಂಡ್ ಸನ್ಸ್' ಚಿತ್ರದ ಕುರಿತು ಪ್ರತಿಕ್ರಿಯೆ ನೀಡಿದ್ದು, ಈ ಚಿತ್ರವು ತಮ್ಮ ಪೋಷಕರು ಮತ್ತು ಕುಟುಂಬದ ನೆನಪುಗಳನ್ನು ಮರುಕಳಿಸುವಂತೆ ಮಾಡಿದೆ ಎಂದು ತಿಳಿಸಿದ್ದಾರೆ. ಸಿನಿಮಾ ಮುಗಿದ ನಂತರವೂ ಅದರ ಭಾವನಾತ್ಮಕ ಪ್ರಭಾವ ತಮ್ಮ ಮನಸ್ಸಿನಲ್ಲಿ ಉಳಿದುಕೊಂಡಿದೆ ಎಂದು ಅವರು ಹೇಳಿದ್ದಾರೆ.



'ನಾನು ಇತ್ತೀಚೆಗೆ 'ವಿಶ್ವನಾಥ್ ಅಂಡ್ ಸನ್ಸ್' ಚಿತ್ರವನ್ನು ನೋಡಿದೆ. ಆ ಚಿತ್ರ ನೋಡಿದ ನಂತರ ನನಗೆ ಒಂದು ಗಂಟೆ ಕಾಲ ನಿದ್ದೆ ಬರಲಿಲ್ಲ. ಅದು ನನ್ನ ಹೆತ್ತವರು ಮತ್ತು ಕುಟುಂಬದ ನೆನಪನ್ನು ಮರುಕಳಿಸುವಂತೆ ಮಾಡಿತು. ಅದರ ಬಗ್ಗೆ ಯೋಚಿಸುತ್ತಾ ಮಲಗಿದ್ದಾಗ ನನ್ನ ಕಣ್ಣಲ್ಲಿ ನೀರು ಜಾರಿತು' ಎಂದು ಶಿವ ರಾಜ್‌ಕುಮಾರ್ ಹೇಳಿದರು.

ಭವಿಷ್ಯದಲ್ಲಿ ಅಂತಹದೇ ಭಾವನಾತ್ಮಕ ಕಥಾಹಂದರವಿರುವ ಚಿತ್ರವೊಂದರಲ್ಲಿ ನಟಿಸುವ ಬಯಕೆಯನ್ನೂ ವ್ಯಕ್ತಪಡಿಸಿದ ಅವರು, 'ಕೆಲವು ಭಾವನೆಗಳು... ಎಂದಾದರೂ ಅಂತಹ ಚಿತ್ರವೊಂದನ್ನು ಮಾಡುವ ಆಸೆ ನನಗೂ ಇದೆ' ಎಂದು ಅವರು ಹೇಳಿದರು.

'ವಿಶ್ವನಾಥ್ ಅಂಡ್ ಸನ್ಸ್' ಚಿತ್ರದಲ್ಲಿ ಸೂರ್ಯ ನಿರ್ವಹಿಸುವ ಸಂಜಯ್ ವಿಶ್ವನಾಥ್ ಎಂಬ ಶ್ರೀಮಂತ ವ್ಯಕ್ತಿ, ಅವಿವಾಹಿತನಾಗಿ ಉಳಿದು ತನ್ನ ವೃತ್ತಿಜೀವನ ಮತ್ತು ವೈಯಕ್ತಿಕ ಗುರಿಗಳತ್ತ ಗಮನ ಹರಿಸುತ್ತಾನೆ. ಆತನ ಕುಟುಂಬ, ವಿಶೇಷವಾಗಿ ಅವನ ತಾಯಿ, ಅವನು ಮದುವೆಯಾಗಿ ಮಗುವನ್ನು ಹೊಂದಬೇಕೆಂದು ಬಯಸುತ್ತಾರೆ. ಆದರೆ, ಸಂಜಯ್ ಬಾಡಿಗೆ ತಾಯ್ತನದ ಮೂಲಕ ಮಗು ಪಡೆಯುತ್ತಾನೆ. ಆ ಬಾಡಿಗೆ ತಾಯಿಯಾಗಿ ಮಮಿತಾ ಬೈಜು ಬಂದಾಗ ಕಥೆಯು ಅನಿರೀಕ್ಷಿತ ತಿರುವು ಪಡೆಯುತ್ತದೆ. ಕುಟುಂಬದ ನಿರೀಕ್ಷೆಗಳು ಮತ್ತು ಇಬ್ಬರ ನಡುವಿನ ವಯಸ್ಸಿನ ಅಂತರವು ಅವರ ಸಂಬಂಧಕ್ಕೆ ಅಡ್ಡಿಯಾಗಿರುತ್ತದೆ. ಇದು ಚಿತ್ರವನ್ನು ಮತ್ತೊಂದು ದಿಕ್ಕಿನಲ್ಲಿ ಕೊಂಡೊಯ್ಯುತ್ತದೆ.

ಈ ಚಿತ್ರವನ್ನು ವೆಂಕಿ ಅಟ್ಲೂರಿ ಬರೆದು ನಿರ್ದೇಶಿಸಿದ್ದಾರೆ ಮತ್ತು ಇದರಲ್ಲಿ ಸೂರ್ಯ ಹಾಗೂ ಮಮಿತಾ ಬೈಜು ಅವರೊಂದಿಗೆ ರಾಧಿಕಾ ಶರತ್‌ಕುಮಾರ್ ಮತ್ತು ರವೀನಾ ಟಂಡನ್ ನಟಿಸಿದ್ದಾರೆ. ಜಿವಿ ಪ್ರಕಾಶ್ ಕುಮಾರ್ ಸಂಗೀತ ಸಂಯೋಜನೆ ಮಾಡಿದ್ದಾರೆ. ಈ ಚಿತ್ರವು ಆಗಸ್ಟ್ 14 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾಯಿತು.

ಈಮಧ್ಯೆ, ಶಿವರಾಜ್‌ಕುಮಾರ್ ಅವರು ಕನ್ನಡ ಮತ್ತು ತಮಿಳು ಚಿತ್ರರಂಗದಲ್ಲಿ ಸಾಕಷ್ಟು ಚಿತ್ರಗಳಲ್ಲಿ ಬ್ಯುಸಿಯಾಗಿದ್ದಾರೆ. ಅವರ ಮುಂಬರುವ ಯೋಜನೆಗಳಲ್ಲಿ 'ಬೇಲ್', 'ಡ್ಯಾಡ್' ಮತ್ತು '666 ಆಪರೇಷನ್ ಡ್ರೀಮ್ ಥಿಯೇಟರ್' ಸೇರಿವೆ. ಜೊತೆಗೆ, ನೆಲ್ಸನ್ ದಿಲೀಪ್‌ಕುಮಾರ್ ಅವರ 'ಜೈಲರ್ 2' ಚಿತ್ರದಲ್ಲಿ ರಜನಿಕಾಂತ್ ಅವರೊಂದಿಗೆ ನರಸಿಂಹನ ಪಾತ್ರವನ್ನು ಅವರು ಪುನರಾವರ್ತಿಸಲಿದ್ದಾರೆ. 'ಬೇಲ್' ಚಿತ್ರವು ಅಕ್ಟೋಬರ್ 2 ರಂದು ಬಿಡುಗಡೆಯಾಗಲು ನಿಗದಿಯಾಗಿದ್ದರೆ, 'ಜೈಲರ್ 2' ಅವರ ತಮಿಳು ಚಿತ್ರಗಳ ಪಟ್ಟಿಯಲ್ಲಿದೆ.

# ರಿಷಬ್ ಶೆಟ್ಟಿಯಿಂದ ಹೊಸ ಸಿನಿಮಾಕ್ಕೆ ಸಿದ್ಧತೆ



ಕನ್ನಡ ಚಿತ್ರರಂಗದ ದೂರದೃಷ್ಟಿಯುಳ್ಳ ನಟ, ನಿರ್ದೇಶಕ ಹಾಗೂ ನಿರ್ಮಾಪಕ ರಿಷಬ್ ಶೆಟ್ಟಿ ಅವರು 'ಕಾಂತಾರ' ನಂತರ ಹೊಸ ಸಿನಿಮಾಗೆ ತಯಾರಿ ಆರಂಭಿಸಿದ್ದಾರೆ.

ತಮ್ಮ ಹೊಸ ಸಿನಿಮಾಗಾಗಿ ಉದಯೋನ್ಮುಖ ಪ್ರತಿಭಾವಂತ ನಟ, ನಟಿಯರ ಹುಡುಕಾಟದಲ್ಲಿರುವ ಡಿವೈನ್ ಸ್ಟಾರ್ ರಿಷಬ್ ಶೆಟ್ಟಿ ಅವರು, ಹೊಸ ಪ್ರತಿಭೆಗಳನ್ನು ಆಯ್ಕೆ ಮಾಡಲು ಆಡಿಷನ್ ಕರೆದಿದ್ದಾರೆ.

ನಮ್ಮನ್ ನೋಡ್ಲಿಕ್ಕೆ ನೀವ್ ಬಂದಿದಿರಿ ನಿಮ್ಮನ್ ನೋಡ್ಲಿಕ್ಕೆ ನಾವ್ ಬರ್ತಿದ್ದೇವೆ. ರಿಷಬ್ ಶೆಟ್ಟಿ ಫಿಲಂಸ್ ಕಡೆಯಿಂದ ಪ್ರತಿಭಾವಂತರಿಗೆ ಸುವರ್ಣ ಅವಕಾಶ ಎಂದು ರಿಷಬ್ ಶೆಟ್ಟಿ ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. "ಸಿನಿಮಾ ರಂಗದ ನಿಮ್ಮ ಪಯಣ ಇಲ್ಲಿಂದಲೇ ಆರಂಭವಾಗಬಹುದು. ಒಂದು ಹೊಸ ಕಥೆ ರೂಪುಗೊಳ್ಳುತ್ತಿದ್ದು, 'ರಿಷಬ್ ಶೆಟ್ಟಿ ಫಿಲ್ಮ್'ನ ಈ ರೋಚಕ ಹೊಸ ಯೋಜನೆಗೆ ನಾವು ಹೊಸ ಪ್ರತಿಭೆಗಳನ್ನು ಹುಡುಕುತ್ತಿದ್ದೇವೆ. ನಿಮ್ಮಲ್ಲಿ ಅದಕ್ಕೆ ಬೇಕಾದ ಸಾಮರ್ಥ್ಯವಿದೆ ಎಂದು ನಿಮಗೆ ಅನ್ನಿಸಿದರೆ, ಸಿನಿಮಾ ಜಗತ್ತಿಗೆ ಕಾಲಿಡಲು ಇದೊಂದು ಉತ್ತಮ ಅವಕಾಶವಾಗಬಹುದು. ಬನ್ನಿ, ಈ ಪಯಣದ ಭಾಗವಾಗಿ," ಎಂದು ರಿಷಬ್ ಹೇಳಿದ್ದಾರೆ.

ಅಕ್ಟೋಬರ್ 2 ರಂದು ವಿಜಯ ಕಾಲೇಜಿನಲ್ಲಿ(ಜಯನಗರ 4ನೇ ಬ್ಲಾಕ್) ಬೆಳಿಗ್ಗೆ 9:00 ರಿಂದ ಸಂಜೆ 6:00 ರವರೆಗೆ ಆಡಿಷನ್‌ಗಳು ನಡೆಯಲಿದೆ. ಹೊಸಬರು ಅರ್ಜಿ ಸಲ್ಲಿಸಲು ಸ್ವಾಗತವಿದ್ದು, ಕನ್ನಡದಲ್ಲಿ ನಿರರ್ಗಳವಾಗಿ ಮಾತನಾಡಬಲ್ಲ ಹಾಗೂ ಉತ್ತರ ಕರ್ನಾಟಕದ ಆಡುಭಾಷೆಯನ್ನು (ಶೈಲಿಯನ್ನು) ಸುಲಲಿತವಾಗಿ ಬಳಸಬಲ್ಲ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುತ್ತದೆ ಎಂದು ರಿಷಬ್ ಶೆಟ್ಟಿ ತಿಳಿಸಿದ್ದಾರೆ.

# 50 ದಿನ ಯಶಸ್ವಿಯಾಗಿ ಪೂರೈಸಿದ ಅಯೋಗ್ಯ–2

ಮೈಸೂರು ನಗರದ ಲೀಡೋ ಚಿತ್ರಮಂದಿರದಲ್ಲಿ ಅಯೋಗ್ಯ–2 ಚಿತ್ರ 50 ದಿನ ಪೂರೈಸಿದ ಹಿನ್ನೆಲೆಯಲ್ಲಿ ನಟ ನೀನಾಸಂ ಸತೀಶ್ ಹಾಗೂ ನಿರ್ದೇಶಕ ಎಸ್. ಮಹೇಶ್ ಕುಮಾರ್ ನೇತೃತ್ವದಲ್ಲಿ ಸಂಭ್ರಮಾಚರಣೆ ಮಾಡಿದ್ದಾರೆ.

ಲೀಡೋ ಚಿತ್ರಮಂದಿರಕ್ಕೆ ಭೇಟಿ ನೀಡಿದ್ದ ಚಿತ್ರತಂಡವನ್ನು ಅಭಿಮಾನಿಗಳು ಪಟಾಕಿ ಸಿಡಿಸಿ, ಹಾರ ಹಾಕಿ ಬರ ಮಾಡಿಕೊಂಡರು. ಈ ವೇಳೆ ಬೃಹತ್ ಕೇಕ್ ಕತ್ತರಿಸುವ ಮೂಲಕ 50ರ ಸಂಭ್ರಮವನ್ನು ಅಭಿಮಾನಿಗಳೊಂದಿಗೆ ಆಚರಿಸಲಾಯಿತು.

ಈ ವೇಳೆ ಮಾತನಾಡಿದ ನಾಯಕ ನಟ ನೀನಾಸಂ ಸತೀಶ್, "ರಾಜ್ಯದಲ್ಲಿ ಕಲಾವಿದರನ್ನು ಎಲ್ಲಿ ಕೈ ಬಿಟ್ಟರೂ ಮೈಸೂರಿನ ಜನತೆ ಎಂದೆಂದಿಗೂ ಕೈ ಬಿಡುವುದಿಲ್ಲ. ಇಂದಿನ ಪೈಪೋಟಿ ದಿನಗಳಲ್ಲಿ ಒಂದೆರಡು ವಾರ ಥಿಯೇಟರ್‌ಗಳಲ್ಲಿ ಸಿನಿಮಾ ಉಳಿಯುವುದೇ ದೊಡ್ಡ ಸಾಹಸವಾಗಿದೆ. ಇಂತಹ ಸನ್ನಿವೇಶದಲ್ಲಿ 50 ದಿನಗಳ ನಮ್ಮ ಚಿತ್ರ ಉಳಿಯಲು ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಪ್ರಚಾರ ನಡೆಸಿ ಜನರನ್ನು ಬರುವಂತೆ ಮಾಡಿದ ಪ್ರತಿಯೊಬ್ಬರಿಗೂ ಹೃದಯ ಪೂರ್ವಕವಾಗಿ ಅಭಿನಂದನೆ ಸಲ್ಲಿಸುತ್ತೇನೆ. ಮುಂದೆ ಅಯೋಗ್ಯ 3 ಚಿತ್ರವನ್ನು ಅತಿ ಶೀಘ್ರದಲ್ಲೇ ಪ್ರಾರಂಭಿಸಿ ಇದೇ ತಂಡವನ್ನು ಸಹ ಅದರಲ್ಲಿ ಭಾಗವಹಿಸಿ ಹೊಸದೊಂದು ಮನರಂಜನೆಯನ್ನು ಜನರಿಗೆ ನೀಡಲಾಗುವುದು ಎಂದು ಹೇಳಿದ್ದಾರೆ. ನಿರ್ದೇಶಕ ಎಸ್. ಮಹೇಶ್ ಕುಮಾರ್ ಮಾತನಾಡಿ, "27ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ನಮ್ಮ ಸಿನಿಮಾ 50ದಿನಗಳನ್ನು ಪೂರೈಸಿದೆ. ಈ ಅವಧಿಯಲ್ಲಿ ಅನೇಕ ದೊಡ್ಡ ಚಿತ್ರಗಳು ಬಿಡುಗಡೆಯಾದರೂ ಕನ್ನಡದ ಜನತೆ ಸಿನಿಮಾ ಕೈ ಹಿಡಿದಿದ್ದಾರೆ. ನಿರ್ಮಾಪಕ ಮುನ್ನೇಗೌಡ ನನ್ನ ನಂಬಿ ಸಿನಿಮಾ ಅವಕಾಶ ನೀಡಿದ್ದಕ್ಕೆ ಧನ್ಯವಾದ ಅರ್ಪಿಸುತ್ತೇನೆ. ಅಯೋಗ್ಯ 2 ಮಾಡುವುದಕ್ಕೆ ಸಾಕಷ್ಟು ವರ್ಷ ಕಾದಿದ್ದೇವೆ. ಆದರೆ, ಅಯೋಗ್ಯ 3ಗೆ ಅಷ್ಟು ವಿಳಂಬ ಮಾಡುವುದಿಲ್ಲ. ಸದರಿ ಚಿತ್ರದಲ್ಲಿ ಹಿರಿಯರಾದ ರವಿಚಂದ್ರನ್, ನಟಿ ರಚಿತ ರಾಮ್, ಸಾಧುಕೋಕಿಲ ಸೇರಿ ಇಡೀ ತಂಡ ಬೆಂಬಲವಾಗಿ ನಿಂತಿದ್ದಕ್ಕೆ ಈ ಯಶಸ್ಸು ಸಿಕ್ಕಿದೆ. ಕಥೆಯೊಂದು ಚೆನ್ನಾಗಿದ್ದರೆ ಸಾಕು, ಯಶಸ್ಸು ನಮ್ಮದಾಗುತ್ತದೆ. ಹೊರತಾಗಿ ಎಷ್ಟೇ ದೊಡ್ಡ ಬಜೆಟ್ ಸಿನಿಮಾ ಮಾಡಿದರೂ ಸಿನಿಮಾ ಯಶಸ್ವಿಯಾಗುವುದು ಕಷ್ಟ ಎಂಬುದನ್ನು ಸಾಬೀತು ಮಾಡಿ ತೋರಿದ್ದಾರೆ" ಎಂದು ತಿಳಿಸಿದ್ದಾರೆ.




**ಮೈಸೂರಿನ ಲೀಡೋ ಚಿತ್ರಮಂದಿರದಲ್ಲಿ ಸಂಭ್ರಮಾಚರಣೆ**

ನಟ ಶಿವರಾಜ್ ಕೆ.ಆರ್. ಪೇಟೆ ಮಾತನಾಡಿ, "ಎಲ್ಲರಿಗೂ ಮುಂಚಿತವಾಗಿ ನಾಡಹಬ್ಬ ದಸರೆಯ ಶುಭಾಶಯಗಳು. ಚಿತ್ರ ಯಶಸ್ವಿಗೊಳಿಸಿದ ಎಲ್ಲರಿಗೂ ಅಭಿನಂದನೆಗಳು" ಎಂದಿದ್ದಾರೆ. ಈ ವೇಳೆ ನಟ ಗಿರೀಶ್ ಶಿವಣ್ಣ ಸೇರಿದಂತೆ ಇನ್ನಿತರರು ಇದ್ದರು.

# ಗೋವಾದಲ್ಲಿ ಸಿನಿಮಾ ಕ್ಲೈಮ್ಯಾಕ್ಸ್ ಶೂಟಿಂಗ್ ವೇಳೆ ಅವಘಡ; ನಟ ವಿಶಾಲ್ ಗೆ ಗಾಯ!

**ಪಣಜಿ:** ಗೋವಾದಲ್ಲಿ ಸಿನಿಮಾ ಚಿತ್ರೀಕರಣ ವೇಳೆ ಅವಘಡ ಸಂಭವಿಸಿದ್ದು, ಖ್ಯಾತ ತಮಿಳು ನಟ ವಿಶಾಲ್‌ಗೆ ಗಾಯಗಳಾಗಿವೆ ಎಂದು ತಿಳಿದುಬಂದಿದೆ.

ಚಿತ್ರತಂಡದ ಮೂಲಗಳ ಪ್ರಕಾರ ನಟ ವಿಶಾಲ್ ಅಭಿನಯದ ಮತ್ತು ಸುಂದರ್ ಸಿ ನಿರ್ದೇಶನದ ಬಹು ನಿರೀಕ್ಷಿತ ಪುರುಷನ್ ಚಿತ್ರದ ಕ್ಲೈಮ್ಯಾಕ್ಸ್ ಚಿತ್ರೀಕರಣ ವೇಳೆ ಈ ಅವಘಡ ಸಂಭವಿಸಿದೆ ಎಂದು ಹೇಳಲಾಗಿದೆ.

ಈ ದುರ್ಘಟನೆಯಲ್ಲಿ ನಟ ವಿಶಾಲ್ ಅವರ ಬೆನ್ನಿಗೆ ಗಾಯವಾಗಿದ್ದು, ಸ್ಟಂಟ್ ಪ್ರದರ್ಶನ ಮಾಡುತ್ತಿದ್ದಾಗ ಬೆನ್ನಿಗೆ ಗಾಯ ಮಾಡಿಕೊಂಡಿದ್ದಾರೆ. ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಿಗೆ ಚಿಕಿತ್ಸೆ ನೀಡಿರುವ ವೈದ್ಯರು ಮೂರು ವಾರಗಳ ಕಡ್ಡಾಯ ವಿಶ್ರಾಂತಿಗೆ ಸೂಚಿಸಿದ್ದಾರೆ ಎನ್ನಲಾಗಿದೆ.



**ನಟ ಹೇಳಿದ್ದೇನು?:** ಇನ್ನು ಈ ಕುರಿತು ಹೇಳಿಕೆ ನೀಡಿರುವ ವಿಶಾಲ್, ತಾವು ಈವರೆಗೆ ಹಲವು ಸ್ಟಂಟ್‌ಗಳನ್ನು ಮಾಡಿದ್ದರೂ, ಈ ಬಾರಿ ನಡೆದದ್ದು ಅನಿರೀಕ್ಷಿತ ಅವಘಡವಾಗಿದೆ ಎಂದು ಹೇಳಿದ್ದಾರೆ. ಗಾಯದ ಬಳಿಕ ವೈದ್ಯರು ವಿಶಾಲ್ ಅವರನ್ನು ಸಂಪೂರ್ಣವಾಗಿ ಪರೀಕ್ಷಿಸಿದ್ದು, ಚೇತರಿಕೆಗೆ ಮೂರು ವಾರಗಳ ಕಾಲ ಸಂಪೂರ್ಣ ವಿಶ್ರಾಂತಿ ಪಡೆಯುವಂತೆ ಸೂಚಿಸಿದ್ದಾರೆ. ಹೀಗಾಗಿ, ನಟರ ಸಂಘ (ನಡಿಗರ್ ಸಂಗಂ) ಎಂದೂ ಕರೆಯಲಾಗುವ ಸೌತ್ ಇಂಡಿಯನ್ ಆರ್ಟಿಸ್ಟ್ ಅಸೋಸಿಯೇಷನ್‌ನ ಮುಂಬರುವ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಭಾಗವಹಿಸಲು ಸಾಧ್ಯವಾಗುವುದಿಲ್ಲ ಎಂದು ವಿಶಾಲ್ ತಿಳಿಸಿದ್ದಾರೆ. "ಇದು ಕಠಿಣ ವಾರವಾಗಿತ್ತು. ಬೆನ್ನು ನೋವಿನಿಂದಾಗಿ ನಡಿಗರ್ ಸಂಗಂನ ಅತ್ಯಂತ ಮಹತ್ವದ ೦ಱುಟನಲ್ಲಿ ಭಾಗವಹಿಸಲು ಸಾಧ್ಯವಾಗದಿರುವುದು ಬೇಸರ ಹಾಗೂ ಕಿರಿಕಿರಿ ಉಂಟುಮಾಡಿದೆ" ಎಂದು ವಿಶಾಲ್ ಹೇಳಿದ್ದಾರೆ.

## ಏಷ್ಯನ್ ಕ್ರೀಡಾಕೂಟ: ಮಹಿಳೆಯರ ಬಳಿಕ ಪುರುಷರ ತಂಡಕ್ಕೂ ಒಲಿದ ಚಿನ್ನ

# ಕಬಡ್ಡಿಯಲ್ಲಿ ಭಾರತಕ್ಕೆ ಡಬಲ್ ಧಮಾಕ!

ಏಷ್ಯನ್ ಕ್ರೀಡಾಕೂಟದಲ್ಲಿ ಕಬಡ್ಡಿ ಸ್ಪರ್ಧೆಯಲ್ಲಿ ಭಾರತ ಒಂದೇ ದಿನ ಎರಡೂ ಚಿನ್ನದ ಪದಕಗಳನ್ನು ಗೆದ್ದುಕೊಂಡಿತು. ಮೊದಲು ಭಾರತ ಮಹಿಳಾ ತಂಡವು ಫೈನಲ್‌ನಲ್ಲಿ ಇರಾನ್ ಅನ್ನು ಮಣಿಸಿ ಚಿನ್ನ ಗೆದ್ದುಕೊಂಡಿತು, ಇದಾದ ಸ್ವಲ್ಪ ಸಮಯದಲ್ಲೇ ಪುರುಷರ ತಂಡ ಸಹ ಇರಾನ್ ಅನ್ನು 40–34 ಅಂತರದಿಂದ ಮಣಿಸಿ ಚಿನ್ನದ ಪದಕಕ್ಕೆ ಕೊರಳೊಡ್ಡಿತು ಇದರೊಂದಿಗೆ ಒಂದೇ ದಿನ ಭಾರತ ಎರಡು ಚಿನ್ನದ ಪದಕ ಗೆದ್ದುಕೊಂಡಿತು.

ಹೀಗಿತ್ತು ಪಂದ್ಯ

ಈ ರಣರೋಚಕ ಫೈನಲ್‌ನಲ್ಲಿ ಮೊದಲಾರ್ಧದಲ್ಲಿ ಇರಾನ್ ಪ್ರಬಲ ಪೈಪೋಟಿ ನೀಡಿತು, ಆದಾಗ್ಯೂ ಭಾರತ 18–17 ಅಂತರದಿಂದ ಮುನ್ನಡೆ ಸಾಧಿಸಿತು. ಎರಡೂ ತಂಡಗಳು ಪ್ರತಿ ಪಾಯಿಂಟ್‌ಗಾಗಿ ಶ್ರಮಿಸಿದ್ದರಿಂದ ಪಂದ್ಯ ಮತ್ತಷ್ಟು ರೋಚಕ ಪಡೆದುಕೊಂಡಿತು. ದ್ವಿತೀಯಾರ್ಧದಲ್ಲಿ ಭಾರತೀಯ ಆಟಗಾರರು ತಮ್ಮ ತಂತ್ರವನ್ನು ಬದಲಾಯಿಸಿದರು. ನಾಯಕ ಸುನಿಲ್ ಕುಮಾರ್ ನೇತೃತ್ವದಲ್ಲಿ ತಂಡವು ಗಮನಾರ್ಹ ಪುನರಾಗಮನ ಮಾಡಿತು.

ಅರ್ಜುನ್ ದೇಶ್ವಾಲ್, ಅಸ್ಲಾಂ ಇನಾಮ್ದಾರ್ ಮತ್ತು ಉಳಿದ ರೈಡರ್‌ಗಳು ಬುದ್ಧಿವಂತಿಕೆಯಿಂದ ಆಟವಾಡಿ ಅಂಕಗಳನ್ನು ಕಲೆಹಾಕುತ್ತ ಇರಾನಿನ ಮೇಲೆ ಒತ್ತಡ ಹೇರಲು ಪ್ರಾರಂಭಿಸಿದರು. ಪಂದ್ಯದ ಕೊನೆಯ ಕೆಲವು ನಿಮಿಷಗಳಲ್ಲಿ, ಭಾರತೀಯ ರಕ್ಷಣಾ ತಂಡವು ಅದ್ಭುತ ಪ್ರದರ್ಶನ ನೀಡಿ, ಇರಾನ್ ಅನ್ನು ಆಲ್ ಔಟ್ ಮಾಡಿ, ಭಾರತಕ್ಕೆ ಸುರಕ್ಷಿತ ಮುನ್ನಡೆಯನ್ನು ನೀಡಿತು. ಅಂತಿಮವಾಗಿ 40–35 ಅಂಕಗಳಿಂದ ಪಂದ್ಯದ ಜೊತೆಗೆ ಚಿನ್ನದ ಪದಕವನ್ನೂ ಗೆದ್ದುಕೊಂಡಿತು.







**ಕಬಡ್ಡಿಯಲ್ಲಿ ಭಾರತಕ್ಕೆ 9ನೇ ಚಿನ್ನ:** 1990 ರಿಂದ 2026ರವರೆಗೆ ನಡೆದ ಏಷ್ಯನ್ ಕ್ರೀಡಾಕೂಟದ 10 ಸ್ಪರ್ಧೆಗಳಲ್ಲಿ ಭಾರತ ಪುರುಷರ ಕಬಡ್ಡಿ ತಂಡ ಒಟ್ಟು 9 ಬಾರಿ ಚಿನ್ನ ಗೆದ್ದುಕೊಂಡಿದೆ. 1990, 1994, 1998, 2002, 2006, 2010, 2014, 2023, 2026ರಲ್ಲಿ ಈ ಸಾಧನೆ ಮಾಡಿದೆ. ಆದರೆ 2018ರಲ್ಲಿ ಮಾತ್ರ ಪದಕ ಗೆಲ್ಲುವ ಅವಕಾಶವನ್ನು ಕಳೆದುಕೊಂಡಿತು.

**ಭಾರತಕ್ಕೆ ನಾಲ್ಕನೇ ಚಿನ್ನದ ಪದಕ:** ಏತನ್ಮಧ್ಯೆ ಪ್ರಸ್ತುತ ಆವೃತ್ತಿಯ ಏಷ್ಯನ್ ಕ್ರೀಡಾಕೂಟದಲ್ಲಿ ಭಾರತಕ್ಕೆ ದೊರೆತ ನಾಲ್ಕನೇ ಚಿನ್ನದ ಪದಕ ಇದಾಗಿದೆ. ಮೊದಲ ಪದಕ ಮಹಿಳಾ ಕ್ರಿಕೆಟ್ ತಂಡ ಗೆದ್ದುಕೊಂಡಿದ್ದರೆ, ನಂತರ ಶೂಟಿಂಗ್ ಮಿಶ್ರ ತಂಡ ಮತ್ತು ಪುರುಷ ಮತ್ತು ಮಹಿಳಾ ಕಬಡ್ಡಿ ತಂಡಗಳು ಈಸಾಧನೆ ಮಾಡಿದವು.

**ಭಾರತ ಮಹಿಳಾ ತಂಡಕ್ಕೂ ಸಿಕ್ಕ ಚಿನ್ನ:** ಈ ಪಂದ್ಯಕ್ಕೂ ಮುನ್ನ ನಡೆದಿದ್ದಮಹಿಳಾ ಕಬಡ್ಡಿ ತಂಡವು ಫೈನಲ್‌ನಲ್ಲಿ ಭಾರತ ತಂಡ ಇರಾನ್ ಅನ್ನು 37–34 ಅಂಕಗಳಿಂದ ಮಣಿಸುವ ಮೂಲಕ ಚಿನ್ನದ ಪದಕ ಗೆದ್ದಿತು. ಈ ಪಂದ್ಯ ಸಹ ತೀವ್ರ ಪೈಪೋಟಿಯಿಂದ ಕೂಡಿತ್ತು. ಆರಂಭದಲ್ಲಿ, ಎರಡೂ ತಂಡಗಳು ಪರಸ್ಪರ ಪ್ರಾಬಲ್ಯ ಸಾಧಿಸಿದಂತೆ ಕಂಡುಬಂದರೂ, ಕೊನೆಯಲ್ಲಿ ಭಾರತ ಮೇಲುಗೈ ಸಾಧಿಸಿತು.

**ಪದಕ ಪಟ್ಟಿಯಲ್ಲಿ ಏರಿಕೆ ಕಂಡ ಭಾರತ:** ಏಷ್ಯನ್ ಕ್ರೀಡಾಕೂಟ 2026ರಲ್ಲಿ ಭಾರತದ ಒಟ್ಟು ಪದಕಗಳ ಸಂಖ್ಯೆ 28 ತಲುಪಿದೆ. ಎರಡು ಚಿನ್ನದೊಂದಿಗೆ ಪದಕ ಪಟ್ಟಿಯಲ್ಲಿ ಭಾರತ 10ನೇ ಸ್ಥಾನಕ್ಕೆ ತಲುಪಿದೆ. ನಾಲ್ಕು ಚಿನ್ನದ ಪದಕಗಳ ಜೊತೆಗೆ, 11 ಬೆಳ್ಳಿ ಮತ್ತು 13 ಕಂಚಿನ ಪದಕಗಳು ಸೇರಿವೆ. ಕಳೆದ ಏಷ್ಯನ್ ಕ್ರೀಡಾಕೂಟದಲ್ಲಿ, ಭಾರತೀಯ ತಂಡವು ಒಟ್ಟು 107 ಪದಕಗಳನ್ನು ಗೆದ್ದಿದೆ. ಈ ಬಾರಿ ಭಾರತ ತನ್ನ ಹಿಂದಿ ದಾಖಲೆಯನ್ನು ಮುರಿಯಬಹುದೇ ಎಂದು ಕಾದು ನೋಡಬೇಕಿದೆ.

# ಹಾಕಿ ಸತತ ನಾಲ್ಕನೇ ಪಂದ್ಯ ಗೆದ್ದು ಸೆಮಿಫೈನಲ್ ತಲುಪಿದ ಭಾರತ

ಭಾರತ ಪುರುಷರ ಹಾಕಿ ತಂಡವು ಜಪಾನ್ ವಿರುದ್ಧ 2–0 ಅಂತರದ ಗೆಲುವಿನೊಂದಿಗೆ 2026ರ ಏಷ್ಯನ್ ಗೇಮ್ಸ್‌ನಲ್ಲಿ ಸೆಮಿಫೈನಲ್‌ಗೆ ಅರ್ಹತೆ ಪಡೆದುಕೊಂಡಿದೆ. ಭಾರತ ತಂಡವು ಟೂರ್ನಿಯಲ್ಲಿ ಸತತ ನಾಲ್ಕನೇ ಪಂದ್ಯವನ್ನು ಗೆಲ್ಲುವ ಮೂಲಕ ತನ್ನ ಅಜೇಯ ಓಟವನ್ನು ಮುಂದುವರೆಸಿದೆ. ಸೆಮಿಫೈನಲ್‌ಗೆ ಮೊದಲು ತನ್ನ ಕೊನೆಯ ಗುಂಪು ಪಂದ್ಯವನ್ನು ಬಾಂಗ್ಲಾದೇಶದ ವಿರುದ್ಧ ಆಡಲಿದೆ. ಈ ಪಂದ್ಯದಲ್ಲೂ ಭಾರತ ತಂಡವನ್ನು ಪ್ರಬಲ ಸ್ಪರ್ಧಿ ಎಂದು ಪರಿಗಣಿಸಲಾಗಿದೆ.

**ಹೀಗಿತ್ತು ಪಂದ್ಯ:** ಅಭಿಷೇಕ್ ಜಪಾನ್ ವಿರುದ್ಧ 15ನೇ ನಿಮಿಷದಲ್ಲಿ ಫೀಲ್ಡ್ ಗೋಲ್ ಗಳಿಸಿದರೆ, ನಾಯಕ ಹರ್ಮನ್‌ಪ್ರೀತ್ ಸಿಂಗ್ 40ನೇ ನಿಮಿಷದಲ್ಲಿ ಪೆನಾಲ್ಟಿ ಕಾರ್ನರ್ ಅನ್ನು ಗೋಲಾಗಿ ಪರಿವರ್ತಿಸಿದರು. ಜಪಾನ್ ತಂಡ ತನ್ನ ಆಕ್ರಮಣಕಾರಿ ಆಟದ ಮೂಲಕ ಭಾರತಕ್ಕೆ ಕಠಿಣ ಹೋರಾಟ ನೀಡಿತಾದರೂ ಗೋಲು ಗಳಿಸಲು ಸಾಧ್ಯವಾಗಲಿಲ್ಲ. 17 ನೇ ನಿಮಿಷದಲ್ಲಿ ಜಪಾನ್ ತನ್ನ ಎರಡನೇ ಪೆನಾಲ್ಟಿ ಕಾರ್ನರ್ ಅನ್ನು ಗಳಿಸಿತು, ಆದರೆ ಭಾರತ ಅದನ್ನು ವಿಫಲಗೊಳಿಸಿತು. ನಾಲ್ಕನೇ ಕ್ವಾರ್ಟರ್‌ನಲ್ಲಿ ಭಾರತೀಯರು ಪ್ರಾಬಲ್ಯ ಸಾಧಿಸಿದರು ಮತ್ತು ತ್ವರಿತವಾಗಿ ನಾಲ್ಕು ಪೆನಾಲ್ಟಿ ಕಾರ್ನರ್‌ಗಳನ್ನು ಗಳಿಸಿದರು, ಆದರೆ ಜಪಾನ್‌ನ ಬಲವಾದ ರಕ್ಷಣೆಯ ವಿರುದ್ಧ ಅವುಗಳನ್ನು ಗೋಲಾಗಿ ಪರಿವರ್ತಿಸುವಲ್ಲಿ ವಿಫಲರಾದರು. ಅಂತಿಮವಾಗಿ 2–0 ಅಂತರದಿಂದ ಪಂದ್ಯವನ್ನು ಕೊನೆಗೊಳಿಸಿತು.

**28ಕ್ಕೆ ತಲುಪಿದ ಪದಕ ಸಂಖ್ಯೆ**

ಏಷ್ಯನ್ ಕ್ರೀಡಾಕೂಟ 2026ರಲ್ಲಿ ಭಾರತದ ಒಟ್ಟು ಪದಕಗಳ ಸಂಖ್ಯೆ 28 ತಲುಪಿದೆ. ಇಂದು ಎರಡು ಚಿನ್ನದೊಂದಿಗೆ ಪದಕ ಪಟ್ಟಿಯಲ್ಲಿ ಭಾರತ 10ನೇ ಸ್ಥಾನಕ್ಕೆ ತಲುಪಿದೆ. ನಾಲ್ಕು ಚಿನ್ನದ ಪದಕಗಳ ಜೊತೆಗೆ, 11 ಬೆಳ್ಳಿ ಮತ್ತು 13 ಕಂಚಿನ ಪದಕಗಳು ಸೇರಿವೆ. ಕಳೆದ ಏಷ್ಯನ್ ಕ್ರೀಡಾಕೂಟದಲ್ಲಿ, ಭಾರತೀಯ ತಂಡವು ಒಟ್ಟು 107 ಪದಕಗಳನ್ನು ಗೆದ್ದಿದೆ. ಈ ಬಾರಿ ಭಾರತ ತನ್ನ ಹಿಂದಿನ ದಾಖಲೆಯನ್ನು ಮುರಿಯಬಹುದೇ ಎಂದು ಕಾದು ನೋಡಬೇಕಿದೆ.



'ಎ' ಗುಂಪಿನಲ್ಲಿ ಅಗ್ರಸ್ಥಾನದಲ್ಲಿ ಭಾರತ ತಂಡ

ಹರ್ಮನ್‌ಪ್ರೀತ್ ಸಿಂಗ್ ನಾಯಕತ್ವದ ಭಾರತ ತಂಡ ಇದುವರೆಗಿನ ಆಡಿರುವ ತನ್ನ ನಾಲ್ಕು ಪಂದ್ಯಗಳಲ್ಲಿಯೂ ಜಯಗಳಿಸಿದೆ. ತಂಡವು ಈ ನಾಲ್ಕು ಪಂದ್ಯಗಳಲ್ಲಿ ಒಟ್ಟು 39 ಗೋಲುಗಳನ್ನು ಗಳಿಸಿದ್ದು, ಕೇವಲ ನಾಲ್ಕು ಗೋಲುಗಳನ್ನು ಮಾತ್ರ ಬಿಟ್ಟುಕೊಟ್ಟಿದೆ. ಜಪಾನ್ ವಿರುದ್ಧದ ಗೆಲುವಿನೊಂದಿಗೆ, ಭಾರತವು ಪೂಲ್ ಎ ನಲ್ಲಿ ಅಗ್ರಸ್ಥಾನ ದೊಂದಿಗೆ ಸೆಮಿಫೈನಲ್‌ನಲ್ಲಿ ಸ್ಥಾನ ಪಡೆದುಕೊಂಡಿತು.

ಇಂಡೋನೇಷ್ಯಾ–ಶ್ರೀಲಂಕಾ, ದಕ್ಷಿಣ ಕೊರಿಯಾ ವಿರುದ್ಧ ಗೆಲುವು ಭಾರತ ತನ್ನ ಏಷ್ಯನ್ ಕ್ರೀಡಾಕೂಟದ ಅಭಿಯಾನವನ್ನು ಇಂಡೋನೇಷ್ಯಾ ವಿರುದ್ಧ ಆರಂಭಿಸಿತು, ಅಲ್ಲಿ 13–1 ಅಂತರದಿಂದ ಜಯಗಳಿಸಿತು. ನಂತರ ಭಾರತ ಶ್ರೀಲಂಕಾ ವಿರುದ್ಧ 16–1 ಅಂತರದ ಗೆಲುವು ಸಾಧಿಸಿತು. ಮೂರನೇ ಪಂದ್ಯದಲ್ಲಿ ದಕ್ಷಿಣ ಕೊರಿಯಾ ವಿರುದ್ಧ 8–2 ಅಂತರದ ಗೆಲುವು ಸಾಧಿಸಿತು. 100 ಅಂತರಾಷ್ಟ್ರೀಯ ಪಂದ್ಯಗಳನ್ನು ಪೂರ್ಣಗೊಳಿಸಿದ ಹಾಕಿ ಆಟಗಾರ ಸಂಜಯ್ 2026ರ ಏಷ್ಯನ್ ಗೇಮ್ಸ್‌ನಲ್ಲಿ ಜಪಾನ್ ವಿರುದ್ಧದ ಪಂದ್ಯದ ಸಮಯದಲ್ಲಿ ಭಾರತೀಯ ಹಾಕಿ ಆಟಗಾರ ಸಂಜಯ್ 100 ಅಂತರಾಷ್ಟ್ರೀಯ ಪಂದ್ಯಗಳನ್ನು ಪೂರ್ಣಗೊಳಿಸಿದರು. ಹಾಕಿ ಇಂಡಿಯಾ ಸಾಮಾಜಿಕ ಮಾಧ್ಯಮ ಪೋಸ್ಟ್ ಮೂಲಕ ಸಂಜಯ್ ಅವರ ಈ ಸಾಧನೆಗೆ ಅಭಿನಂದನೆ ಸಲ್ಲಿಸಿತು.

# ವೆಸ್ಟ್ ಇಂಡೀಸ್ ವಿರುದ್ಧ ಟಾಸ್ ಗೆದ್ದ ಭಾರತ; ಯುವ ಆಟಗಾರ ಪಾದರ್ಪಣೆ

ವೆಸ್ಟ್ ಇಂಡೀಸ್ ಮತ್ತು ಭಾರತ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿ ಇಂದಿನಿಂದ ಪ್ರಾರಂಭಗೊಳ್ಳಲಿದೆ. ತಿರುವನಂತಪುರಂನಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ ಟೀಮ್ ಇಂಡಿಯಾ ನಾಯಕ ಶುಭ್‌ಮನ್ ಗಿಲ್ ಟಾಸ್ ಗೆದ್ದು ಮೊದಲಿಗೆ ಬೌಲಿಂಗ್ ಆಯ್ಕೆ ಮಾಡಿಕೊಂಡಿದ್ದಾರೆ. ಈ ಪಂದ್ಯದ ಮೂಲಕ ನಮನ್ ಧೀರ್ ಏಕದಿನ ಸ್ವರೂಪಕ್ಕೆ ಪಾದಾರ್ಪಣೆ ಮಾಡಲಿದ್ದಾರೆ. ಮತ್ತೊಂದೆಡೆ ದೀರ್ಘ ಸಮಯದ ಬಳಿಕ ಹಿರಿಯ ಆಟಗಾರ ರವೀಂದ್ರ ಜಡೇಜಾ ತಂಡಕ್ಕೆ ಮರಳಿದ್ದಾರೆ.

**ಮುಖಾಮುಖಿ ದಾಖಲೆ:** ಭಾರತ ಮತ್ತು ವೆಸ್ಟ್ ಇಂಡೀಸ್ ತಂಡಗಳು ಏಕದಿನ ಕ್ರಿಕೆಟ್ ಇತಿಹಾಸದಲ್ಲಿ 142 ಬಾರಿ ಮುಖಾಮುಖಿಯಾಗಿವೆ. ಆರಂಭಿಕ ದಿನಗಳಲ್ಲಿ ವೆಸ್ಟ್ ಇಂಡೀಸ್ ಪ್ರಾಬಲ್ಯ ಸಾಧಿಸಿದ್ದರೂ, ಕಳೆದ ಎರಡು ದಶಕಗಳಲ್ಲಿ ಭಾರತ ಅಜೇಯ ಪ್ರಾಬಲ್ಯ ಕಾಯ್ದುಕೊಂಡಿದೆ. ಭಾರತ 72 ಪಂದ್ಯಗಳನ್ನು ಮತ್ತು ವೆಸ್ಟ್ ಇಂಡೀಸ್ 64 ಪಂದ್ಯಗಳನ್ನು ಗೆದ್ದಿದ್ದು, 6 ಪಂದ್ಯಗಳು ಡ್ರಾದಲ್ಲಿ ಕೊನೆಗೊಂಡಿವೆ.

**ಪಿಚ್ ವರದಿ:** ತಿರುವನಂತಪುರಂ ಮೈದಾನವು ವೇಗದ ಬೌಲಿಂಗ್‌ಗೆ ಅನುಕೂಲಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದ್ದರೂ, ಹಿಂದೆ ವೆಸ್ಟ್ ಇಂಡೀಸ್‌ನ ಸ್ಪಿನ್ ಬೌಲಿಂಗ್‌ಗೆ ಇಲ್ಲಿ ಅದ್ಭುತ ಪ್ರದರ್ಶನ ನೀಡಿತ್ತು. ಬ್ಯಾಟಿಂಗ್ ಲೈನ್‌ಅಪ್ ಮತ್ತು ತವರು ನೆಲದ ಅನುಕೂಲವು ಭಾರತ ತಂಡಕ್ಕೆ ಹೆಚ್ಚುವರಿ ಪ್ರಯೋಜನೆ ನೀಡಲಿದ್ದರೂ, ಟಿ20 ಶೈಲಿಯ ಆಕ್ಷನ್ ಆಟಗಾರರನ್ನು ಹೊಂದಿರುವ ವೆಸ್ಟ್ ಇಂಡೀಸ್ ತಂಡವು ಯಾವುದೇ ಸಮಯದಲ್ಲಿ ಆಟದ ಪಥವನ್ನು ಬದಲಾಯಿಸುವ ಶಕ್ತಿಯನ್ನು ಹೊಂದಿದೆ.



ವೆಸ್ಟ್ ಇಂಡೀಸ್ ಮಧ್ಯಮ ಕ್ರಮಾಂಕದ ಬ್ಯಾಟಿಂಗ್‌ನ ಶಕ್ತಿ ಶೈ ಹೋಪ್ ಆಗಿದ್ದಾರೆ, ಆದಾಗ್ಯೂ ಇತರ ಆಟಗಾರರ ಫಾರ್ಮ್ ಬಗ್ಗೆ ಕಳವಳಗಳಿವೆ. ಆದಾಗ್ಯೂ, ಶೆರ್ಫೇನ್ ರುದರ್‌ಫೋರ್ಡ್, ರೋಸ್ಟನ್ ಚೇಸ್ ಮತ್ತು ಜಾನ್ ಕ್ಯಾಂಪ್‌ಬೆಲ್‌ರಂತಹ ಅನುಭವಿ ಆಟಗಾರರ ಉಪಸ್ಥಿತಿಯು ತಂಡದ ವಿಶ್ವಾಸವನ್ನು ಹೆಚ್ಚಿಸಿದೆ. ಇದರಿಂದಾಗಿ, ಈ ಪಂದ್ಯದಲ್ಲಿ ಯಾವ ತಂಡ ಗೆಲ್ಲಲಿದೆ ಎಂಬ ಆಸಕ್ತಿ ಹೆಚ್ಚಾಗಿದೆ.

**ನೇರಪ್ರಸಾರ:** ಭಾರತ–ವೆಸ್ಟ್ ಇಂಡೀಸ್ ಏಕದಿನ ಪಂದ್ಯವು ಭಾರತೀಯ ಕಾಲಮಾನ ಮಧ್ಯಾಹ್ನ 2 ಗಂಟೆಗೆ ಆರಂಭವಾಗಲಿದೆ. ಭಾರತೀಯ ಅಭಿಮಾನಿಗಳು ಪಂದ್ಯವನ್ನು ಸ್ಟಾರ್ ಸ್ಪೋರ್ಟ್ಸ್ ಮತ್ತು ಡಿಡಿ ಸ್ಪೋರ್ಟ್ಸ್‌ನಲ್ಲಿ ನೇರಪ್ರಸಾರ ವೀಕ್ಷಿಸಬಹುದು, ಆದರೆ ಆನ್‌ಲೈನ್‌ನಲ್ಲಿ ವೀಕ್ಷಿಸಲು ಬಯಸುವ ಅಭಿಮಾನಿಗಳು ಜಿಯೋ–ಹಾಟ್‌ಸ್ಟಾರ್‌ನಲ್ಲಿ ಪಂದ್ಯವನ್ನು ವೀಕ್ಷಿಸಬಹುದು.

**ಅಂತಿಮ ತಂಡಗಳು–ಭಾರತ:** ರೋಹಿತ್ ಶರ್ಮಾ, ಶುಭಮನ್ ಗಿಲ್ (ನಾ), ವಿರಾಟ್ ಕೊಹ್ಲಿ, ರುತುರಾಜ್ ಗಾಯಕ್ವಾಡ್, ಕೆಎಲ್ ರಾಹುಲ್ (ವಿ.ಕೀ), ನಮನ್ ಧೀರ್, ರವೀಂದ್ರ ಜಡೇಜಾ, ನಿತೀಶ್ ಕುಮಾರ್ ರೆಡ್ಡಿ, ಗುರ್ನೂರ್ ಬ್ರಾರ್, ಕುಲದೀಪ್ ಯಾದವ್, ಪ್ರಸಿದ್ಧ್ ಕೃಷ್ಣ.

**ವೆಸ್ಟ್ ಇಂಡೀಸ್:** ಜಾನ್ ಕ್ಯಾಂಪ್‌ಬೆಲ್, ಜಸ್ಟಿನ್ ಗ್ರೀವ್ಸ್, ಕೀಸಿ ಕಾರ್ಟಿ, ಶಾಯ್ ಹೋಪ್ (ವಿಕೆಟ್ ಕೀಪರ್/ನಾಯಕ), ಅಮೀರ್ ಜಂಗೂ, ಜುವೆಲ್ ಆಂಡ್ರ್ಯೂ, ರೋಸ್ಟನ್ ಚೇಸ್, ಮ್ಯಾಥ್ಯೂ ಫೋರ್ಡ್, ಗುಡಕೇಶ್ ಮೋಟಿ, ಅಲ್ಜಾರಿ ಜೋಸೆಫ್, ಜೇಡನ್ ಸೀಲ್ಸ್.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper. udayavahini.in www.udayavahini.in Udaya vahini news Udaya vahini news